24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 13 | ನವದೆಹಲಿ | ಬೆಲೆ ₹10 | ಜುಲೈ 9 2026, ಗುರುವಾರ



## ಮುಖ್ಯಮಂತ್ರಿಗಳ ನೂತನ ಮಾಧ್ಯಮ ಕಾರ್ಯದರ್ಶಿಗಳಿಗೆ ಹಾರ್ದಿಕ ಅಭಿನಂದನೆಗಳು





■ **ಪಿ. ತ್ಯಾಗರಾಜ್,**
ಮುಖ್ಯಮಂತ್ರಿಯವರ ಮಾಧ್ಯಮ ಕಾರ್ಯದರ್ಶಿ - 1



■ **ಆರ್. ಜಯಪ್ರಕಾಶ್,**
ಮುಖ್ಯಮಂತ್ರಿಯವರ ಮಾಧ್ಯಮ ಕಾರ್ಯದರ್ಶಿ - 2



■ **ರಾಘವೇಂದ್ರ ಭಟ್,**
ಮುಖ್ಯಮಂತ್ರಿಯವರ ಮಾಧ್ಯಮ ಕಾರ್ಯದರ್ಶಿ - 3

ಇವರ ಅವಧಿಯಲ್ಲಿ ಮಾಧ್ಯಮ ಕ್ಷೇತ್ರದ ಅಭಿವೃದ್ಧಿಗೆ ಪೂರಕವಾದ ಕ್ರಮಗಳು ಜಾರಿಯಾಗಲಿ ಹಾಗೂ ಪತ್ರಕರ್ತರ ಸಮಸ್ಯೆಗಳಿಗೆ ಸ್ಪಂದಿಸುವ ಕೆಲಸಕ್ಕೆ ಹೆಚ್ಚಿನ ಆದ್ಯತೆ ದೊರೆಯಲಿ. ಸರ್ಕಾರ ಮತ್ತು ಮಾಧ್ಯಮಗಳ ನಡುವೆ ಸಮನ್ವಯವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಮೂವರು ಮಾಧ್ಯಮ ಕಾರ್ಯದರ್ಶಿಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಿ, ಪತ್ರಕರ್ತರ ಹಿತಾಸಕ್ತಿಗೆ ಸಹಕಾರಿಯಾಗುವ ನಿರ್ಧಾರಗಳನ್ನು ಕೈಗೊಳ್ಳಲಿ ಎಂದು ಹಾರೈಸುತ್ತೇವೆ.

**ಶುಭಕೋರುವವರು : ಹಿತೈಷಿಗಳು ಮತ್ತು ಗೆಳೆಯರ ಬಳಗ
ಹಾಗೂ ಸಮಸ್ತ ಮಾಧ್ಯಮ ಕ್ಷೇತ್ರದ ಸಹೋದ್ಯೋಗಿಗಳು, ನವದೆಹಲಿ, ಬೆಂಗಳೂರು, ಕರ್ನಾಟಕ**

## ನಿತ್ಯ ಪಂಚಾಂಗ 9.07.2026 ಗುರುವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ – ಜ್ಯೇಷ್ಠ ಮಾಸ

ನಿಜ ಜ್ಯೇಷ್ಠ ಬಹುಳ, ದಶಮಿ,
ಅಶ್ವಿನಿ ನಕ್ಷತ್ರ,
ಕೊಪ್ಪಳ ಗವಿಮಠ ಮರಿಶಾಂತವೀರ ಪುಣ್ಯಾರಾಧನೆ,
ಹುನಗುಂದ|ಕಡಿವಾಲ ಕೋಡಿಹಾಳ ಶಾಂತೇಶ ರಥಸ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ.5.04–6.33 | 12.00–1.30 | 3.00–4.00 |
| ಸೋಮ | ಬೆ.7.20–9.04 | 10.30–12.00 | 1.30–12.00 |
| ಮಂಗಳ | ಮ.3.25–4.59 | 9.00–10.30 | 12.00–1.30 |
| ಬುಧ | ಮ.12.16–1.50 | 7.30–9.00 | 10.30–12.00 |
| ಗುರು | ಮ.1.50–3.29 | 6.00–7.30 | 9.00–10.30 |
| ಶುಕ್ರ | ಬೆ.10.42–12.16 | 3.00–4.30 | 7.30–9.00 |
| ಶನಿ | ಬೆ.9.07–10.41 | 1.30–3.00 | 6.00–7.30 |

## ಮಳೆ ಕೊರತೆ; ರೈತರ ಸಂಕಷ್ಟಕ್ಕೆ ಸ್ಪಂದಿಸಿ ಸರ್ಕಾರಕ್ಕೆ ಬಿ.ವೈ.ವಿಜಯೇಂದ್ರ ಆಗ್ರಹ

**ಬೆಂಗಳೂರು, ಜು.8:** ರಾಜ್ಯದ ವಿವಿಧ ಭಾಗದಲ್ಲಿ ಮಳೆಯ ತೀವ್ರ ಕೊರತೆ ಎದುರಾಗಿದೆ. ಇದರಿಂದ ಅನ್ನದಾತರು ತೊಂದರೆಗೆ ಸಿಲುಕಿದ್ದಾರೆ. ರೈತರ ಸಂಕಷ್ಟಕ್ಕೆ ಸ್ಪಂದಿಸಬೇಕಾದ ಮಹತ್ವದ ಜವಾಬ್ದಾರಿ ರಾಜ್ಯ ಸರ್ಕಾರದ ಮೇಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರೈತರ ಸಾಲ ಮನ್ನಾ ಕುರಿತ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಹೇಳಿಕೆಯನ್ನು ಗಮನಿಸಿದ್ದೇನೆ. ರೈತರಿಗೆ ಈ ಸರ್ಕಾರ ಪ್ರಾಮಾಣಿಕವಾಗಿ ಸ್ಪಂದಿಸುತ್ತದೋ ಇಲ್ಲವೋ ಎಂಬುದನ್ನು ನೋಡುತ್ತೇವೆ. ಈ ಬಗ್ಗೆ ಸದನದಲ್ಲಿ ಚರ್ಚೆ ಸಹ ಮಾಡುತ್ತೇವೆ ಎಂದರು. ಮುಖ್ಯಮಂತ್ರಿಗಳು ಸಾಲಮನ್ನಾದ ಹೇಳಿಕೆ ನೀಡಿ ಮೊಸಳೆ ಕಣ್ಣೀರು ಹಾಕುತ್ತಾರೋ ಇಲ್ಲವೇ ನಿಜವಾಗಿ ರೈತರಿಗೆ ನೆರವಿಗೆ ಮುಂದಾಗುತ್ತಾರೋ ನೋಡಬೇಕು ಎಂದು ಹೇಳಿದರು.

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೂರು ವರ್ಷದಲ್ಲಿ ರೈತರ ಸಂಕಷ್ಟಕ್ಕೆ ಮಿಡಿಯಲಿಲ್ಲ. ಬರ ಬಂದಾಗ ಸೂಕ್ತ ಪರಿಹಾರ ನೀಡಿಲ್ಲ. ಎಲ್ಲಕ್ಕೂ ಕೇಂದ್ರ ಸರ್ಕಾರವನ್ನು ದೂರುವುದು ಬಿಟ್ಟರೆ ಬೇರೆ ಏನೂ ಮಾಡಲಿಲ್ಲ ಎಂದರು.

## ಎಸ್‌ಐಆರ್: ರಾಜ್ಯದಲ್ಲಿ ಶೇ.80 ಎಸ್.ಐ.ಆರ್ ಅರ್ಜಿ ವಿತರಣೆ ಪೂರ್ಣ




**ಬೆಂಗಳೂರು, ಜು.8:** ರಾಜ್ಯಾದ್ಯಂತ ಸದ್ಯ ಮತಪಟ್ಟಿ ಸಮಗ್ರ ಪರಿಷ್ಕರಣಾ ಪ್ರಕ್ರಿಯೆ ಅತ್ಯಂತ ವೇಗವಾಗಿ ಪ್ರಗತಿ ಕಾಣುತ್ತಿದ್ದು, ಒಟ್ಟು 5.54 ಕೋಟಿಗೂ ಅಧಿಕ ನಾಗರಿಕರಿಗೆ ಅರ್ಜಿಗಳನ್ನು ತಲುಪಿಸುವ ಗುರಿ ಹೊಂದಲಾಗಿದೆ. ಈ ಪೈಕಿ ಈಗಾಗಲೇ ಸುಮಾರು ಶೇಕಡಾ 80.85 ರಷ್ಟು ವಿತರಣಾ ಪ್ರಕ್ರಿಯೆ ಪೂರ್ಣಗೊಂಡಿದೆ ಎಂದು ಕರ್ನಾಟಕದ ಮುಖ್ಯ ಚುನಾವಣಾ ಅಧಿಕಾರಿ ಅನ್ಬುಕುಮಾರ್ ಅವರು ಪ್ರಕಟಿಸಿದ್ದಾರೆ. ಈ ಮಹತ್ವದ ಅಭಿಯಾನ ಜುಲೈ 29 ರವರೆಗೆ ಸಾರ್ವಜನಿಕರಿಗೆ ಮುಕ್ತವಾಗಿರಲಿದ್ದು, ಪ್ರತಿಯೊಬ್ಬ ಅರ್ಹ ನಾಗರಿಕರು ಇದರಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕೆಂದು ಅವರು ಕೋರಿದ್ದಾರೆ.

ಇನ್ನು ಅರ್ಜಿಗಳನ್ನು ಕಡ್ಡಾಯವಾಗಿ ಮನೆ ಮನೆಗೆ ಭೇಟಿ ನೀಡಿ ವಿತರಿಸಬೇಕೇ ಹೊರತು ಯಾವುದೇ ಕಾರಣಕ್ಕೂ ಸಾರಾಸಗಟಾಗಿ ಒಂದೇ ಸ್ಥಳದಲ್ಲಿ ಒಟ್ಟಿಗೆ ನೀಡುವಂತಿಲ್ಲ ಎಂದು ಬಿಎಲ್‌ಒಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಸಾರ್ವಜನಿಕರು ಆನ್‌ಲೈನ್ ಮೂಲಕವೂ ಅರ್ಜಿ ಸಲ್ಲಿಸಬಹುದಾಗಿದ್ದು, ಇಂಟರ್ನೆಟ್ ಮೂಲಕ ನೋಂದಾಯಿಸಿದರೆ ಅದು ನೇರವಾಗಿ ಬಿಎಲ್‌ಒ ಲಾಗಿನ್‌ಗೆ ವರ್ಗಾವಣೆಯಾಗುವುದರಿಂದ ಮತ್ತೆ ಭೌತಿಕವಾಗಿ ಫಾರಂ ತುಂಬಿ ಕೊಡುವ ಅಗತ್ಯವಿರುವುದಿಲ್ಲ. ಹಿಂದೆ ಹೆಸರು ಬಿಟ್ಟುಹೋಗಿದ್ದರೂ ಸಹ ಈಗ ಹೊಸದಾಗಿ ಮತ್ತೊಮ್ಮೆ ವಿವರಗಳನ್ನು ಸಲ್ಲಿಸಲು ಮುಕ್ತ ಅವಕಾಶ ಕಲ್ಪಿಸಲಾಗಿದೆ.

ಮತದಾರರ ಚೀಟಿಯಲ್ಲಿ ಹೆಸರು ಅಥವಾ ವಿಳಾಸ ತಿದ್ದುಪಡಿ ಮಾಡಬೇಕಿದ್ದಲ್ಲಿ ಅರ್ಜಿ ನಮೂನೆ 8 ಅನ್ನು ಬಳಸಬೇಕಾಗಿದ್ದು, ಇದನ್ನು ಜುಲೈ 29 ರೊಳಗೆ ಅಥವಾ ಆಗಸ್ಟ್ 5 ರ ನಂತರ ಸಲ್ಲಿಸಬಹುದಾಗಿದೆ. ಇದೇ ವೇಳೆ, 2026 ರ ಅಕ್ಟೋಬರ್ 1 ರ ಅನ್ವಯ 18 ವರ್ಷ ವಯಸ್ಸು ಪೂರ್ಣಗೊಳ್ಳುವ ನೂತನ ಯುವ ಮತದಾರರು ತಮ್ಮ ಹೆಸರನ್ನು ಸೇರ್ಪಡೆಗೊಳಿಸಲು ಫಾರಂ ಸಂಖ್ಯೆ 6 ರ ಅಡಿಯಲ್ಲಿ ನೋಂದಣಿ ಮಾಡಿಕೊಳ್ಳಬಹುದು. ಇದಕ್ಕಾಗಿ ಪ್ರತಿ ಬಿಎಲ್‌ಒ ವ್ಯಾಪ್ತಿಯಲ್ಲಿ ಸೂಕ್ತ ಸಂಖ್ಯೆಯ ಅರ್ಜಿಗಳನ್ನು

## ಜು.11ರಂದು ಸಿಎಂ, ಡಿಸಿಎಂಗೆ ಸರ್ಕಾರಿ ನೌಕರರ ಸನ್ಮಾನ



**ಬೆಂಗಳೂರು, ಜು.8:** ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅವರಿಗೆ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ವತಿಯಿಂದ ಜು.11ರಂದು ಬೆಳಗ್ಗೆ 11 ಗಂಟೆಗೆ ನಗರದ ಅರಮನೆ ಮೈದಾನದ ತ್ರಿಪುರವಾಸಿನಿಯಲ್ಲಿ ನಮಭಿಮಾನದ ಅಭಿನಂದನೆ ಕಾರ್ಯಕ್ರಮವನ್ನು ಹಮಿಕೊಳ್ಳಲಾಗಿದೆ ಎಂದು ಸಂಘದ ರಾಜ್ಯಾಧ್ಯಕ್ಷ ಸಿ.ಎಸ್.ಷಡಕ್ಷರಿ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಮಹತ್ವದ ಸಮಾರಂಭದಲ್ಲಿ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿ ಹಾಗೂ ಸಿದ್ದಗಂಗಾ ಮಠಾಧ್ಯಕ್ಷ ಸಿದ್ದಲಿಂಗ ಮಹಾಸ್ವಾಮೀಜಿ ಸಾನಿಧ್ಯ ವಹಿಸಿ ಆಶೀರ್ವಚನ ನೀಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರು ಭಾಗವಹಿಸಲಿದ್ದಾರೆ.

**ಪ್ರತಿಭಾ ಪುರಸ್ಕಾರ:** ಇದೇ ಸಂದರ್ಭದಲ್ಲಿ 2026ನೇ ವರ್ಷದ ಎಸ್‌ಎಸ್‌ಎಲ್ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕ ಗಳಿಸಿರುವ 10 ಜಿಲ್ಲೆಗಳ ಸುಮಾರು 3,000 ರಾಜ್ಯ ಸರ್ಕಾರಿ ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುವುದು. ಈ ವರ್ಷದ ಪುರಸ್ಕಾರಕ್ಕೆ ರಾಜ್ಯಾದ್ಯಂತ ಒಟ್ಟು 11,000 ವಿದ್ಯಾರ್ಥಿಗಳು ಆಯ್ಕೆಯಾಗಿದ್ದಾರೆ.

**ಬೇಡಿಕೆಗಳ ಮನವಿ ಸಲ್ಲಿಕೆ:** ಹಳೇ ಪಿಂಚಣಿ ಯೋಜನೆ, ಕೇಂದ್ರ ಸರ್ಕಾರಿ ನೌಕರರ ವೇತನ ಹಾಗೂ ಭತ್ಯೆಗಳನ್ನು ರಾಜ್ಯ ಸರ್ಕಾರಿ ನೌಕರರಿಗೂ ವಿಸ್ತರಣೆ ಸೇರಿ ವಿವಿಧ ಬೇಡಿಕೆಗಳ ಮನವಿಯನ್ನು ಮುಖ್ಯಮಂತ್ರಿಗಳಿಗೆ ಸಲ್ಲಿಸಲಾಗುವುದು ಎಂದು ಷಡಕ್ಷರಿ ತಿಳಿಸಿದರು.

## ಪ್ರಧಾನಿ ರಾಜೀನಾಮೆಗೆ ಕಾಂಗ್ರೆಸ್ ಒತ್ತಾಯ ಇದು ಕೆಪಿಸಿಸಿ ಅವಿವೇಕತನ: ವಿಜಯೇಂದ್ರ ಆಕ್ಷೇಪ



**ಬೆಂಗಳೂರು, ಜು.8:** ಅಯೋಧ್ಯೆ ರಾಮ ಮಂದಿರದಲ್ಲಿ ದೇಣಿಗೆ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಧಾನಿ ನರೇಂದ್ರ ಮೋದಿ ರಾಜೀನಾಮೆ ನೀಡಬೇಕೆಂದು ಒತ್ತಾಯಿಸುತ್ತಿರುವ ಕಾಂಗ್ರೆಸ್‌ನದ್ದು ಕೇವಲ ಬೂಟಾಟಿಕೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ.

ಈ ಕುರಿತು ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ನೀವೆಷ್ಟೇ ಬೊಬ್ಬೆ ಹೊಡೆದರೂ, ಅಪಪ್ರಚಾರ ನಡೆಸಿದರೂ ಮೋದಿ ಅವರ ಮೇಲಿನ ಜನರ ನಂಬಿಕೆಯನ್ನು ಅಲುಗಾಡಿಸಲು ಸಾಧ್ಯವಿಲ್ಲ ಎಂದಿದ್ದಾರೆ. ಅಯೋಧ್ಯೆಯ ರಾಮಮಂದಿರ ದೇಣಿಗೆ ವಿಚಾರದಲ್ಲಿ ಪ್ರಧಾನಿ ರಾಜೀನಾಮೆಗೆ ಒತ್ತಾಯಿಸುವ ಕೆಪಿಸಿಸಿ ನಿರ್ಣಯ ಅವಿವೇಕತನದ ಪರಮಾವಧಿ ಮತ್ತು ಹಾಸ್ಯಾಸ್ಪದವಾಗಿದೆ ಎಂದಿದ್ದಾರೆ.

ಸ್ವಾತಂತ್ರ್ಯ ಯೋಧರ ತ್ಯಾಗ, ಪರಿಶ್ರಮದಿಂದ ಕಟ್ಟಿದ ನ್ಯಾಷನಲ್ ಹೆರಾಲ್ಡ್ ಸಂಸ್ಥೆಯ ಐದು ಸಾವಿರ ಕೋಟಿ ರೂಪಾಯಿ ಆಸ್ತಿ ಪಾಸ್ತಿಗಳನ್ನು ನುಂಗಿ ನೀರು ಕುಡಿದು ಬಂಧನದ ಭೀತಿಯಿಂದ ಜಾಮೀನಿನ ಮೇಲಿರುವ ನಿಮ್ಮ ಅಧಿನಾಯಕಿ ಸೋನಿಯಾ ಗಾಂಧಿ ರಾಜ್ಯಸಭಾ ಸದಸ್ಯತ್ವಕ್ಕೆ ಹಾಗೂ ಲೋಕಸಭೆಯ ವಿರೋಧ ಪಕ್ಷದ ನಾಯಕನ ಸ್ಥಾನದಲ್ಲಿ ಕುಳಿತಿರುವ ನಿಮ್ಮ ನಾಯಕ ರಾಹುಲ್ ಗಾಂಧಿ ಮೊದಲು ರಾಜೀನಾಮೆ ನೀಡಲಿ ಎಂದು ಆಗ್ರಹಿಸಿದರು. ಅಯೋಧ್ಯೆ ಶ್ರೀರಾಮ ಜನ್ಮಭೂಮಿ ಟ್ರಸ್ಟ್, ಸ್ವತಂತ್ರ ನಿರ್ವಹಣಾ ಸಂಸ್ಥೆ. ಆದರೆ, ಇದರ ದೇಣಿಗೆಗೆ ಕೈಹಾಕಿರುವ ಪ್ರಕರಣ ಹೊರ ಬಂದ ಮರುಕ್ಷಣದಲ್ಲೇ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ನೇತೃತ್ವದ ಉತ್ತರ ಪ್ರದೇಶ ಸರ್ಕಾರ ಈ ವಿಷಯವನ್ನು ಗಂಭೀರವಾಗಿ ತೆಗೆದುಕೊಂಡು, ತಪ್ಪಿತಸ್ಥರನ್ನು ಬಂಧಿಸುವ ಪಾರದರ್ಶಕ ನಡೆ ಪ್ರದರ್ಶಿಸಿದೆ. ಆದರೆ ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಹಗರಣಗಳನ್ನು ಮುಚ್ಚಿಹಾಕಲು ಮುಂದಾಗಿದೆ. ಇದನ್ನು ನಿಮ್ಮ ಹೈಕಮಾಂಡ್ ಸಮರ್ಥಿಸಿಕೊಂಡಿದೆ ಎಂದು ಕಿಡಿಕಾರಿದ್ದಾರೆ.

ಅಯೋಧ್ಯೆ ಪ್ರಕಣದಲ್ಲಿ ಸಿಬಿಐ ಮೇಲೆ ಕಾಂಗ್ರೆಸ್ ನಂಬಿಕೆ ವ್ಯಕ್ತಪಡಿಸಿರುವುದು ಆಶ್ಚರ್ಯ ತರಿಸಿದೆ. ಕರ್ನಾಟಕದಲ್ಲಿ ಮುಡಾ, ವಾಲ್ಮೀಕಿ ನಿಗಮದ ಹಗರಣಗಳ ವಿರುದ್ಧ ತನಿಕೆಗೆ ಮುಂದಾದಾಗ ಸಿಬಿಐ, ಇಡಿ ಪಕ್ಷಪಾತಿಗಳೆಂದು ಹೇಳಿದಿರಿ. ಸಿಬಿಐ ಬಗ್ಗೆ ನಂಬಿಕೆ ಇದ್ದರೆ ಮುಡಾ ಹಗರಣದಲ್ಲಿ ಸಿಬಿಐ ತನಿಕೆ ಬೇಡವೆಂದು ನ್ಯಾಯಾಲಯದಲ್ಲಿ ಏಕೆ ಹೋರಾಡುತ್ತಿದ್ದೀರಿ ಎಂದು ವಿಜಯೇಂದ್ರ ಪ್ರಶ್ನಿಸಿದ್ದಾರೆ.



ಕಾಗಿನೆಲೆ ಮಹಾಸಂಸ್ಥಾನ ಕನಕ ಗುರುಪೀಠದ ಶ್ರೀ ನಿರಂಜನಾನಂದಪುರಿ ಸ್ವಾಮೀಜಿ ಅವರು ಸಿಎಂ ಡಿ ಕೆ ಶಿವಕುಮಾರ್ ಅವರನ್ನು ಸದಾಶಿವನಗರ ನಿವಾಸದಲ್ಲಿ ಬುಧವಾರ ಭೇಟಿ ಮಾಡಿ ಆಶೀರ್ವಾದ ಮಾಡಿದರು.

## ದೇಣಿಗೆ ದುರ್ಬಳಕೆಯ ಹೊಣೆಯನ್ನೂ ಬಿಜೆಪಿ ಹೊರಬೇಕು: ಸಚಿವ ಪ್ರಿಯಾಂಕ್

**ಬೆಂಗಳೂರು, ಜು.8:** ಆರ್‌ಎಸ್‌ಎಸ್, ವಿಹೆಚ್‌ಪಿ ಮತ್ತು ಟ್ರಸ್ಟ್‌ನವರು ಮಾಡಿರುವ ಆರೋಪಿತ ದೇಣಿಗೆ ದುರ್ಬಳಕೆಗೆ ಕಾಂಗ್ರೆಸ್ ಪಕ್ಷ ಏಕೆ ಉತ್ತರ ನೀಡಬೇಕು, ಇದಕ್ಕೆ ಹೊಣೆ ಯಾರು ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನಿಸಿದ್ದಾರೆ. ರಾಮಮಂದಿರ ವಿಚಾರದಲ್ಲಿ ಸುಪ್ರೀಂ ಕೋರ್ಟ್‌ನ ತೀರ್ಪಿನ ಶ್ರೇಯಸ್ಸು ಬಿಜೆಪಿಯವರೇ ಪಡೆದಿದ್ದಾರೆ. ಶಿಲಾನ್ಯಾಸದ ಶ್ರೇಯಸ್ಸು ಅವರೇ ಪಡೆದಿದ್ದಾರೆ. ಧ್ವಜಾರೋಹಣದ ಶ್ರೇಯಸ್ಸು ಪಡೆದಿದ್ದಾರೆ. ಪ್ರಾಣ ಪ್ರತಿಷ್ಠೆಯ ಶ್ರೇಯಸ್ಸು ಕೂಡ ಅವರಿಗೇ ಹೋಗಿದೆ. ಉದ್ಘಾಟನೆಯ ಶ್ರೇಯಸ್ಸನ್ನೂ ಬಿಜೆಪಿಯವರೇ ಪಡೆದಿದ್ದಾರೆ. ಹೀಗಿರುವಾಗ ಆರೋಪಿತ ದೇಣಿಗೆ ದುರ್ಬಳಕೆಯ ಹೊಣೆಯನ್ನೂ ಅವರೇ ಹೊರಬೇಕಲ್ಲವೇ ಎಂದು ಟಾಂಗ್ ನೀಡಿದ್ದಾರೆ.

ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಪ್ರಿಯಾಂಕ್ ಖರ್ಗೆ, ಬಿಜೆಪಿಯವರಿಗೆ 'ನೇಷನ್ ಫಸ್ಟ್' ಅಲ್ಲ, 'ಡೊನೇಷನ್ ಫಸ್ಟ್'. ಈ ಹಣ ಎಲ್ಲಿಗೆ ಹೋಗಿದೆ, ಟ್ರಸ್ಟ್‌ನವರು ಏಕೆ ರಾಜೀನಾಮೆ ನೀಡಿದ್ದಾರೆ, ಅವರು ರಾಜೀನಾಮೆ ನೀಡಿದ್ದಾರೆ ಅಂದ ಮೇಲೆ ಈ ಪ್ರಶ್ನೆಗಳಿಗೆ ಅವರು ಉತ್ತರ ನೀಡಲೇಬೇಕಲ್ಲವೇ ಎಂದು ಕೇಳಿದರು.

ಪ್ರಧಾನಮಂತ್ರಿಯವರು ಮತ್ತೊಮ್ಮೆ ವಿದೇಶ ಪ್ರವಾಸಕ್ಕೆ ತೆರಳಿದ್ದಾರೆ. ಸಾರ್ವಜನಿಕರ ಮುಂದೆ ಉತ್ತರಿಸಬೇಕಾದ ಪ್ರಶ್ನೆಗಳು ಎದುರಾದಾಗಲೆಲ್ಲ ಅವರು ವಿದೇಶಕ್ಕೆ ಹೋಗುತ್ತಾರೆ ಎಂದು ಟೀಕಿಸಿದರು. ನಮ್ಮ ಪ್ರಾದೇಶಿಕ ಆಯುಕ್ತರ ಮೂಲಕ ನಾವು ಅಧಿಕೃತವಾಗಿ ನಮ್ಮ ಸಲಹೆಗಳನ್ನು ಸಲ್ಲಿಸಿದ್ದೇವೆ. ಆದರೆ ಇದುವರೆಗೆ ಯಾವುದೇ ಪ್ರತಿಕ್ರಿಯೆ ಬಂದಿಲ್ಲ. ಬಿಜೆಪಿ ಅಥವಾ ಜೆಡಿಎಸ್ ಯಾವುದೇ ವಿಷಯವನ್ನು ಪ್ರಸ್ತಾಪಿಸಿದರೆ ಚುನಾವಣಾ ಆಯೋಗ ತಕ್ಷಣ ಸ್ಪಂದಿಸುತ್ತದೆ. ಅದೇ ನಮ್ಮ ಸರ್ಕಾರ ನೀಡಿದ ಸಲಹೆಗಳ ವಿಷಯಕ್ಕೆ ಬಂದರೆ ಯಾವುದೇ ಸ್ಪಂದನೆ ಇಲ್ಲ. ಇದರಿಂದ ಚುನಾವಣಾ ಆಯೋಗವು ಕೇಂದ್ರ ಸರ್ಕಾರದ ಕೈಗೊಂಬೆಯಾಗಿದೆ ಎಂಬುದು ಸ್ಪಷ್ಟವಾಗುತ್ತದೆ. ಈಗ ಅವರು ಏನು ಮಾಡುತ್ತಾರೆ ಎಂಬುದನ್ನು ಕಾದು ನೋಡೋಣ ಎಂದರು.

## ರಾಜಕೀಯ ಲಾಭಕ್ಕೆ ಜಾತಿ ಜನಗಣತಿ ವರದಿ ದುರ್ಬಳಕೆ: ಸುನೀಲ್‌ಕುಮಾರ್



**ಬೆಂಗಳೂರು, ಜು.8:** ರಾಜ್ಯ ಸರ್ಕಾರವು ಹಿಂದುಳಿದ ವರ್ಗಗಳ ಜಾತಿ ಜನಗಣತಿ ವರದಿಯನ್ನು ಕೇವಲ ರಾಜಕೀಯ ಲಾಭಕ್ಕಾಗಿ ಬಳಸಿಕೊಳ್ಳುತ್ತಿದೆ ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಹಾಗೂ ಹಿಂದುಳಿದ ವರ್ಗಗಳ ಮೋರ್ಚಾ ನಾಯಕ ವಿ. ಸುನಿಲ್ ಕುಮಾರ್ ಆರೋಪಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದ ಆಡಳಿತ ವೈಖರಿ ಹಾಗೂ ಖಾತರಿ ಯೋಜನೆಗಳ ಜಾರಿಯಲ್ಲಾಗುತ್ತಿರುವ ವೈಫಲ್ಯಗಳ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ನಮಗೆ ಕೇವಲ ಜನಸಂಖ್ಯೆ ಎಷ್ಟಿದೆ ಎಂಬ ಕುತೂಹಲವಿಲ್ಲ, ಬದಲಿಗೆ ಒಟ್ಟು ಹಿಂದುಳಿದ ವರ್ಗದವರ ನಿಜವಾದ ಪರಿಸ್ಥಿತಿ ಏನಾಗಿದೆ ಎಂಬ ವರದಿ ಬೇಕಾಗಿದೆ. ಈ ವರದಿಯ ಸಾಧಕ-ಬಾಧಕಗಳ ಬಗ್ಗೆ ಸರ್ಕಾರವು ಮೊದಲು ಬಹಿರಂಗ ಚರ್ಚೆಗೆ ಅವಕಾಶ ಮಾಡಿಕೊಡಬೇಕು. ಈ ವರದಿಯನ್ನು ನಾವು ಸಂಪೂರ್ಣವಾಗಿ ವಿರೋಧಿಸುತ್ತಲೂ ಇಲ್ಲ, ಹಾಗೆಯೇ ಮುಕ್ತವಾಗಿ ಸ್ವಾಗತಿಸುತ್ತಲೂ ಇಲ್ಲ. ಆದರೆ, ಇದನ್ನು ರಾಜಕೀಯ ದಾಳವಾಗಿ ಬಳಸುವುದನ್ನು ನಿಲ್ಲಿಸಬೇಕು ಎಂದು ಅವರು ಒತ್ತಾಯಿಸಿದರು.

ಕಾಂತರಾಜು ವರದಿಗೆ 180 ಕೋಟಿ ರೂಪಾಯಿ ಹಾಗೂ ಮಧುಸೂದನ್ ನಾಯಕ್ ವರದಿಗೆ 450 ಕೋಟಿ ರೂಪಾಯಿ ವೆಚ್ಚ ಮಾಡಲಾಗಿದೆ. ಆದರೆ ಈ ವರದಿಗಳ ಇಂದಿನ ಸ್ಥಿತಿಯೇನು ಎಂದು ಪ್ರಶ್ನಿಸಿದ ಅವರು, ಈ ಮುನ್ನ ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯ ಅವರ ಕಾಲದ ನಿಲುವುಗಳಿಗೆ ತಮ್ಮ ಸಹಮತವಿಲ್ಲದಿದ್ದರೆ ಅದನ್ನು ಈಗಿನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸ್ಪಷ್ಟಪಡಿಸಲಿ ಎಂದು ಆಗ್ರಹಿಸಿದರು.

ಸರ್ಕಾರದ ಖಾತರಿ ಯೋಜನೆಗಳ ಬಗ್ಗೆ ಪ್ರತಿಕ್ರಿಯಿಸಿ, ನಾವು ಈ ಯೋಜನೆಗಳನ್ನು ವಿರೋಧಿಸುತ್ತಿಲ್ಲ. ಆದರೆ, ಸರ್ಕಾರ ಇವುಗಳನ್ನು ಅತ್ಯಂತ ಅವೈಜ್ಞಾನಿಕವಾಗಿ ಜಾರಿಗೆ ತರುತ್ತಿದೆ. ಪರಿಣಾಮವಾಗಿ ರಾಜ್ಯದ ಆರ್ಥಿಕ ಪರಿಸ್ಥಿತಿ ದುಸ್ಥಿತಿಗೆ ತಲುಪಿದೆ. ಕೇಂದ್ರ ಸರ್ಕಾರದ ಕಿಸಾನ್ ಸಮ್ಮಾನ್ ಯೋಜನೆಯ ಹಣವು ನಿಗದಿತ ಸಮಯಕ್ಕೆ ರೈತರ ಖಾತೆಗೆ ಜಮೆಯಾಗುತ್ತದೆ. ಆದರೆ ರಾಜ್ಯದ 'ಗೃಹಲಕ್ಷ್ಮಿ' ಯೋಜನೆಗೆ ಇನ್ನೂ ಸರಿಯಾದ ದಿನಾಂಕ ನಿಗದಿಯಾಗಿಲ್ಲ ಎಂದು ಹೇಳಿದರು.

## ಸಭಾಂಗಣದೊಳಗೆ ಕಾರ್ಯಕ್ರಮ ನಡೆಸಲಿ, ಪಥಸಂಚಲನಕ್ಕೆ ಬಿಡಲ್ಲ

### ಬೆಳಗಾವಿಯಲ್ಲಿ ಆರ್‌ಎಸ್‌ಎಸ್‌ನ ಕಾರ್ಯಕ್ರಮಕ್ಕೂ ಮುನ್ನ ಸಚಿವ ಪ್ರಿಯಾಂಕ್ ಖರ್ಗೆ ಖಡಕ್ ಹೇಳಿಕೆ



**ಬೆಳಗಾವಿ, ಜು.8:** ಸಂಘದ ಸಭೆ ಅಥವಾ ಕಾರ್ಯಕ್ರಮಗಳಲ್ಲಿ ಬೇಕಾದರೆ ಸಭಾಂಗಣದ ಒಳಗೆ ನಡೆಸಿಕೊಳ್ಳಲಿ. ಅದಕ್ಕೆ ಅಭ್ಯಂತರವಿಲ್ಲ. ಆದರೆ, ಯಾವುದೇ ಕಾರಣಕ್ಕೂ ಬೀದಿಗಿಳಿದು ಪಥಸಂಚಲನ ನಡೆಸುವುದಕ್ಕೆ ಬಿಡುವುದಿಲ್ಲ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಖಡಕ್ಕಾಗಿ ಹೇಳಿದ್ದಾರೆ. ನಗರದಲ್ಲಿ ಆರ್‌ಎಸ್‌ಎಸ್‌ನ ಅತ್ಯಂತ ಪ್ರಮುಖ ವಾರ್ಷಿಕ ಸಭೆ ಆರಂಭಗೊಳ್ಳುವ ಮುನ್ನವೇ ಸಚಿವ ಈ ಹೇಳಿಕೆ ಸಂಚಲನ ಸೃಷ್ಟಿಸಿದೆ.

ಆರ್‌ಎಸ್‌ಎಸ್ ಸಭೆಯ ಕುರಿತು ಕಟುವಾಗಿ ಪ್ರತಿಕ್ರಿಯಿಸಿರುವ ಪ್ರಿಯಾಂಕ್ ಖರ್ಗೆ, ಸಾರ್ವಜನಿಕ ರಸ್ತೆಗಳಲ್ಲಿ ಪರೇಡ್ ನಡೆಸುವುದಕ್ಕೆ ಕಾನೂನಿನ ಚೌಕಟ್ಟಿನಲ್ಲಿ ಕಟ್ಟುನಿಟ್ಟಿನ ನಿಯಮಗಳಿದ್ದು, ಅದನ್ನು ಉಲ್ಲಂಘಿಸಲು ಯಾರಿಗೂ ಅವಕಾಶ ನೀಡುವುದಿಲ್ಲ ಎಂದು ಪ್ರಿಯಾಂಕ್ ಖರ್ಗೆ ಸ್ಪಷ್ಟಪಡಿಸಿದ್ದಾರೆ.

ನಾನು ಸಚಿವನಾಗಿ ಅಧಿಕಾರದಲ್ಲಿ ಇರುವವರೆಗೂ ಆರ್‌ಎಸ್‌ಎಸ್‌ನ ಪಥಸಂಚಲನಗಳಿಗೆ ಮುಂಚಿತವಾಗಿಯೇ ಸರ್ಕಾರದ ಅನುಮತಿ ಪಡೆಯುವುದು ಕಡ್ಡಾಯ ಎಂದು ಗುಡುಗಿದ್ದಾರೆ.

ಬೆಳಗಾವಿ ಕಾರ್ಯಕ್ರಮ ಅಧಿಕೃತವಾಗಿ ಆರಂಭವಾಗುವುದಕ್ಕೂ ಮುನ್ನವೇ ಅವರು ಈ ಮಾತನ್ನು ಮತ್ತೊಮ್ಮೆ ಪುನರುಚ್ಚರಿಸಿರುವುದು ಸಂಘ ಪರಿವಾರ ಹಾಗೂ ಬಿಜೆಪಿ ನಾಯಕರ ಕೆರಳಿಸಿದೆ. ಸದ್ಯ ಸಚಿವರ ಈ ಹೇಳಿಕೆ ಸಾಮಾಜಿಕ ಜಾಲತಾಣಗಳಲ್ಲಿ ಭಾರಿ ಚರ್ಚೆಗೆ ಗ್ರಾಸವಾಗಿದ್ದು, ಬೆಳಗಾವಿ ಅಧಿವೇಶನದ ಹೊತ್ತಲ್ಲೇ ಈ ರಾಜಕೀಯ ಕಿಡಿ ಮತ್ತಷ್ಟು ದೊಡ್ಡದಾಗುವ ಮುನ್ಸೂಚನೆ ಸಿಕ್ಕಿದೆ.

ಜುಲೈ 10ರಿಂದ 12ರವರೆಗೆ ಮೂರು ದಿನಗಳ ಕಾಲ ಬೆಳಗಾವಿಯಲ್ಲಿ ರಾಷ್ಟ್ರೀಯ ಸ್ವಯಂಸೇವಕ ಸಂಘದ ಪ್ರಚಾರಕರ ಮಹತ್ವದ ಸಭೆ ಆಯೋಜನೆಗೊಂಡಿದೆ. ದೇಶದ ಭವಿಷ್ಯದ ದೃಷ್ಟಿಯಿಂದ ಹಾಗೂ ಸಂಘಟನಾತ್ಮಕ ವಾಗಿ ಹಲವು ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳುವ ಈ ಸಭೆಯ ಬೆನ್ನಲ್ಲೇ, ರಾಜ್ಯ ಸರ್ಕಾರ ಹಾಗೂ ಆರ್‌ಎಸ್‌ಎಸ್ ನಡುವೆ ವಾಕ್ಸಮರ ತಾರಕಕ್ಕೇರಿದೆ. ಬೆಳಗಾವಿಯಲ್ಲಿ ನಡೆಯಲಿರುವ ಈ ಬೃಹತ್ ಸಭೆಯಲ್ಲಿ ದೇಶದ ಮೂಲೆ ಮೂಲೆಗಳಿಂದ ಪ್ರಾಂತ ಪ್ರಚಾರಕರು, ಸಹ ಪ್ರಾಂತ ಪ್ರಚಾರಕರು, ಕ್ಷೇತ್ರ ಪ್ರಚಾರಕರು ಹಾಗೂ ಸಹ ಕ್ಷೇತ್ರ ಪ್ರಚಾರಕರು ಸೇರಿದಂತೆ ಸಂಘದ ಪ್ರಮುಖ ಮುಖಂಡರು ಭಾಗವಹಿಸುತ್ತಿದ್ದಾರೆ. ಮುಂಬರುವ ಜನಗಣತಿ ಪ್ರಕ್ರಿಯೆ ಸೇರಿದಂತೆ ದೇಶದ ಪ್ರಸಕ್ತ ವಿದ್ಯಮಾನಗಳ ಕುರಿತು ಈ ಮೂರು ದಿನಗಳ ಮಂಥನದಲ್ಲಿ ಸುದೀರ್ಘ ಚರ್ಚೆಗಳು ನಡೆಯಲಿವೆ. ಆದರೆ, ಈ ಕಾರ್ಯಕ್ರಮದ ಬೆನ್ನಲ್ಲೇ ಸಚಿವ ಪ್ರಿಯಾಂಕ್ ಖರ್ಗೆ ಅವರು ನೀಡಿರುವ ಹೇಳಿಕೆ ಈಗ ತೀವ್ರ ಸಂಚಲನ ಸೃಷ್ಟಿಸಿದೆ.

## ಉಗ್ರ ಸಂಪರ್ಕ: ಬಳ್ಳಾರಿಯ ವ್ಯಕ್ತಿಯ ಮನೆ ಮೇಲೆ ಎನ್‌ಐಎ ದಾಳಿ

**ಬಳ್ಳಾರಿ, ಜು.8:** ಉಗ್ರರ ಜೊತೆ ಸಂಪರ್ಕ ಹೊಂದಿರುವ ಶಂಕೆ ಹಿನ್ನೆಲೆಯಲ್ಲಿ ಬಳ್ಳಾರಿಯ ಕೌಲ್ ಬಜಾರ್ ನಿವಾಸಿ ಅಬ್ದುಲ್ ಸಲಾಮ್ ಮನೆ ಮೇಲೆ ರಾಷ್ಟ್ರೀಯ ತನಿಖಾ ದಳ (ಎನ್‌ಐಎ) ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಆನ್‌ಲೈನ್ ಮೂಲಕ ಧರ್ಮ ಪ್ರಚೋದನೆ ಹಾಗೂ ಮೂಲಭೂತವಾದವನ್ನು ಹರಡಿ, ನಿಷೇಧಿತ ಉಗ್ರ ಸಂಘಟನೆಗಳೊಂದಿಗೆ ಸಂಪರ್ಕ ಹೊಂದಿದ ಆರೋಪದ ಹಿನ್ನೆಲೆಯಲ್ಲಿ ಆಂಧ್ರಪ್ರದೇಶದ ಎನ್‌ಟಿಆರ್ ಜಿಲ್ಲೆಯಲ್ಲಿ ರೆಹಮತುಲ್ಲ ಷರೀಫ್ ಎಂಬಾತನ ವಿರುದ್ಧ ಕೇಸ್ ದಾಖಲಾಗಿತ್ತು. ತನಿಖೆಯ ವೇಳೆ ರೆಹಮತುಲ್ಲ ಷರೀಫ್ ಜೊತೆಗೆ ಬಳ್ಳಾರಿಯ ಅಬ್ದುಲ್ ಸಲಾಮ್ ನಿಕಟ ನಂಟು ಹೊಂದಿರುವುದು ಬೆಳಕಿಗೆ ಬಂದಿತ್ತು. ಈ ಹಿನ್ನೆಲೆಯಲ್ಲಿ ಕಳೆದ ಮಾ.26ರಂದೇ ಎನ್‌ಐಎ ಅಧಿಕಾರಿಗಳು ಅಬ್ದುಲ್ ಸಲಾಮ್ನನ್ನು ಬಂಧಿಸಿದ್ದರು.

ಬಂಧಿತ ಅಬ್ದುಲ್ ಸಲಾಮ್ ಸದ್ಯ ನ್ಯಾಯಾಂಗ ಬಂಧನದಲ್ಲಿದ್ದರೂ, ಪ್ರಕರಣದ ತನಿಖೆಗಾಗಿ ಎನ್‌ಐಎ ತಂಡವು ಇಂದು ಮತ್ತೆ ಬಳ್ಳಾರಿಯ ಕೌಲ್ ಬಜಾರ್‌ನಲ್ಲಿರುವ ಆತನ ನಿವಾಸಕ್ಕೆ ಭೇಟಿ ನೀಡಿದೆ. ಪರಿಶೀಲನೆ ವೇಳೆ ಮೊಬೈಲ್ ಫೋನ್ ವಶಕ್ಕೆ ಪಡೆದಿದೆ.

ಉಗ್ರ ಸಂಘಟನೆಗಳೊಂದಿಗಿನ ಚಾಟಿಂಗ್, ಆನ್‌ಲೈನ್ ಲಿಂಕ್‌ಗಳು ಹಾಗೂ ಆರ್ಥಿಕ ವಹಿವಾಟುಗಳ ಡಿಜಿಟಲ್ ಪುರಾವೆಗಳನ್ನು ಕಲೆಹಾಕಲು ಮನೆಯಲ್ಲಿದ್ದ ಪ್ರಮುಖ ಮೊಬೈಲ್ ಫೋನ್ ಅನ್ನು ಅಧಿಕಾರಿಗಳು ವಶಪಡಿಸಿದ್ದಾರೆ. ಶೋಧ ಕಾರ್ಯ ಮುಗಿದ ಬಳಿಕ ಎನ್‌ಐಎ ತಂಡವು ವಾಪಸ್ ತೆರಳಿದೆ.

## ಕಂದಾಯ ಇಲಾಖೆಯಿಂದ ಮಹತ್ವದ ಹೆಜ್ಜೆ- ಸಮಗ್ರ ಕಾರ್ಯಾಚರಣಾ ಚೌಕಟ್ಟು ಜಾರಿ

### ಪ್ರಮಾಣಪತ್ರಗಳಿಗೆ ನಾಗರಿಕರು ಕಚೇರಿಗಳಿಂದ ಕಚೇರಿಗಳಿಗೆ ಅಲೆಯದಂತೆ ಸರಳೀಕರಣಕ್ಕೆ ಸರ್ಕಾರದ ನಿರ್ಧಾರದ



**ಬೆಂಗಳೂರು, ಜು.8:** ರಾಜ್ಯದ ಜನತೆಗೆ ಕಂದಾಯ ಇಲಾಖೆಯು ಮಹತ್ವದ ಕೊಡುಗೆಯೊಂದನ್ನು ನೀಡಿದ್ದು, ಇನ್ಮುಂದೆ ಶಾಶ್ವತ ನಿವಾಸ ಪ್ರಮಾಣಪತ್ರವನ್ನು ಸುಲಭವಾಗಿ ಮತ್ತು ನಿಗದಿತ ಕಾಲಮಿತಿಯೊಳಗೆ ಪಡೆದುಕೊಳ್ಳಲು ಹೊಸದೊಂದು ಸಮಗ್ರ ಕಾರ್ಯಾಚರಣಾ ಚೌಕಟ್ಟನ್ನು ಜಾರಿಗೆ ತಂದಿದೆ.

ಕಂದಾಯ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಟಾರಿಯಾ ಅವರ ನೇತೃತ್ವದಲ್ಲಿ ಈ ಹೊಸ ಮಾರ್ಗ ಸೂಚಿಯನ್ನು ಅಧಿಕೃತವಾಗಿ ಪ್ರಕಟಿಸಲಾಗಿದೆ. ವಿವಿಧ ಕಲ್ಯಾಣ ಯೋಜನೆಗಳು, ಶಿಕ್ಷಣ, ವಿದ್ಯಾರ್ಥಿವೇತನ ಹಾಗೂ ಉದ್ಯೋಗ ನೇಮಕಾತಿಗಳಲ್ಲಿ ಅತ್ಯಂತ ಪ್ರಮುಖ ದಾಖಲೆಯಾಗಿರುವ ಈ ಪ್ರಮಾಣಪತ್ರವನ್ನು ಇನ್ನುಮುಂದೆ ನಾಗರಿಕರು ಕಚೇರಿಗಳಿಂದ ಕಚೇರಿಗಳಿಗೆ ಅಲೆಯದಂತೆ ಸರಳಗೊಳಿಸುವುದು ಸರ್ಕಾರದ ಈ ಮಹತ್ವದ ನಿರ್ಧಾರದ ಮುಖ್ಯ ಉದ್ದೇಶವಾಗಿದೆ.

ಸರ್ಕಾರದ ಹೊಸ ಆದೇಶದ ಪ್ರಕಾರ, ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಈ ಇಡೀ ಪ್ರಕ್ರಿಯೆಯನ್ನು ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011ರ ವ್ಯಾಪ್ತಿಗೆ ತರಲಾಗಿದೆ. ಇದರಿಂದಾಗಿ ಅರ್ಜಿದಾರರು ಕೇವಲ ಏಳು ದಿನಗಳ ನಿಗದಿತ ಕಾಲಮಿತಿಯೊಳಗೆ ತಮ್ಮ ಪ್ರಮಾಣಪತ್ರವನ್ನು ಕೈಸೇರಿಸಿಕೊಳ್ಳಬಹುದಾಗಿದೆ.

ಈ ನೂತನ ವ್ಯವಸ್ಥೆಯು ಜನಸಾಮಾನ್ಯರಿಗೆ ಪಾರದರ್ಶಕ ಹಾಗೂ ವಿಳಂಬಮುಕ್ತಸೇವೆ ಒದಗಿಸುವಲ್ಲಿ ಮೈಲಿಗಲ್ಲಾಗಲಿದೆ ಎಂದು ಆಡಳಿತ ವಲಯದಲ್ಲಿ ವಿಶ್ಲೇಷಿಸಲಾಗುತ್ತಿದೆ. ಹೊಸ ಮಾರ್ಗಸೂಚಿಯ ಅನ್ವಯ ಸಾರ್ವಜನಿಕರು ತಾಲೂಕು ಕಚೇರಿಗಳಿಗೆ ಅಲೆಯುವ ಅಗತ್ಯವನ್ನು ತಪ್ಪಿಸಲಾಗಿದೆ. ಗ್ರಾಮೀಣ ಭಾಗದ ನಾಗರಿಕರು ತಮ್ಮದೇ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಲ್ಲಿ ಸ್ಥಾಪಿಸಲಾಗುವ ವಿಶೇಷ ಸಹಾಯ ಮತ್ತು ಸೌಲಭ್ಯ ಕೌಂಟರ್‌ಗಳ ಮೂಲಕ ಇನ್ಮುಂದೆ ಅರ್ಜಿ ಸಲ್ಲಿಸಬಹುದಾಗಿದೆ. ಗ್ರಾಮೀಣ ಪ್ರದೇಶಗಳಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ನಗರ ಪ್ರದೇಶಗಳಲ್ಲಿ ಮಹಾನಗರ ಪಾಲಿಕೆ ಆಯುಕ್ತರು ಮತ್ತು ನಗರಸಭೆಗಳ ಮುಖ್ಯಾಧಿಕಾರಿಗಳು ಇಂತಹ ಆಧುನಿಕ ಸೌಲಭ್ಯದ ಕೌಂಟರ್‌ಗಳನ್ನು ಕಡ್ಡಾಯವಾಗಿ ತೆರೆಯಲು ಸೂಚಿಸಲಾಗಿದೆ. ಈ ಕೌಂಟರ್‌ಗಳಲ್ಲಿ ಕಂಪ್ಯೂಟರ್, ಇಂಟರ್‌ನೆಟ್, ಸ್ಕ್ಯಾನಿಂಗ್ ಮತ್ತು ಮುದ್ರಣ ಸೌಲಭ್ಯಗಳನ್ನು ಉಚಿತವಾಗಿ ಒದಗಿಸಲಾಗುತ್ತದೆ. ಆನ್‌ಲೈನ್ ಮೂಲಕ ಸ್ವತಃ ಅರ್ಜಿ ಸಲ್ಲಿಸಲು ಬಯಸುವ ನಾಗರಿಕರು ಸರ್ಕಾರದ ಅಧಿಕೃತ ಪೋರ್ಟಲ್ ಆದ ಸೇವಾ ಸಿಂಧು ಅಥವಾ ಅಟಲ್ ಜನಸ್ನೇಹಿ ಕೇಂದ್ರದ ಜಾಲತಾಣದ ಮೂಲಕ ಸುಲಭವಾಗಿ ಲಾಗಿನ್ ಆಗಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಡಿಜಿಟಲ್ ಇಂಡಿಯಾ ಹಾಗೂ ಇ-ಆಡಳಿತ ಇಲಾಖೆಯ ಸಹಯೋಗದೊಂದಿಗೆ ಎನ್‌ಐಸಿ ಬೆಂಗಳೂರು ಸಂಸ್ಥೆಯು ಈ ಡಿಜಿಟಲ್ ವೇದಿಕೆಯನ್ನು ಅತ್ಯಾಧುನಿಕ ತಂತ್ರಜ್ಞಾನದೊಂದಿಗೆ ವಿನ್ಯಾಸಗೊಳಿಸಿದೆ.

ಶಾಶ್ವತ ನಿವಾಸಿ ಪ್ರಮಾಣಪತ್ರವನ್ನು ಪಡೆಯಲು ಅರ್ಜಿದಾರರು ಅಥವಾ ಅವರ ಪೋಷಕರು ಕರ್ನಾಟಕದ ನಿಜವಾದ ಮತ್ತು ಶಾಶ್ವತ ನಿವಾಸಿಗಳಾಗಿರಬೇಕು. ಅರ್ಜಿದಾರರ ತಂದೆ, ತಾಯಿ, ಕಾನೂನುಬದ್ಧ ಪಾಲಕರು ಅಥವಾ ಪತಿ/ಪತ್ನಿಯು ರಾಜ್ಯದಲ್ಲಿ ಸಾಮಾನ್ಯ ಹಾಗೂ ಶಾಶ್ವತ ನಿವಾಸಿಯಾಗಿರುವುದು ಕಡ್ಡಾಯವಾಗಿದೆ. ಇದರೊಂದಿಗೆ ಅರ್ಜಿದಾರರ ಕುಟುಂಬವು ಕರ್ನಾಟಕದಲ್ಲಿ ಸ್ವಂತ ವಸತಿ ಆಸ್ತಿ ಅಥವಾ ಇನ್ಯಾವುದೇ ಸ್ಥಿರಾಸ್ತಿಯ ಮಾಲೀಕತ್ವ ಹೊಂದಿರಬೇಕು ಅಥವಾ ಕಾನೂನುಬದ್ಧ ವಾರಸುದಾರರಾಗಿ ಅದನ್ನು ಬಳಸುತ್ತಿರಬೇಕು. ಸರ್ಕಾರಿ ಅಥವಾ ಸಾರ್ವಜನಿಕ ಸಂಸ್ಥೆಗಳಲ್ಲಿ ಗಣನೀಯ ಅವಧಿಯ ಸೇವೆ ಸಲ್ಲಿಸಿದ ಇತಿಹಾಸವಿರುವ ಕುಟುಂಬಗಳಿಗೂ ಈ ನಿಯಮಾವಳಿಗಳ ಅಡಿಯಲ್ಲಿ ಆದ್ಯತೆ ನೀಡಲಾಗುತ್ತದೆ.ದಾಖಲೆಗಳ ಸಲ್ಲಿಕೆಯ ಹೊರೆಯನ್ನು ಕಡಿಮೆ ಮಾಡಲು ಸರ್ಕಾರವು ಮತ್ತೊಂದು ಮಹತ್ವದ ಹೆಜ್ಜೆಯನ್ನಿಟ್ಟಿದೆ. ಇನ್ಮುಂದೆ ಅರ್ಜಿದಾರರು ರಾಶಿ ರಾಶಿ ದಾಖಲೆಗಳನ್ನು ನೀಡುವ ಅಗತ್ಯವಿರುವುದಿಲ್ಲ. ಬದಲಿಗೆ ಸರ್ಕಾರದ ಬಳಿ ಈಗಾಗಲೇ ಲಭ್ಯವಿರುವ ಕುಟುಂಬ ದತ್ತಾಂಶ, ಶಿಕ್ಷಣ ಇಲಾಖೆಯ ಮಾಹಿತಿ, ಮತದಾರರ ಪಟ್ಟಿ ಹಾಗೂ ವಾಸಸ್ಥಳದ ಡಿಜಿಟಲ್ ದತ್ತಾಂಶಗಳನ್ನು ತಂತ್ರಜ್ಞಾನದ ಮೂಲಕವೇ ನೇರವಾಗಿ ಪರಿಶೀಲನೆಗೆ ಬಳಸಿಕೊಳ್ಳಲಾಗುತ್ತದೆ. ಸಂಬಂಧಪಟ್ಟ ಪ್ರಾಧಿಕಾರವು ಈ ಎಲ್ಲಾ ವಿವರಗಳನ್ನು ಆನ್‌ಲೈನ್ ಮೂಲಕವೇ ಸ್ವತಂತ್ರವಾಗಿ ದೃಢೀಕರಿಸಿಕೊಂಡು, ಅರ್ಜಿದಾರರು ಅರ್ಹರೆಂದು ಮನವರಿಕೆಯಾದ ನಂತರವೇ ಕೇವಲ ವಾರದೊಳಗೆ ಪ್ರಮಾಣಪತ್ರವನ್ನು ವಿತರಿಸಲಿದೆ.ಈ ಇಡೀ ಯೋಜನೆಯ ಯಶಸ್ವಿ ಅನುಷ್ಠಾನದ ಜವಾಬ್ದಾರಿಯನ್ನು ಜಿಲ್ಲಾಧಿಕಾರಿಗಳಿಗೆ ವಹಿಸಲಾಗಿದ್ದು, ಅವರು ಕಾಲಕಾಲಕ್ಕೆ ಪ್ರಗತಿ ವರದಿಯನ್ನು ಕಂದಾಯ ಇಲಾಖೆಯ ಉನ್ನತ ಅಧಿಕಾರಿಗಳಿಗೆ ಸಲ್ಲಿಸಬೇಕಾಗುತ್ತದೆ. ಯಾವುದೇ ರೀತಿಯ ಗೊಂದಲ ಅಥವಾ ಅನುಷ್ಠಾನದ ಸಮಸ್ಯೆಗಳು ಎದುರಾದಲ್ಲಿ ಕಂದಾಯ ಇಲಾಖೆಯ ನಿರ್ಧಾರವೇ ಅಂತಿಮವಾಗಿರುತ್ತದೆ. ಈ ವ್ಯವಸ್ಥೆಯು ಜನಕೇಂದ್ರಿತ ಆಡಳಿತಕ್ಕೆ ಅತ್ಯುತ್ತಮ ಉದಾಹರಣೆಯಾಗಿದ್ದು, ಜನಸಾಮಾನ್ಯರ ಸಮಯ ಮತ್ತು ಶ್ರಮವನ್ನು ಉಳಿಸಲಿದೆ.

## ಎಸ್‌ಐಆರ್ ವಿರುದ್ಧ ಕಾಂಗ್ರೆಸ್ ನಿಂದ ದಾರಿತಪ್ಪಿಸುವ ಮಾಹಿತಿ: ಕರ್ನಾಟಕ ಸಿಇಒಗೆ ಬಿಜೆಪಿ ಅರ್ಜಿ

**ಬೆಂಗಳೂರು, ಜು.8:** ಎಸ್‌ಐಆರ್ ವಿರುದ್ಧ ಕಾಂಗ್ರೆಸ್ ಪಕ್ಷ "ದಾರಿತಪ್ಪಿಸುವ, ಸುಳ್ಳು ಮತ್ತು ಭಯ ಹುಟ್ಟಿಸುವ" ಮಾಹಿತಿಯನ್ನು ಪ್ರಸಾರ ಮಾಡುವುದರ ವಿರುದ್ಧ ಕರ್ನಾಟಕ ಬಿಜೆಪಿ ಬುಧವಾರ ರಾಜ್ಯ ಸಿಇಒಗೆ ಜ್ಞಾಪಕ ಪತ್ರವನ್ನು ಸಲ್ಲಿಸಿದೆ. ರಾಜ್ಯದಲ್ಲಿ ಮತದಾರರ ಪಟ್ಟಿಗಳ ವಿಶೇಷ ತೀವ್ರಪರಿಷ್ಕರಣೆಯನ್ನು ನಡೆಸುವ ಸಾಂವಿಧಾನಿಕ ಕಾರ್ಯ ವಿಧಾನದಲ್ಲಿ ಕಾನೂನುಬಾಹಿರವಾಗಿ ಹಸ್ತಕ್ಷೇಪ ಮಾಡದಂತೆ ಕರ್ನಾಟಕ ಕಾಂಗ್ರೆಸ್ ಮತ್ತು ಅದರ ಕಾರ್ಯಕರ್ತರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಬಿಜೆಪಿ ಸಿಇಒ ಅವರನ್ನು ಒತ್ತಾಯಿಸಿದೆ.

ಬಿಜೆಪಿ ರಾಜ್ಯ ಸಂಚಾಲಕ ಎಸ್ ದತ್ತಾತ್ರಿ ಮತ್ತು ಪಕ್ಷದ ರಾಜ್ಯ ಕಾನೂನು ಕೋಶ ಸಂಚಾಲಕ ವಸಂತಕುಮಾರ್ ಮುಖ್ಯ ಚುನಾವಣಾ ಅಧಿಕಾರಿ ವಿ ಅನ್ಬುಕ್ ಕುಮಾರ್ ಅವರಿಗೆ ಜ್ಞಾಪಕ ಪತ್ರವನ್ನು ಸಲ್ಲಿಸಿದ್ದಾರೆ. ಜೂನ್ 30 ರಂದು ಪ್ರಾರಂಭವಾದ ಕರ್ನಾಟಕದಲ್ಲಿ ಎಸ್‌ಐಆರ್‌ನ ಮನೆ-ಮನೆ ಎಣಿಕೆ ಹಂತ ಜು.29ರವರೆಗೆ ಮುಂದು ವರಿಯಲಿದೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಜುಲೈ 09 2026, ಗುರುವಾರ

## ಒಳಪುಟಗಳಲ್ಲಿ

ಗೊಂದಲ, ದೂರುಗಳಿದ್ದರೆ ಚುನಾವಣಾ ಆಯೋಗದ ಅಧಿಕಾರಿಗಳೇ ನೋಡಿಕೊಳ್ಳುತ್ತಾರೆ: ಡಾ.ಪರಮೇಶ್ವರ್ - ಪು.5



ಸಿಎಂ ಡಿ.ಕೆ.ಶಿವಕುಮಾರ್ ಅವರು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಅವರನ್ನು ಲೋಕಭವನದಲ್ಲಿ ಬುಧವಾರ ಭೇಟಿ ಮಾಡಿದ್ದರು.

# ಬೆಂಗಳೂರಿನಾಚೆಗೂ ನಗರ ನಿರ್ಮಿಸಿ ಎಲ್ಲ ಸೌಕರ್ಯ ಒದಗಿಸಲು ಬದ್ಧ

### ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭರವಸೆ

**ಬೆಂಗಳೂರು, ಜು.8:** ಬೆಂಗಳೂರಿನಾಚೆಗೆ ಮತ್ತಷ್ಟು ಬೆಂಗಳೂರಿನಂತಹ ನಗರಗಳನ್ನು ನಿರ್ಮಿಸಲು ಸರ್ಕಾರ ಮುಂದಾಗಿದೆ. ಬೆಂಗಳೂರಿನಲ್ಲಿರುವ ಎಲ್ಲಾ ಸೌಕರ್ಯಗಳನ್ನು ರಾಜ್ಯದ ಎರಡು ಹಾಗೂ ಮೂರನೇ ಹಂತದ ನಗರಗಳಿಗೂ ಒದಗಿಸಲು ಬದ್ಧರಾಗಿದ್ದೇವೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.

ನಗರದ ಮಾನ್ಯತಾ ಟೆಕ್‌ಪಾರ್ಕ್‌ನಲ್ಲಿ ಬುಧವಾರ ನಡೆದ ಟಾರ್ಗೆಟ್ ಇಂಡಿಯಾ ಕಾರ್ಯಕ್ರಮದಲ್ಲಿ ಹಾಗೂ ಬಳಿಕ ಮಾಧ್ಯಮಗಳ ಜತೆ ಮಾತನಾಡಿದ ಅವರು, ಬೆಂಗಳೂರಿನಲ್ಲಿ ಕಚೇರಿ ಜಾಗದ ಬಾಡಿಗೆ 1ರಿಂದ 1.5 ಡಾಲರ್ ಇದೆ. ಎರಡು ಹಾಗೂ ಮೂರನೇ ಹಂತದ ನಗರಗಳಲ್ಲಿ ಅರ್ಧ ಡಾಲರ್ ಗೆ ಸಿಗುತ್ತದೆ. ಅಲ್ಲಿ ಡಬಲ್ ಎಫ್‌ಎಆರ್ ನೀಡಲು ಮುಂದಾಗಿದ್ದೇವೆ. ಆ ಮೂಲಕ ಅಲ್ಲಿಯೂ ಬಹುಮಹಡಿ ಕಟ್ಟಡಗಳ ನಿರ್ಮಾಣಕ್ಕೆ ಅವಕಾಶ ನೀಡಲು ಮುಂದಾಗಿದ್ದೇವೆ. ಕರ್ನಾಟಕದಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣ ಒದಗಿಸಲಾಗುತ್ತಿದೆ. ನಿಮ್ಮ ಸಲಹೆಗಳಿಗೆ ಸರ್ಕಾರ ಮುಕ್ತವಾಗಿದೆ ಎಂದರು.

ನೀವೆಲ್ಲರೂ ಬಲಿಷ್ಠವಾಗಿ ಬೆಳೆಯಲು ಎಲ್ಲ ಸಹಕಾರ ನೀಡಲು ಸಿದ್ಧ. ನೀವು ಬಲಿಷ್ಠರಾದರೆ ನಾವು ಬಲಿಷ್ಠರಾಗಲು ಸಾಧ್ಯ. ನೀವೆಲ್ಲರೂ ಕರ್ನಾಟಕದ ಪ್ರಗತಿಯ ಪಾಲುದಾರರು,



ರಾಯಭಾರಿಗಳು. ಈ ರಾಜ್ಯ ಹಾಗೂ ದೇಶದ ಪ್ರಗತಿಗೆ ನಾವು ನಿಮ್ಮ ಜೊತೆ ಕೆಲಸ ಮಾಡಲಿದ್ದೇವೆ. ನಾವೆಲ್ಲರೂ ಒಂದೇ ತಂಡ 'ಟೀಮ್ ಕರ್ನಾಟಕ'. ನಾವೆಲ್ಲರೂ ಒಟ್ಟಾಗಿ ಕೆಲಸ ಮಾಡೋಣ. ಜತೆಗೂಡುವುದು ಆರಂಭ, ಜತೆಗೂಡಿ ಆಲೋಚಿಸುವುದು ಪ್ರಗತಿ, ಜತೆಗೂಡಿ ಕೆಲಸ ಮಾಡುವುದು ಯಶಸ್ಸು" ಎಂದು ತಿಳಿಸಿದರು.

### ಬೆಂಗಳೂರಿನ ಮೂಲಸೌಕರ್ಯ ಅಭಿವೃದ್ಧಿಗೆ 1.5 ಲಕ್ಷ ಕೋಟಿ ವೆಚ್ಚ

ಬೆಂಗಳೂರಿನಲ್ಲಿ ಪ್ರತಿ ತಿಂಗಳು 30 ಸಾವಿರ ಹೊಸ ವಾಹನಗಳು ನೋಂದಣಿಯಾಗುತ್ತಿವೆ. ಹೀಗಾಗಿ ಸುಗಮ ಸಂಚಾರಕ್ಕೆ ಆದ್ಯತೆ ನೀಡಲಾಗಿದೆ. ಈಗಾಗಲೇ 350 ಕಿ.ಮೀ ಮೆಟ್ರೋ ಸಂಪರ್ಕಕ್ಕೆ ಯೋಜನೆ ರೂಪಿಸಿದ್ದು, ಇದನ್ನು ಮುಂದಿನ ವರ್ಷದ ವೇಳೆಗೆ 500 ಕಿ.ಮೀ ಗಳಿಗೆ ವಿಸ್ತರಿಸುವ ಗುರಿ ಹೊಂದಿದ್ದೇವೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು. ಹೆಬ್ಬಾಳ ಬಳಿ ಸಂಚಾರ ದಟ್ಟಣೆ ಸಮಸ್ಯೆ ನಿವಾರಣೆಗಾಗಿ ಟನಲ್ ರಸ್ತೆ ಕಾಮಗಾರಿಗೆ ಚಾಲನೆ ನೀಡಲಾಗಿದೆ. ಇದರ ಜತೆಗೆ ಬೆಂಗಳೂರಿನಲ್ಲಿ 40 ಕಿ. ಮೀ ಉದ್ದದ ಟನಲ್ ರಸ್ತೆ ನಿರ್ಮಾಣಕ್ಕೆ ಮುಂದಾಗಿದ್ದು, ಮುಂದಿನ ಸಚಿವ ಸಂಪುಟದಲ್ಲಿ ಚರ್ಚಿಸಿ ಆದೇಶ ಹೊರಡಿಸಲಾಗುವುದು. ಇದಲ್ಲದೆ, 44 ಕಿ.ಮೀ ಉದ್ದದ ಡಬಲ್ ಡೆಕ್ಕರ್ ಯೋಜನೆ, 133 ಕಿ.ಮೀ ಉದ್ದದ ಮೇಲ್ಸೇತುವೆ ಯೋಜನೆ, 123 ಕಿ.ಮೀ ಉದ್ದದ ಬೆಂಗಳೂರು ಬಿಸಿನೆಸ್ ಕಾರಿಡಾರ್ ನಿರ್ಮಾಣ ಮಾಡಲಾಗುತ್ತಿದೆ. ಹೀಗೆ ಬೆಂಗಳೂರಿನ ಅಭಿವೃದ್ಧಿಗೆ 1.5 ಲಕ್ಷ ಕೋಟಿ ವೆಚ್ಚ ಮಾಡಲಾಗುತ್ತಿದೆ ಎಂದರು.

## ಸಿಎಂ ಮಾಧ್ಯಮ ಕಾರ್ಯದರ್ಶಿಗಳಾಗಿ ಮೂವರ ನೇಮಕ







**ಬೆಂಗಳೂರು, ಜು.8:** ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರ ಮಾಧ್ಯಮ ಕಾರ್ಯದರ್ಶಿಯಾಗಿ ಹಿರಿಯ ಪತ್ರಕರ್ತ ಪಿ.ತ್ಯಾಗರಾಜ್ ಸೇರಿದಂತೆ ಮೂವರನ್ನು ನೇಮಕ ಮಾಡಿ ಕರ್ನಾಟಕ ಸರ್ಕಾರ ಬುಧವಾರ ಆದೇಶ ಹೊರಡಿಸಿದೆ. ಈ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಸರ್ಕಾರದ ಅಧೀನ ಕಾರ್ಯದರ್ಶಿ ಜಿ.ಎನ್. ಗಾಯತ್ರಿ ಅಧಿಸೂಚನೆ ಹೊರಡಿಸಿದ್ದಾರೆ. ಪಿ. ತ್ಯಾಗರಾಜ್ ಅವರು ಮುಖ್ಯಮಂತ್ರಿಯವರ ಮಾಧ್ಯಮ ಕಾರ್ಯದರ್ಶಿ – 1, ಆರ್. ಜಯಪ್ರಕಾಶ್ ಅವರು ಮುಖ್ಯಮಂತ್ರಿಯವರ ಮಾಧ್ಯಮ ಕಾರ್ಯದರ್ಶಿ – 2 ಹಾಗೂ ರಾಘವೇಂದ್ರ ಭಟ್ ಅವರು ಮುಖ್ಯಮಂತ್ರಿಯವರ ಮಾಧ್ಯಮ ಕಾರ್ಯದರ್ಶಿ – 3 ಆಗಿ ನೇಮಕಗೊಂಡಿದ್ದಾರೆ.

## ಬೆಂಗಳೂರು ಸನಿಹದಲ್ಲೇ 2ನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ: ಮುಖ್ಯಮಂತ್ರಿ ಮಾಹಿತಿ




**ಬೆಂಗಳೂರು, ಜು.8:** ರಾಜಧಾನಿಯ ಸಮೀಪದಲ್ಲೇ ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣವಾಗಲಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾಹಿತಿ ನೀಡಿದ್ದಾರೆ.

ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ಬುಧವಾರ ನಡೆದ ಉನ್ನತಮಟ್ಟದ ಸಭೆಯಲ್ಲಿ ಈ ಬಗ್ಗೆ ಮಾಹಿತಿ ನೀಡಿದ್ದಾರೆ. ಸಚಿವರಾದ ಎಂ. ಬಿ. ಪಾಟೀಲ್, ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ರಿತೇಶ್ ಕುಮಾರ್ ಸಿಂಗ್, ಆರ್ಥಿಕ ಸಲಹೆಗಾರರಾದ ಎಲ್.ಕೆ. ಅತೀಕ್ ಮತ್ತಿತರರು ಉಪಸ್ಥಿತರಿದ್ದರು ಎಂದು ಹೇಳಲಾಗಿದೆ. ಬೆಂಗಳೂರಿನ ಹಾಲಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಮೇಲೆ ಒತ್ತಡ ಹೆಚ್ಚಾಗುತ್ತಿದ್ದು, ಪರ್ಯಾಯ ವಿಮಾನ ನಿಲ್ದಾಣ ನಿರ್ಮಾಣ ಮಾಡಬೇಕು ಎಂದು ಕಳೆದ ಎರಡು ವರ್ಷಗಳಿಂದಲೂ ಚರ್ಚೆ ನಡೆಯುತ್ತಿದೆ. ಹೊಸ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಜಾಗದ ವಿಚಾರವಾಗಿ ಗೊಂದಲಗಳು ಮುಂದುವರಿದಿದೆ. ಅಲ್ಲದೆ ಹೊಸ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಸರ್ಕಾರದಿಂದಲೂ ಯಾವುದೇ ಹೊಸ ಅಪ್ಡೇಟ್ಸ್ ಬಂದಿರಲಿಲ್ಲ. ಇದೀಗ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರೇ ಹೊಸ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಸಂಬಂಧಿಸಿದಂತೆ ಶುಭಸುದ್ದಿ ಕೊಟ್ಟಿದ್ದಾರೆ.

## ಮೂರು ದಿನಗಳ ಆಸ್ಟ್ರೇಲಿಯಾ ಪ್ರವಾಸ ಮೆಲ್ಬೋರ್ನ್‌ಗೆ ಬಂದಿಳಿದ ಪ್ರಧಾನಿ ಮೋದಿ



**ನವದೆಹಲಿ, ಜು.8:** ಆಸ್ಟ್ರೇಲಿಯಾಕ್ಕೆ ಮೂರು ದಿನಗಳ ಅಧಿಕೃತ ಭೇಟಿಗಾಗಿ ಪ್ರಧಾನಿ ನರೇಂದ್ರ ಮೋದಿ ಬುಧವಾರ ಮೆಲ್ಬೋರ್ನ್‌ಗೆ ಆಗಮಿಸಿದರು.

ಪ್ರಧಾನಿ ಆಂಥೋನಿ ಅಲ್ಬನೀಸ್ ಅವರೊಂದಿಗೆ ಮೂರನೇ ಭಾರತ–ಆಸ್ಟ್ರೇಲಿಯಾ ವಾರ್ಷಿಕ ನಾಯಕರ ಶೃಂಗಸಭೆಯನ್ನು ನಡೆಸಲಿದ್ದಾರೆ ಮತ್ತು ಎರಡೂ ದೇಶಗಳ ನಡುವಿನ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸಲು ಪ್ರಯತ್ನಿಸಲಿದ್ದಾರೆ.

ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಈ ಬಗ್ಗೆ ಮಾಹಿತಿ ಹಂಚಿಕೊಂಡಿರುವ ಮೋದಿ, ಈ ಭೇಟಿಯು ದ್ವಿಪಕ್ಷೀಯ ಸಂಬಂಧಗಳಿಗೆ ಹೊಸ ಆವೇಗವನ್ನು ನೀಡುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. "ಆಸ್ಟ್ರೇಲಿಯಾ, ಮೆಲ್ಬೋರ್ನ್‌ಗೆ ಬಂದಿಳಿದಿದ್ದೇನೆ. ಈ ಭೇಟಿ ಭಾರತ–ಆಸ್ಟ್ರೇಲಿಯಾ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಗೆ ಚೈತನ್ಯವನ್ನು ನೀಡುತ್ತದೆ. ಪ್ರಧಾನಿ ಅಲ್ಬನೀಸ್ ಅವರೊಂದಿಗಿನ ಮಾತುಕತೆಗಳನ್ನು ಎದುರು ನೋಡುತ್ತಿದ್ದೇನೆ" ಎಂದಿದ್ದಾರೆ.

ಆಸ್ಟ್ರೇಲಿಯಾದಲ್ಲಿರುವ ಭಾರತೀಯ ಸಮುದಾಯದ ಮಹತ್ವವನ್ನು ಪ್ರಧಾನಿ ಎತ್ತಿ ತೋರಿಸುತ್ತಾ, "ನಮ್ಮ ಪಾಲುದಾರಿಕೆಯ ಪ್ರಮುಖ ಆಧಾರಸ್ತಂಭವಾಗಿರುವ ಭಾರತೀಯ ವಲಸಿಗರೊಂದಿಗೆ ಸಂವಹನ ನಡೆಸಲು ನನಗೆ ಅವಕಾಶ ಸಿಗುತ್ತದೆ" ಎಂದು ಹೇಳಿದರು.

## 'ಗೃಹಲಕ್ಷ್ಮೀ'ಗೆ ಪ್ರಧಾನಿ ಆರ್ಥಿಕ ಸಲಹಾ ಸಮಿತಿಯಿಂದ ಶಹಬ್ಬಾಸ್‌ಗಿರಿ

**ಬೆಂಗಳೂರು, ಜು.8:** ಕರ್ನಾಟಕ ಸರ್ಕಾರದ ಗ್ಯಾರಂಟಿ ಯೋಜನೆಗಳಿಗೆ ಬಿಜೆಪಿ ನಾಯಕರು ಆಕ್ಷೇಪ ವ್ಯಕ್ತಪಡಿಸುತ್ತಿದ್ದಾರೆ. ಆದರೆ ಇದೀಗ ಇದೇ ಯೋಜನೆಗೆ ಪ್ರಧಾನಿಗಳ ಆರ್ಥಿಕ ಸಲಹಾ ಸಮಿತಿ ಶಹಬ್ಬಾಸ್ ಎಂದಿದೆ.

ಕರ್ನಾಟಕ ಸರ್ಕಾರವು ಮಹಿಳೆಯರ ಬ್ಯಾಂಕ್ ಖಾತೆಗೆ ಪ್ರತಿ ತಿಂಗಳು ತಲಾ 2000 ರೂ.ಜಮೆ ಮಾಡುತ್ತಿದೆ. ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷವು ಅಧಿಕಾರಕ್ಕೆ ಬಂದ ಮೇಲೆ ಮನೆಯ ಯಜಮಾನಿಯ ಬ್ಯಾಂಕ್ ಖಾತೆಗೆ ಮಾಸಿಕ 2,000 ರೂಪಾಯಿ ಜಮೆ ಮಾಡಲಾಗುತ್ತಿದೆ. ಈ ಯೋಜನೆಗೆ ರಾಜ್ಯ ಮತ್ತು ಕೇಂದ್ರ ಬಿಜೆಪಿ ನಾಯಕರು ಆಕ್ಷೇಪ ವ್ಯಕ್ತಪಡಿಸಿದ್ದರು. ಆದರೆ ಇದೀಗ ಕೇಂದ್ರದಿಂದಲೇ ಮೆಚ್ಚುಗೆ ವ್ಯಕ್ತವಾಗಿದೆ.

ಕರ್ನಾಟಕ ಸರ್ಕಾರದ ಗೃಹಲಕ್ಷ್ಮೀ ಮಾದರಿಯಲ್ಲಿ ದೇಶದ 15ಕ್ಕೂ ಹೆಚ್ಚು ರಾಜ್ಯಗಳಲ್ಲಿ ಗ್ಯಾರಂಟಿ ಯೋಜನೆ ಜಾರಿಯಾಗಿದೆ. ಇದರಿಂದ ಫಲಾನುಭವಿಗಳ ಕುಟುಂಬದಲ್ಲಿ ಹಣ ಉಳಿತಾಯ ಹಾಗೂ ಬಳಕೆ ಎರಡೂ ಹೆಚ್ಚಾಗಿದೆ. ಆದರೆ ವೆಚ್ಚ ಮತ್ತು ಹಣದುಬ್ಬರ ಹೆಚ್ಚಿದಂತೆ ಈ ಯೋಜನೆಯನ್ನು ಪರಿಷ್ಕರಣೆ ಮಾಡಬೇಕು ಎಂದೂ ಪ್ರಧಾನಿಗಳ ಆರ್ಥಿಕ ಸಲಹಾ ಸಮಿತಿ ಪ್ರಸ್ತಾಪಿಸಿದೆ. ಕರ್ನಾಟಕದಲ್ಲಿ ಯೋಜನೆ ಜಾರಿಗೆ 28600 ಕೋಟಿ ರೂ. ಹಾಗೂ ಪಶ್ಚಿಮ ಬಂಗಾಳದಲ್ಲಿ 36 ಸಾವಿರ ಕೋಟಿ ರುಪಾಯಿ ಅನುದಾನವನ್ನು ಇಂತಹ ಯೋಜನೆಗಳಿಗಾಗಿ ನಿಗದಿ ಮಾಡಲಾಗಿದೆ ಎಂದು ಸಮಿತಿ ವಿವರಿಸಿದೆ.




- ಯೋಜನೆ ಪರಿಷ್ಕರಣೆಗೂ ಸಮಿತಿ ಪ್ರಸ್ತಾಪ
- ಯೋಜನೆಗೆ ಆಕ್ಷೇಪ ವ್ಯಕ್ತಪಡಿಸಿದ್ದ ರಾಜ್ಯ ಮತ್ತು ಕೇಂದ್ರದ ಬಿಜೆಪಿ ನಾಯಕರು

ಗೃಹಲಕ್ಷ್ಮೀ ಯೋಜನೆಯು ಅತ್ಯುತ್ತಮ ಯೋಜನೆಯಾಗಿದೆ ಎಂದು ಪ್ರಧಾನಿಗಳ ಆರ್ಥಿಕ ಸಲಹಾ ಸಮಿತಿ ಕಾರ್ಯಪತ್ರದಲ್ಲಿ ತಿಳಿಸಿದೆ. ಪ್ರಸಕ್ತ ಹಣಕಾಸು ವರ್ಷದಲ್ಲಿ ಕರ್ನಾಟಕವೂ ಸೇರಿದಂತೆ 15ಕ್ಕೂ ಹೆಚ್ಚು ರಾಜ್ಯಗಳಲ್ಲಿ ಯೋಜನೆ ಜಾರಿಯಾಗಿದ್ದು, 12 ಕೋಟಿ ಮಹಿಳೆಯರಿಗೆ 1.7 ಲಕ್ಷ ಕೋಟಿ ರೂಪಾಯಿ ಹಣ ವಿನಿಯೋಗಿಸಲಾಗುತ್ತಿದೆ ಎಂದು ವರದಿ ಉಲ್ಲೇಖಿಸಿದೆ.

### ಪ್ರಮುಖಾಂಶಗಳು

ಪ್ರಧಾನಿ ಆರ್ಥಿಕ ಸಲಹಾ ಮಂಡಳಿ ಸಲ್ಲಿಸಿರುವ ವರದಿಯಲ್ಲಿ ಈ ಕೆಳಗಿನ ಅಂಶಗಳನ್ನು ಹೈಲೈಟ್ ಮಾಡಲಾಗಿದೆ.

1) ಮಹಿಳೆಯರಿಗೆ ತಿಂಗಳಿಗೆ 2 ಸಾವಿರ ರೂ. ನೀಡುವ ಈ ಯೋಜನೆಯಿಂದ ಫಲಾನುಭವಿಗಳ ಕುಟುಂಬದ ಉಳಿತಾಯ ಮತ್ತು ಬಳಕೆ ಎರಡರಲ್ಲೂ ಏರಿಕೆ ಕಂಡಿದೆ.
2) ಕುಟುಂಬದ ವೆಚ್ಚ, ಹಣದುಬ್ಬರಕ್ಕೆ ಅನುಗುಣವಾಗಿ ಕಾಲಕಾಲಕ್ಕೆ ಮಹಿಳೆಯರಿಗೆ ನೀಡುವ ಹಣದ ಮೊತ್ತವನ್ನು ಪರಿಷ್ಕರಿಸಲು ಸಲಹೆ ನೀಡಿದೆ.
3) ಮಹಾರಾಷ್ಟ್ರ, ಒಡಿಶಾದಲ್ಲಿ ಯೋಜನೆ ಬಳಿಕ ಕುಟುಂಬದ ವೆಚ್ಚದಲ್ಲಿ ಕ್ರಮವಾಗಿ ಶೇ.46, ಶೇ.28 ಏರಿಕೆ ಆಗಿದೆ.
4) ಯೋಜನೆಯನ್ನು ಕುಟುಂಬಗಳ ಸಾಮರ್ಥ್ಯ ವೃದ್ಧಿ, ಡಿಜಿಟಲ್ ಸಾಕ್ಷರತೆ, ಸ್ವಸಹಾಯ ಸಂಘಗಳ ಜೊತೆ ಜೋಡಿಸಬೇಕು.
5) ಕುಟುಂಬಗಳಲ್ಲಿ ಧನಾತ್ಮಕ ಬದಲಾವಣೆಗೆ, ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸಿ, ಬಾಹ್ಯಪಾವತಿ ಅವಲಂಬನೆ ಕಡಿಮೆ ಮಾಡಿದೆ.

## ರಕ್ಷಾಬಂಧನ ದಿನದಂದು ದೆಹಲಿಯಲ್ಲಿ ಮಹಿಳಾ ಸಮೃದ್ಧಿ ಯೋಜನೆ ಜಾರಿ

**ನವದೆಹಲಿ, ಜು.8:** ರಕ್ಷಾಬಂಧನ ಪವಿತ್ರ ಹಬ್ಬದ ಸಂದರ್ಭ ಮಹಿಳೆಯರಿಗೆ ಸಿಹಿ ಸುದ್ದಿ ನೀಡಲು ದೆಹಲಿಯ ಬಿಜೆಪಿ ಸರ್ಕಾರ ಮುಂದಾಗಿದೆ. ಚುನಾವಣೆಯಲ್ಲಿ ನೀಡಿದ ಭರವಸೆಯಂತೆ ಆಗಸ್ಟ್ 28ರಿಂದ ರಾಜ್ಯದ ಮಹಿಳೆಯರಿಗೆ ಪ್ರತಿ ತಿಂಗಳು 2,500 ರೂ. ಹಣ ನೀಡುವ ಮಹಿಳಾ ಸಮೃದ್ಧಿ ಯೋಜನೆಯನ್ನು ಜಾರಿಗೆ ತರಲಿದೆ ಎಂದು ಮೂಲಗಳು ತಿಳಿಸಿವೆ. ರಾಷ್ಟ್ರ ರಾಜಧಾನಿಯ 20ರಿಂದ 22 ಲಕ್ಷ ಮಹಿಳೆಯರಿಗೆ ರೇಖಾ ಗುಪ್ತ ನೇತೃತ್ವದ ಬಿಜೆಪಿ ಸರ್ಕಾರ 2,500 ರೂಪಾಯಿ ನೀಡಲಿದೆ. ಇನ್ನು ಈ ಯೋಜನೆಗೆ ರಕ್ಷಾಬಂಧನ ದಿನದಂದು (ಆ.28) ಪ್ರಧಾನಿ ನರೇಂದ್ರ ಮೋದಿ ಚಾಲನೆ ನೀಡಲಿದ್ದಾರೆ. ಅದರಂತೆ ವಾರ್ಷಿಕ 2.5ರಿಂದ 3 ಲಕ್ಷಗಳ ಆದಾಯದ, ಕುಟುಂಬಗಳ 21 ರಿಂದ 60 ವಯಸ್ಸಿನ, ದೆಹಲಿಯ ಮಹಿಳೆಯರು ಈ ಯೋಜನೆಯಡಿ ಹಣ ಪಡೆಯಲಿದ್ದಾರೆ.

- ಆ.28ರಂದು ಪ್ರಧಾನಿ ಮೋದಿ ಚಾಲನೆ

ಸರ್ಕಾರಿ ಮಹಿಳಾ ಉದ್ಯೋಗಿಗಳು, ತೆರಿಗೆ ಪಾವತಿದಾರರು, ಸರ್ಕಾರಿ ಪಿಂಚಣಿ ಪಡೆಯುವ ಹಿರಿಯ ನಾಗರೀಕರು ಜೊತೆಗೆ ಕಾರುಗಳಂತಹ 4 ಚಕ್ರದ ವಾಹನ ಹೊಂದಿರುವವರಿಗೆ ಈ ಯೋಜನೆಯಿಂದ ಹಣ ಸಿಗುವುದಿಲ್ಲ ಎನ್ನಲಾಗಿದೆ.



ಮಹಿಳಾ ಸಮೃದ್ಧಿ ಯೋಜನೆಗಾಗಿ ದೆಹಲಿ ಸರ್ಕಾರ ಈಗಾಗಲೇ 202627ನೇ ಸಾಲಿನ ಬಜೆಟ್‌ನಲ್ಲಿ 5,100 ಕೋಟಿ ಹಣ ಮೀಸಲಿಟ್ಟಿದೆ. ಯೋಜನೆ ಯಡಿ, ಎಲ್ಲಾ ಅರ್ಹ ಫಲಾನುಭವಿಗಳಿಗೆ ಯಾವುದೇ ತೊಂದರೆ ಇಲ್ಲದೆ ಸರಿಯಾಗಿ ಹಣ ಸೇರುತ್ತದೆ ಎನ್ನುವುದನ್ನು ಖಚಿತಪಡಿಸಿಗೊಂಡ ನಂತರವೇ ಯೋಜನೆಯನ್ನು ಜಾರಿಗೆ ತರಲಾಗುವುದು.
–ರೇಖಾಗುಪ್ತಾ, ದೆಹಲಿ ಮುಖ್ಯಮಂತ್ರಿ

## 4 ವರ್ಷಗಳಲ್ಲಿ ಇವಿ ಚಾರ್ಜಿಂಗ್ ಸ್ಟೇಷನ್‌ಗಳ ಸಂಖ್ಯೆ 32,000ಕ್ಕೆ ಹೆಚ್ಚಳ: ದೆಹಲಿ ಸರ್ಕಾರ

ನವದೆಹಲಿ, ಜು.8: ಮುಂದಿನ ನಾಲ್ಕು ವರ್ಷಗಳಲ್ಲಿ ನಗರದಾದ್ಯಂತ ಇರುವ ಇವಿ (ಎಲೆಕ್ಟ್ರಿಕ್ ವಾಹನ) ಚಾರ್ಜಿಂಗ್ ಸ್ಟೇಷನ್‌ಗಳ ಸಂಖ್ಯೆಯನ್ನು ಪ್ರಸ್ತುತ 9,000ರಿಂದ 32,000ಕ್ಕೆ ಹೆಚ್ಚಿಸುವ ನಿಟ್ಟಿನಲ್ಲಿ ದೆಹಲಿ ಸರ್ಕಾರ ಕಾರ್ಯೋನ್ಮುಖವಾಗಿದೆ ಎಂದು ಸಿಎಂ ರೇಖಾಗುಪ್ತ ಹೇಳಿದ್ದಾರೆ. ಹೊಸ ಇವಿ ನೀತಿ ಕುರಿತು ಬುಧವಾರ ನಡೆದ ಸಭೆಯಲ್ಲಿ ಮಾತನಾಡಿ, ಚಾರ್ಜಿಂಗ್ ಸ್ಟೇಷನ್‌ಗಳಿಗೆ ಅಗತ್ಯವಿರುವ ವಿದ್ಯುತ್ ಪೂರೈಕೆಯ ವ್ಯವಸ್ಥೆಗಳು, ಭವಿಷ್ಯದಲ್ಲಿ ಹೆಚ್ಚಾಗಲಿರುವ ಬೇಡಿಕೆ ಮತ್ತು ಅದಕ್ಕೆ ಪೂರಕವಾದ ವಿದ್ಯುತ್ ಮೂಲಸೌಕರ್ಯಗಳ ಸಿದ್ಧತೆಯನ್ನು ಮುಖ್ಯಮಂತ್ರಿಗಳು ಪರಿಶೀಲಿಸಿದರು. ಈ ಮಹತ್ವಾಕಾಂಕ್ಷೆಯ ಗುರಿಯನ್ನು ಸಾಧಿಸಲು ಸಮರ್ಪಕ ವಿದ್ಯುತ್ ಪೂರೈಕೆ, ಸೂಕ್ತ ಸ್ಥಳಗಳ ಲಭ್ಯತೆ ಮತ್ತು ವಿವಿಧ ಏಜೆನ್ಸಿಗಳ ನಡುವಿನ ಪರಿಣಾಮಕಾರಿ ಸಮನ್ವಯವು ಅತ್ಯಂತ ಪ್ರಮುಖ ಅಂಶಗಳಾಗಿದ್ದು, ಇವುಗಳನ್ನು ಖಚಿತಪಡಿಸಿಕೊಳ್ಳಲಾಗುತ್ತಿದೆ ಎಂದು ಗುಪ್ತಾ ಹೇಳಿದರು.


ಮುಖ್ಯಮಂತ್ರಿಗಳ ಪ್ರಕಾರ, ಚಾರ್ಜಿಂಗ್ ನೆಟ್‌ವರ್ಕ್ ಅನ್ನು ವಿಸ್ತರಿಸುವುದು ಕೇವಲ ಸೂಕ್ತ ಸ್ಥಳಗಳನ್ನು ಗುರುತಿಸುವುದಕ್ಕೆ ಮಾತ್ರ ಸೀಮಿತವಾಗಿರಬಾರದು; ಅಡೆತಡೆಯಿಲ್ಲದ ವಿದ್ಯುತ್ ಪೂರೈಕೆಯನ್ನು ಖಚಿತಪಡಿಸಿಕೊಳ್ಳುವುದು ಸಹ ಅಷ್ಟೇ ಮುಖ್ಯವಾಗಿದೆ. ಸೌರಶಕ್ತಿ ಆಧಾರಿತ ಚಾರ್ಜಿಂಗ್ ಸ್ಟೇಷನ್‌ಗಳನ್ನು ಅಭಿವೃದ್ಧಿಪಡಿಸುವ ಬಗ್ಗೆ ಗುಪ್ತಾ ಅವರು ವಿಶೇಷ ಒತ್ತು ನೀಡಿದರು, ಇದು ಹೆಚ್ಚು ಸ್ವಚ್ಛ ಹಾಗೂ ಸುಸ್ಥಿರ ಇಂಧನ ಪರಿಹಾರಗಳನ್ನು ಉತ್ತೇಜಿಸುತ್ತದೆ ಎಂದು ಅವರು ಹೇಳಿದರು.

## ಕನಿಷ್ಠ ಬೆಂಬಲ ಯೋಜನೆ ಬಾಕಿ ಪಾವತಿ: ಕೇಂದ್ರಕ್ಕೆ ಮನವಿ

### ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಜತೆ ಸಚಿವ ಕೆ.ಎಚ್. ಮುನಿಯಪ್ಪ ಚರ್ಚೆ

**ನವದೆಹಲಿ, ಜು.8:** ರಾಜ್ಯದ ಕನಿಷ್ಠ ಬೆಂಬಲ ಬೆಲೆ ಯೋಜನೆಗೆ ಸಂಬಂಧಿಸಿದಂತೆ ಬಾಕಿ ಪಾವತಿ ಮೊತ್ತವನ್ನು ಬಿಡುಗಡೆ ಮಾಡುವಂತೆ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವ ಕೆ.ಹೆಚ್. ಮುನಿಯಪ್ಪ ಅವರು ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವರಾದ ಪ್ರಲ್ಹಾದ್ ಜೋಶಿ ಅವರೊಂದಿಗೆ ಚರ್ಚಿಸಿದರು.

ಕೆಎಂಎಸ್ 2025–26ರಲ್ಲಿ ರಾಜ್ಯವು 5.69 ಲಕ್ಷ ಮೆಟ್ರಿಕ್ ಟನ್ ರಾಗಿ, 2.21 ಲಕ್ಷ ಮೆಟ್ರಿಕ್ ಟನ್ ಜೋಳ ಹಾಗೂ 0.0567 ಲಕ್ಷ ಮೆಟ್ರಿಕ್ ಟನ್ ಭತ್ತವನ್ನು ಖರೀದಿಸಿದ್ದು, ಇದರ ಒಟ್ಟು ಮೌಲ್ಯ 4,422.17 ಕೋಟಿ ರೂ.ಗಳಾಗಿದೆ. ಈ ಪೈಕಿ ಭಾರತ ಸರ್ಕಾರವು ಇದುವರೆಗೆ 190.10 ಕೋಟಿ ರೂ. ಬಿಡುಗಡೆ ಮಾಡಿದ್ದು, ಉಳಿದ 4,232.07 ಕೋಟಿ ರೂ. ಶೀಘ್ರ ಬಿಡುಗಡೆ ಮಾಡುವಂತೆ ಮನವಿ ಮಾಡಿದರು.



ಕೆಎಂಎಸ್ 2022–23ಕ್ಕೆ ಸಂಬಂಧಿಸಿದ 375.99 ಕೋಟಿ ರೂ. ತಾತ್ಕಾಲಿಕ ಸಬ್ಸಿಡಿ ಹಕ್ಕುಪತ್ರವು ಕೇಂದ್ರ ಸರ್ಕಾರದ ಪರಿಶೀಲನೆಯಲ್ಲಿದ್ದು, ಅದನ್ನೂ ಶೀಘ್ರ ಮಂಜೂರು, ಕೆಎಂಎಸ್ 2009–10 ರಿಂದ 2024–25ರವರೆಗಿನ ಅವಧಿಗೆ ಸಂಬಂಧಿಸಿದ 1,902.58 ಕೋಟಿ ರೂ. ಎಂಎಸ್‌ಪಿ ಬಾಕಿ ಮರುಪಾವತಿ ಮೊತ್ತವನ್ನು ಶೀಘ್ರ ಬಿಡುಗಡೆ ಮಾಡುವಂತೆ ಮುನಿಯಪ್ಪ ಮನವಿ ಮಾಡಿದರು.

ಇದೇ ವೇಳೆ ಪ್ರಸಕ್ತ ಹಣಕಾಸು ವರ್ಷದಲ್ಲಿ 190.10 ಕೋಟಿ ರೂ. ಬಿಡುಗಡೆ ಮಾಡಿರುವುದಕ್ಕೆ ಕೇಂದ್ರ ಸರ್ಕಾರಕ್ಕೆ ಸಚಿವ ಮುನಿಯಪ್ಪ ಕೃತಜ್ಞತೆ ಸಲ್ಲಿಸಿದರು. ಬಾಕಿ ಇರುವ ಎಲ್ಲ ಮರುಪಾವತಿ ಮೊತ್ತಗಳು ಶೀಘ್ರ ಬಿಡುಗಡೆಯಾಗಲಿದ್ದು, ಇದರಿಂದ ರಾಜ್ಯದಲ್ಲಿ ಎಂಎಸ್‌ಪಿ ಖರೀದಿ ಕಾರ್ಯಗಳು ಮತ್ತಷ್ಟು ಪರಿಣಾಮಕಾರಿಯಾಗಿ ನಡೆಯಲಿದ್ದು, ರೈತರಿಗೆ ಸಕಾಲದಲ್ಲಿ ಪಾವತಿ ಮಾಡಲು ಅನುಕೂಲವಾಗಲಿದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದರು.

### ಕೇಂದ್ರ ಸಚಿವರಿಂದ ಸಕಾರಾತ್ಮಕ ಸ್ಪಂದನೆ




ಮುನಿಯಪ್ಪ ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಪ್ರಲ್ಹಾದ ಜೋಶಿ, 1,902.58 ಕೋಟಿ ರೂ. ಬಾಕಿ ಮರುಪಾವತಿ ಪ್ರಕರಣವನ್ನು ಆದ್ಯತೆಯ ಮೇರೆಗೆ ಪರಿಶೀಲಿಸಿ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಹಾಗೆಯೇ ಕೆಎಂಎಸ್ 2025–26ರ ಮರುಪಾವತಿ ಹಕ್ಕುಪತ್ರಗಳು ರಾಜ್ಯ ಸರ್ಕಾರದಿಂದ ಸಲ್ಲಿಕೆಯಾದ ತಕ್ಷಣ ನಿಯಮಾನುಸಾರ ಪರಿಶೀಲಿಸಿ ಬಿಡುಗಡೆ ಮಾಡಲಾಗುವುದು ಎಂದರು.

# ವಿಮಾನ ನಿಲ್ದಾಣಗಳಲ್ಲಿನ ಭದ್ರತೆ, ವಲಸೆ ವ್ಯವಸ್ಥೆ: ಅಮಿತ್ ಶಾ ಪರಿಶೀಲನೆ

**ನವದೆಹಲಿ, ಜು.8:** ಗೃಹ ಸಚಿವ ಅಮಿತ್ ಶಾ ಮತ್ತು ನಾಗರಿಕ ವಿಮಾನಯಾನ ಸಚಿವ ಕಿಂಜರಾಪು ರಾಮ್ ಮೋಹನ್ ನಾಯ್ಡು ಅವರು ಬುಧವಾರ ದೇಶದ ಪ್ರಮುಖ ವಿಮಾನ ನಿಲ್ದಾಣಗಳಲ್ಲಿನ ಪ್ರಯಾಣಿಕರ ಸೌಲಭ್ಯಗಳು, ಭದ್ರತಾ ವ್ಯವಸ್ಥೆಗಳು ಮತ್ತು ವಲಸೆ (ಇಮಿಗ್ರೇಷನ್) ವ್ಯವಸ್ಥೆಯನ್ನು ಪರಿಶೀಲಿಸಿದರು.

ಬ್ಯೂರೋ ಆಫ್ ಸಿವಿಲ್ ಏವಿಯೇಷನ್ ಸೆಕ್ಯುರಿಟಿ (ಃಅಂಖ) ನಿಗದಿಪಡಿಸಿದ ಭದ್ರತಾ ಮಾನದಂಡಗಳಿಗೆ ಅನುಗುಣವಾಗಿ, ಪ್ರಸ್ತುತ ಅಭಿವೃದ್ಧಿ ಹಂತದಲ್ಲಿರುವ 21 ವಿಮಾನ ನಿಲ್ದಾಣಗಳು ಮತ್ತು ಉಳಿದ 41 ವಿಮಾನ ನಿಲ್ದಾಣಗಳನ್ನು ಪ್ರಯಾಣಿಕರ ದಟ್ಟಣೆಯ ಆಧಾರದ ಮೇಲೆ ಆದ್ಯತೆಯ ಮೇರೆಗೆ ಅಭಿವೃದ್ಧಿಪಡಿಸಬೇಕು ಎಂದು ಶಾ ನಿರ್ದೇಶನ ನೀಡಿದರು.

ವಾಣಿಜ್ಯ ಪ್ರದೇಶಗಳು ನಿಗದಿತ ನಿಯಮಗಳ ವ್ಯಾಪ್ತಿಯಲ್ಲಿಯೇ ಇರುವುದನ್ನು ಖಚಿತಪಡಿಸಿಕೊಳ್ಳುವುದರ ಜೊತೆಗೆ, ಪ್ರಯಾಣಿಕರ ಸೌಕರ್ಯವನ್ನು ಹೆಚ್ಚಿಸುವುದೇ ಪ್ರಮುಖ ಉದ್ದೇಶವಾಗಿರಬೇಕು ಎಂದು ಅವರು ತಿಳಿಸಿದರು. ಅಲ್ಲದೆ, ಎಲ್ಲಾ 62 ವಿಮಾನ ನಿಲ್ದಾಣಗಳ ಕಾಮಗಾರಿಯನ್ನು ಮುಂದಿನ ಎರಡು ವರ್ಷಗಳೊಳಗೆ ಪೂರ್ಣಗೊಳಿಸಬೇಕು ಎಂದು ಸೂಚಿಸಿದರು.



ಪ್ರಯಾಣಿಕರ ದಟ್ಟಣೆ ಮತ್ತು ವಿಮಾನ ಸಂಚಾರದ ಆಧಾರದ ಮೇಲೆ ಎಲ್ಲಾ ವಿಮಾನ ನಿಲ್ದಾಣಗಳಲ್ಲಿನ ಏರೋಬ್ರಿಡ್ಜ್‌ಗಳ ಸಂಖ್ಯೆಗೆ ಸಂಬಂಧಿಸಿದಂತೆ ನಿಯಮಗಳನ್ನು ರೂಪಿಸುವಂತೆ ಶಾ ಅವರು ನಾಗರಿಕ ವಿಮಾನಯಾನ ಸಚಿವಾಲಯಕ್ಕೆ ಸೂಚಿಸಿದರು.

ಪ್ರಸ್ತುತ 16 ಪ್ರಮುಖ ವಿಮಾನ ನಿಲ್ದಾಣಗಳಲ್ಲಿ ಲಭ್ಯವಿರುವ ಬ್ಯಾಗೇಜ್ ಡ್ರಾಪ್ (ಬೇಗೇಜ್ ಜಮಾವಣೆ) ಸೌಲಭ್ಯವನ್ನು, ಪ್ರಯಾಣಿಕರ ದಟ್ಟಣೆ ಹೆಚ್ಚಿರುವ ಇತರ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಗಳಿಗೂ ವಿಸ್ತರಿಸಬೇಕು ಎಂದು ಅವರು ಹೇಳಿದರು.

ಅಗತ್ಯ ಶೈಕ್ಷಣಿಕ ಅರ್ಹತೆ ಹೊಂದಿರುವ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಮಾತ್ರ ಎಕ್ಸ್ರೇ ತಪಾಸಣೆ ಕರ್ತವ್ಯಗಳಿಗೆ ನಿಯೋಜಿಸಬೇಕು ಎಂದು ಅವರು ನಿರ್ದೇಶಿಸಿದರು.

ಮಾನವ ಸಂಪನ್ಮೂಲ ವೆಚ್ಚವನ್ನು ಕಡಿಮೆ ಮಾಡುವ ಉದ್ದೇಶದಿಂದ ದೇಶದ ಎಲ್ಲಾ ವಿಮಾನ ನಿಲ್ದಾಣಗಳಲ್ಲಿ ಹಂತ-ಹಂತವಾಗಿ ಸ್ವಯಂಚಾಲಿತ ಟ್ರೇ ಮರುಪಡೆಯುವಿಕೆ ವ್ಯವಸ್ಥೆಯನ್ನು ಅಳವಡಿಸಲು ಸೂಚನೆ ನೀಡಿದರು ಮತ್ತು ಈ ಕೆಲಸಕ್ಕೆ ಸೂಕ್ತ ಮಾನದಂಡಗಳನ್ನು ರೂಪಿಸಬೇಕು ಎಂದು ತಿಳಿಸಿದರು.

ಈ ಸಭೆಯಲ್ಲಿ ಗೃಹ ಕಾರ್ಯದರ್ಶಿ, ಇಂಟೆಲಿಜೆನ್ಸ್ ಬ್ಯೂರೋ ನಿರ್ದೇಶಕರು, ನಾಗರಿಕ ವಿಮಾನಯಾನ ಸಚಿವಾಲಯದ ಕಾರ್ಯದರ್ಶಿ, ಸಿಐಎಸ್‌ಎಫ್ (ಅಖಖಈ) ಮಹಾನಿರ್ದೇಶಕರು, ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರದ (ಂಂಖ) ಅಧ್ಯಕ್ಷರು ಮತ್ತು ಗೃಹ ಸಚಿವಾಲಯ ಹಾಗೂ ನಾಗರಿಕ ವಿಮಾನಯಾನ ಸಚಿವಾಲಯದ ಹಲವಾರು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

2027 ರ ವೇಳೆಗೆ ಎಲ್ಲಾ ರಾಜ್ಯಗಳ ಪ್ರಧಾನ ಕಚೇರಿಗಳಲ್ಲಿ ಫಾರಿನರ್ಸ್ ರೀಜನಲ್ ರಿಜಿಸ್ಟ್ರೇಷನ್ ಆಫೀಸ್ ಕಚೇರಿಗಳನ್ನು ಕಾರ್ಯಗತಗೊಳಿಸಬೇಕು ಎಂದು ಶಾ ಹೇಳಿದರು. ಜೊತೆಗೆ, ಅಗರ್ತಲಾ ಮತ್ತು ಜೇವರ್ ವಿಮಾನ ನಿಲ್ದಾಣಗಳಲ್ಲಿ ಅಧಿಕೃತ ವಲಸೆ ಚೆಕ್‌ಪೋಸ್ಟ್‌ಗಳನ್ನು ಆದಷ್ಟು ಬೇಗ ಕಾರ್ಯರೂಪಕ್ಕೆ ತರಲು ನಿರ್ದೇಶನ ನೀಡಿದರು.

ಫಾಸ್ಟ್ ಟ್ರ್ಯಾಕ್ ಇಮಿಗ್ರೇಷನ್ – ಟ್ರಸ್ಟೆಡ್ ಟ್ರಾವೆಲರ್ಸ್ ಪ್ರೋಗ್ರಾಂ ಅನ್ನು ಜನಪ್ರಿಯಗೊಳಿಸಲು, ಅಂತರರಾಷ್ಟ್ರೀಯ ಟಿಕೆಟ್ ಬುಕ್ ಮಾಡುವ ಸಮಯದಲ್ಲಿ ಪ್ರಯಾಣಿಕರಿಗೆ ವಾಟ್ಸಾಪ್ ಸಂದೇಶವನ್ನು ಕಳುಹಿಸಿ, ಎಫ್‌ಟಿಐ–ಟಿಟಿಪಿಗೆ ನೋಂದಾಯಿಸಿಕೊಳ್ಳಲು ವಿನಂತಿಸುವಂತಹ ವ್ಯವಸ್ಥೆಯನ್ನು ವಿಮಾನಯಾನ ಸಂಸ್ಥೆಗಳ ಸಹಯೋಗದೊಂದಿಗೆ ಸ್ಥಾಪಿಸಬೇಕು ಎಂದು ಹೇಳಿದರು.

# ಎಲ್‌ವೀ ತುಳುಕನ್ನಡಿಗರ ಅವಿನಾಭಾವ ಕೊಂಡಿ: ಸಂಸದ ಗೋಪಾಲ್ ಸಿ.ಶೆಟ್ಟಿ



**ಚಿತ್ರ / ವರದಿ : ರೋನ್ಸ್‌ಬಂಟ್ವಾಳ್**

**ಮುಂಬಯಿ, ಜು.8:** ಎಲ್‌ವೀ ತುಳುಕನ್ನಡಿಗರ ಅವಿನಾಭಾವದ ಕೊಂಡಿಯಾಗಿದ್ದಾರೆ. ಬಂಟರು ಮತ್ತು ಬಿಲ್ಲವ ಸಮುದಾಯಗಳ ನಡುವೆ ಐಕ್ಯತೆ ಮತ್ತು ಸೌಹಾರ್ದತೆಯನ್ನು ಬೆಳೆಸುವಲ್ಲಿ ಅವರ ಪಾತ್ರ ಮಹತ್ತರದ್ದಾಗಿದೆ. ಸಮಾಜದಲ್ಲಿ ಉತ್ತಮ ವಾತಾವರಣ ನಿರ್ಮಿಸುವುದರೊಂದಿಗೆ ನಿಜವಾದ 'ಲೋಕಸೇವಕರಾಗಿ ಗುರುತಿಸಿಕೊಂಡಿರುವ ಅವರ ಜೀವನಯಾನ, ಸಮಾಜಸೇವೆ, ಸಂಘಟನಾ ಚಟುವಟಿಕೆಗಳು ಸಮಾಜಕ್ಕೆ ಮಾದರಿಯಾಗಿದೆ ಎಂದು ಉತ್ತರ–ಮುಂಬಯಿ ಲೋಕಸಭಾ ಕ್ಷೇತ್ರದ ಪೂರ್ವ ಸಂಸದ ಗೋಪಾಲ್ ಸಿ.ಶೆಟ್ಟಿ ನುಡಿದರು.

## ಲೋಕ ಸೇವಕ: ಎಲ್.ವಿ ಅಮೀನ್ ಕೃತಿ ಅನಾವರಣ
## ಎಲ್ವೀ ಸಾಧಕತ್ವದ ಜೀವನ ಪುಟಗಳ ದರ್ಶನ



ಸಾಂತಾಕ್ರೂಜ್ ಪೂರ್ವದ ವಿದ್ಯಾನಗರಿಯ ಕಲೀನಾ ಕ್ಯಾಂಪಸ್‌ನಲ್ಲಿನ ಕವಿ ಕುಸುಮಾಗ್ರಜ್ ಮರಾಠಿ ಭಾಷಾ ಭವನದ ಸಭಾಗೃಹದಲ್ಲಿ ಬುಧವಾರ ಸಂಜೆ ಮುಂಬಯಿ ವಿವಿ ಕನ್ನಡ ವಿಭಾಗವು ಆಯೋಜಿಸಿದ್ದ ಎಲ್.ವಿ. ಅಮೀನ್ ಜೀವನಾಧಾರಿತ, ಮುಂಬಯಿ ವಿವಿ ಕನ್ನಡ ವಿಭಾಗ ಪ್ರಕಾಶಿತ 'ಲೋಕ ಸೇವಕ: ಎಲ್.ವಿ ಅಮೀನ್; ಗೌರವ ಗ್ರಂಥ ಬಿಡುಗಡೆಗೊಳಿಸಿ ಮಾತನಾಡಿದರು.

ಕಾರ್ಯಕ್ರಮಕ್ಕೆ ವಾಸ್ತುತಜ್ಞ ಅಶೋಕ ಪುರೋಹಿತ್ ದೀಪಹಚ್ಚಿ ಚಾಲನೆ ನೀಡಿದರು. ಮುಖ್ಯ ಅತಿಥಿಯಾಗಿ ಜಾಗತಿಕ ಬಂಟರ ಸಂಘಗಳ ಒಕ್ಕೂಟದ ಅಧ್ಯಕ್ಷ ಐಕಳ ಹರೀಶ ಶೆಟ್ಟಿ ಹಾಗೂ ಗೌರವ್ವಾನಿತ ಅತಿಥಿಗಳಾಗಿ ರಾಷ್ಟ್ರೀಯ ಬಿಲ್ಲವರ ಮಹಾಮಂಡಳ ಮುಲ್ಕಿ ಇದರ ನಿಕಟಪೂರ್ವ ಅಧ್ಯಕ್ಷ ಡಾ| ರಾಜಶೇಖರ ಆರ್.ಕೋಟ್ಯಾನ್, ಬಂಟರ ಸಂಘ, ಮುಂಬಯಿ ಇದರ ಗೌರವ ಪ್ರಧಾನ ಕಾರ್ಯದರ್ಶಿ, ಡಾ| ಆರ್.ಕೆ ಶೆಟ್ಟಿ, ದೇವಾಡಿಗ ಮಹಾ ಮಂಡಳದ ಅಧ್ಯಕ್ಷ ಧರ್ಮಪಾಲ ಯು.ದೇವಾಡಿಗ, ಬಿಲ್ಲವರ ಅಸೋಸಿಯೇಶನ್ ಮುಂಬಯಿ ಉಪಾಧ್ಯಕ್ಷ ಪುರುಷೋತ್ತಮ ಎಸ್.ಕೋಟ್ಯಾನ್, ಸಸಿಹಿತ್ಲು ಶ್ರೀ ಭಗವತೀ ದೇವಸ್ಥಾನದ ಆಡಳಿತ ಮುಕ್ತೇಸರ ಚಂದ್ರಶೇಖರ ಆರ್.ಬೆಳ್ಚಡ, ಕನ್ನಡ ಸಂಘ ಸಾಂತಾಕ್ರೂಜ್ ಇದರ ಅಧ್ಯಕ್ಷೆ ಸುಜಾತ ಆರ್.ಶೆಟ್ಟಿ ವೇದಿಕೆಯಲ್ಲಿದ್ದು ಎಲ್.ವಿ ಅಮೀನ್ ಮತ್ತು ಸುಧಾ ಎಲ್.ಅಮೀನ್ ದಂಪತಿಯನ್ನು (ಪರಿವಾರ ಸಹಿತ) ಸನ್ಮಾನಿಸಿ ಗೌರವ ಗ್ರಂಥಕ್ಕಾಗಿ ಅಭಿನಂದಿಸಿದರು.

ಮುಂಬಯಿ ವಿವಿ ಕನ್ನಡ ವಿಭಾಗದ ಪರವಾಗಿ ಸಮಾಜ ಸೇವಕ, ಸಂಘಟಕ ಸಿಎ| ಶ್ರೀನಿವಾಸ ಪಿ.ಸಾಫಲ್ಯ ಇವರನ್ನು ಮತ್ತು ಶೈಕ್ಷಣಿಕ ಸಾಧನೆಗಾಗಿ ಮೆಹ್ತಾ ಕಾಲೇಜು ಐರೋಲಿ ಸಂಸ್ಥೆಯನ್ನು (ಪರವಾಗಿ ಪ್ರಧಾನ ಕಾರ್ಯದರ್ಶಿ ವಿ.ಬಿ ಮುಗಳಿ ಮತ್ತು ಪ್ರಾಚಾರ್ಯ ಡಾ| ಬಿ.ಆರ್ ದೇಶಪಾಂಡೆ ಮೆಹ್ತಾ) ಗೌರವಿಸಿದರು.

ಇಡೀ ವಿಶ್ವವಿದ್ಯಾಲಯದ ವಲಯದಲ್ಲಿ 55 ವಿಭಾಗಗಳಿದ್ದು ಆ ಪೈಕಿ ಅತೀ ಹೆಚ್ಚು ಕೃತಿಗಳನ್ನು ಪ್ರಕಟಿಸಿದ ವಿಭಾಗ ನಮ್ಮ ಕನ್ನಡ ವಿಭಾಗ ಆಗಿದೆ. ಕನ್ನಡ ವಿಭಾಗದ ಹೆಮ್ಮೆಯ 120ನೇ ಕೃತಿ ಎಲ್. ವಿ ಅಮೀನ್ ಅವರದ್ದಾಗಿದೆ. ಅವರ ಬದುಕಿನ ಸಾಹಸಪಥವನ್ನು ಈ ವಿಭಾಗ ದಾಖಲಿಸಿ ಕೃತಿ ರೂಪವಾಗಿಸುತ್ತಿರುವುದು ನಮ್ಮ ಹೆಮ್ಮೆಯಾಗಿದೆ ಎಂದು ಪ್ರೊ| ಉಪಾಧ್ಯ ತಿಳಿಸಿದರು.

ಐಕಳ ಹರೀಶ್ ಮಾತನಾಡಿ, ಸಮಾಜಕ್ಕೆ ಮಾಡಿದ ಕೆಲಸ ಎಂದೂ ಸಮಾಜದಲ್ಲೇ ಶಾಶ್ವತವಾಗಿರುತ್ತದೆ. ಇಂತವರ ಜೀವನ ಸಾರ್ಥಕ ಜೀವನವಾಗಿರುತ್ತದೆ. ಪತಿಯ ಸೇವಾ ಕಾರ್ಯಕ್ಕಾಗಿ ಸಂಪೂರ್ಣ ಸಹಕಾರ ನೀಡಿದ ಧರ್ಮಪತ್ನಿ ಸುಧಾ ಅಮೀನ್ ಅವರ ಪ್ರೋತ್ಸಾಹವೂ ಎಲ್ವೀ ಸಾಧನೆಗೆ ಪೂರಕವಾಗಿದೆ. ಕನ್ನಡ ವಿಭಾಗವು ಒಳ್ಳೆಯ ಗ್ರಂಥ ರಚಿಸಿದ್ದು, ಇದು ಇತಿಹಾಸದ ಪುಟದಲ್ಲಿ ಸೇರುವ ಗ್ರಂಥವಾಗಿದೆ ಎಂದರು.

ಆರ್.ಕೆ ಶೆಟ್ಟಿ ಮಾತನಾಡಿ ಹೊರನಾಡ ಮುಂಬಯಿಯಲ್ಲಿ ಕನ್ನಡದ ಕೈಂಕರ್ಯದ ಬೆಳವಣಿಗೆ, ಉಳಿವು ಹಾಗೂ ಸುಸೂತ್ರ ನಿರ್ವಹಣೆಯಲ್ಲಿ ಎಲ್.ವಿ ಅಮೀನ್ ಮಹತ್ತರ ಪಾತ್ರ ವಹಿಸಿದ್ದಾರೆ. ಜೀವನದ ಪ್ರತಿಯೊಂದು ಕ್ಷೇತ್ರದಲ್ಲೂ ಅವರು ಸಾಧಿಸಿರುವ ಯಶಸ್ಸು ಇತರರಿಗೆ ಮಾದರಿಯಾಗಿದೆ ಎಂದರು.

ನಮ್ಮದು ಸುಮಾರು 37 ವರ್ಷಗಳ ನಿಕಟ ಸಂಪರ್ಕ, ಸಂಬಂಧ. ಇಂತಹ ಸಮಾಜ ಸೇವಕರ ಪುಸ್ತಕ ಬಿಡುಗಡೆಯ ಉತ್ಸವದಲ್ಲಿ ಪಾಲ್ಗೊಳ್ಳುವ ಅವಕಾಶ ನನ್ನ ಭಾಗ್ಯ. ಎಲ್ವೀ ಗ್ರಂಥ ಗೌರವಕ್ಕೆ ನಿಜವಾಗಿ ಅರ್ಹರು. ಸೇವೆ, ಸಾಧನೆಗಳ ಮುನ್ನಡೆಯಲ್ಲಿ 75ರ ಹರೆಯ ಮಾಮೂಲಿಯಲ್ಲ. ಅವರ ಜನ್ಮದಾತರು ಪುಣ್ಯರು ಎಂದು ರಾಜಶೇಖರ ಕೋಟ್ಯಾನ್ ನುಡಿದರು.

ಜೀವನದಲ್ಲಿ ಸಾಕಷ್ಟು ಏರುಪೇರುಗಳ ಅನುಭವ ಪಡೆದು ಮುನ್ನಡೆದ ಫಲವೇ ಇಂತಹ ಸಾಧನೆಗೆ ಬುನಾದಿಯಾಗಿದೆ. ಸರಳ ಜೀವನದ ವ್ಯಕ್ತಿತ್ವ, ಎಲ್ವೀ ಅವರ ಸೌಮ್ಯ, ಸರಳ ಸ್ವಭಾವದ ಸಾರ್ಥಕತೆಯ ಜೀವನಕ್ಕೆ ಈ ಕೃತಿ ಪೂರಕವಾಗಿದೆ. ಇಂತಹ ಸಾಹಸಿ ಸಾಧಕರೊಂದಿಗೆ ನಾವೂ ಬದುಕುತ್ತಿರುವುದು ನಮ್ಮ ಸೌಭಾಗ್ಯವಾಗಿದೆ ಎಂದು ಧರ್ಮಪಾಲ ದೇವಾಡಿಗ ತಿಳಿಸಿದರು.

ಪುರುಷೋತ್ತಮ ಕೋಟ್ಯಾನ್ ಮಾತನಾಡಿ ಇಂತಹ ಸಾಧಕರ ಚರಿತ್ರೆಯಿಂದ ಮರಾಠಿ ಭವನದಲ್ಲಿ ತುಳು ಕನ್ನಡಿಗರ ಗುರುತರ ಕಾರ್ಯಕ್ರಮಗಳು ಇನ್ನಷ್ಟು ಆಗಲಿ ಎಂದು ಹಾರೈಸಿದರು.

ಲೋಕ ಕಲ್ಯಾಣಕ್ಕಾಗಿ ಯಾರು ಸೇವೆ ಮಾಡುತ್ತರೋ ಅವರೇ ಲೋಕ ಸೇವಕರು. ನಿಜವಾಗಿಯೂ ಲೋಕ ಸೇವಕರೇ ಸರಿ. ಎಲ್ವೀ ನಾವಿಬ್ಬರು ಪರಮಾಪ್ತರಾಗಿದ್ದು ಅವರು ತುಳಸೀಎಲೆ ಇದ್ದಾಗೆ ಎಲ್ಲೂ ಸಲ್ಲುವ ಸರ್ವಶ್ರೇಷ್ಠರು ಎಂದು ಚಂದ್ರಶೇಖರ ಬೆಳ್ಚಡ ನುಡಿದರು.

ಅಶೋಕ ಪುರೋಹಿತ್ ಮಾತನಾಡಿ, ಇಂತಹ ಗ್ರಂಥಗಳಿಂದ ಸಾಧಕರಿಗೆ ಇನ್ನಷ್ಟು ಪ್ರೇರಣೆಯಾಗುವುದು. ಎಲ್ವೀ ನಿಜವಾಗಿಯೂ ಲೋಕಕ್ಕೆ ಸೀಮಿತವಾದ ಅಭಿರಾಮರಾಗಿದ್ದಾರೆ. ಸದಾ ಎಲ್ವೀ ಜೊತೆಗಿದ್ದು ಕಷ್ಟಕ್ಕೆ ಕುಗ್ಗದೆ, ಸುಖಕ್ಕೆ ಹಿಗ್ಗದೆ, ಪ್ರತಿ ಕ್ಷಣದಲ್ಲೂ ಸಾಥ್ ನೀಡಿದ ಸುಧಾ ಅಕ್ಕನಿಗೂ, ಅವರ ಮಕ್ಕಳಿಗೂ ಕೂಡ ನಾವೆಲ್ಲರೂ ವಿಶೇಷ ಅಭಿನಂದನೆಗಳನ್ನು ಹೇಳಬೇಕು ಎಂದರು.

ಎಲ್.ವಿ ಅಮೀನ್ ಅವರ ಗೌರವ ಗ್ರಂಥದ ಲೋಕಾರ್ಪಣೆಯು ಕನ್ನಡ ಸಂಘ ಸಾಂತಾಕ್ರೂಜ್ ಸಂಸ್ಥೆಗೂ ಮಾನ್ಯತೆ ತಂದ ಕೃತಿಯಾಗಿದೆ. ಕರುನಾಡು ಹಾಗೂ ಹೊರನಾಡು ಮುಂಬಯಿಯಲ್ಲಿ ಕನ್ನಡದ ಮೂಲಕ ಅವರು ಸಲ್ಲಿಸಿದ ಅನುಪಮ ಹಾಗೂ ಸುದೀರ್ಘ ಸೇವೆ ಅತ್ಯಂತ ಶ್ಲಾಘನೀಯವಾದದ್ದು. ತಮ್ಮ ದೂರದರ್ಶಿತ್ವದ ನಾಯಕತ್ವ ಮತ್ತು ಸಾಂಸ್ಥಿಕ ಪರಿಣತಿಗಳು ನಮ್ಮ ಕನ್ನಡ ಸಂಘವನ್ನು ಅತ್ಯುನ್ನತ ಮಟ್ಟಕ್ಕೆ ಕೊಂಡೊಯ್ಯುವಲ್ಲಿ ಪ್ರಮುಖ ಪಾತ್ರ ವಹಿಸಿವೆ ಎಂದು ಸುಜಾತ ಶೆಟ್ಟಿ ತಿಳಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಎಲ್.ವಿ ಅಮೀನ್, ತನ್ನ ಬಾಲ್ಯಾವಸ್ಥೆಯ ಬಡತನದ ಬದುಕು, ಕೃಷಿ ಸಾಗುವಳಿ ಜೀವನವನ್ನು ಮೆಲುಕು ಹಾಕುತ್ತಾ ಕಟೀಲು ಭ್ರಮಾರಾಂಬಿಕೆಯ ಮೇಲಿರಿಸಿದ ಆತ್ಮವಿಶ್ವಾಸವನ್ನು ನೆನಪಿಸಿಕೊಂಡ, ತವರೂರಲ್ಲಿದ್ದ ತಾಯಿಗೆ ಕಳುಹಿಸುವ ಮಾಸಿಕ 50 ರೂಪಾಯಿಯ ಲೆಕ್ಕಾಚಾರದಿಂದ ಆರಂಭಗೊಂಡ ಮುಂಬಯಿ ಬದುಕು ಈ ಗ್ರಂಥಕ್ಕೆ ಕಾರಣವಾಗಿದೆ. ಜನನಿದಾತೆ (ಅಬ್ಬಯ್ಯ ವೆಂಕಪ್ಪ ಪೂಜಾರ್ತಿ) ಅವರನ್ನು ಸ್ಮರಿಸಿ ಈ ಗೌರವ ಗ್ರಂಥವನ್ನು ಅವರಿಗೆ ಸಮರ್ಪಿಸುವೆ. ತಾಯಿಯ ಕನಸು ಈ ಗ್ರಂಥದ ಮೂಲಕ ನನಸಾಯಿತು ಎಂದು ತಿಳಿಯುವೆ. ನನ್ನ ಬದುಕಿನ ಪಯಣದುದ್ದಕ್ಕೂ ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಕಾರಣಕರ್ತರಾದ ವಂದಿಸುತ್ತೇನೆ ಎಂದರು. ಹಾಗೂ ವೃತ್ತಿ ಜೀವನಕ್ಕೆ ಅಡಿಪಾಯ ಹಾಕಿಕೊಟ್ಟು ಹಿರಿಯಣ್ಣ ಸಮಾನ ಬಾಬಾ ಸೇಠ್ (ರಾಮ್‌ಜೀ ಹರಿಯ) ಅವರನ್ನು ವೇದಿಕೆಗೆ ಆಹ್ವಾನಿಸಿ ಸನ್ಮಾನಿಸಿ ಗೌರವಿಸಿದರು.

ಹಿರಿಯ ಲೇಖಕ ಹರೀಶ್ ಹೆಜ್ಮಾಡಿ ಕೃತಿಯನ್ನು ಪರಿಚಯಿಸಿದರು. ಅಭಿನಂದನಾ ಸಂಪುಟದ ಸಂಪಾದಕಿ ಡಾ| ಪೂರ್ಣಿಮಾ ಸುಧಾಕರ ಶೆಟ್ಟಿ ಮತ್ತು ಕನ್ನಡ ವಿಭಾಗದ ವಿದ್ಯಾರ್ಥಿನಿ, ಕೃತಿಕರ್ತೆ ಆಶಾ.ಕೆ ಸುವರ್ಣ ಅವರನ್ನು ಅತಿಥಿಗಳನ್ನೊಳಗೊಂಡು ಎಲ್.ವಿ ಅಮೀನ್ ಸನ್ಮಾನಿಸಿ ಅಭಿವಂದಿಸಿದರು. ಹಾಗೂ ಕೃತಿಕರ್ತೆ ಆಶಾ ಸುವರ್ಣ ಅವರು ಕೃತಿ ಪ್ರಕಾಶನದ ಪ್ರಧಾನ ರೂವಾರಿ ಪ್ರೊ| ಜಿ.ಎನ್ ಉಪಾಧ್ಯ ಅವರಿಗೆ ಗುರುವಂದನೆಗೈದರು.

ಎಲ್.ವಿ ಕುಟುಂಬಸ್ಥರು, ಹಿತೈಷಿಗಳು, ಅಭಿಮಾನಿಗಳು, ಅಂಬಿಕಾ ಗ್ರೂಪ್ ಆಫ್ ಇಂಡಸ್ಟ್ರೀಸ್ ಸಿಬ್ಬಂದಿಗಳು ಸೇರಿದಂತೆ ವಿವಿಧ ಸಂಘಸಂಸ್ಥೆಗಳ ಮುಖ್ಯಸ್ಥರು, ಬಿಲ್ಲವರ ಅಸೋಸಿಯೇಶನ್ ಮುಂಬಯಿ, ಕನ್ನಡ ಸಂಘ ಸಾಂತಾಕ್ರೂಜ್ ಇದರ ಪದಾಧಿಕಾರಿಗಳು, ಸದಸ್ಯರು, ಕನ್ನಡ ವಿಭಾಗದ ಪ್ರಾಧ್ಯಾಪಕರು, ವಿದ್ಯಾರ್ಥಿಗಳು ಹಾಜರಿದ್ದು ಎಲ್.ವಿ ಅಮೀನ್ ಅವರನ್ನು ಅಭಿನಂದಿಸಿದರು. ಕಲಾ ಭಾಗ್ವತ್ ವಚನವನ್ನಾಡಿದರು. ಶ್ರೀನಿವಾಸ್ ಪಿ.ಸಾಫಲ್ಯ ಪ್ರಾರ್ಥನೆಯನ್ನಾಡಿದರು. ಸಹ ಪ್ರಾಧ್ಯಾಪಕಿ ಡಾ| ಪೂರ್ಣಿಮಾ ಎಸ್ ಶೆಟ್ಟಿ ಸ್ವಾಗತಿಸಿ, ಅತಿಥಿಗಳನ್ನು ಪರಿಚಯಿಸಿ ಕಾರ್ಯಕ್ರಮ ನಿರೂಪಿಸಿದರು. ಸುಧಾ ಎಲ್.ವಿ ವಂದಿಸಿದರು.

# ಪಿನಾಕಾ ಲಾಂಗ್‌ರೇಂಜ್ ಗೈಡೆಡ್ ರಾಕೆಟ್ ಉಡಾವಣೆ ಯಶಸ್ವಿ



**ಚೆನ್ನೈ/ನವದೆಹಲಿ, ಜು.8:** ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆಚಂಡೀಪುರದ ಇಂಟಿಗ್ರೇಟೆಡ್ ಟೆಸ್ಟ್ ರೇಂಜ್‌ನಲ್ಲಿ ಸ್ವದೇಶಿ ವಿನ್ಯಾಸ ಮತ್ತು ಅಭಿವೃದ್ಧಿಯ 'ಪಿನಾಕಾ ಲಾಂಗ್ ರೇಂಜ್ ಗೈಡೆಡ್ ರಾಕೆಟ್' (LRGR)ನ ಯಶಸ್ವಿ ಉಡಾವಣಾ ಪರೀಕ್ಷೆಯನ್ನು ನಡೆಸುವ ಮೂಲಕ ಮಹತ್ತರವಾದ ಸಾಧನೆ ಮಾಡಿದೆ.

ಈ ರಾಕೆಟ್ ಅನ್ನು ಬಳಕೆದಾರರು ನಿಗದಿಪಡಿಸಿದ್ದ ಕನಿಷ್ಠ 60 ಕಿಲೋಮೀಟರ್ ದೂರದ ಗುರಿಯನ್ನು ತಲುಪಲು ಪರೀಕ್ಷಿಸಲಾಯಿತು. ಯೋಜನೆಯ ಪ್ರಕಾರವೇ ಹಾರಾಟದ ಎಲ್ಲಾ ಕೌಶಲ್ಯಗಳನ್ನು ಪ್ರದರ್ಶಿಸಿದ ಎಲ್‌ಆರ್‌ಜಿಆರ್, ನಿಖರವಾದ ಪಥವನ್ನು ಅನುಸರಿಸಿ ಅತ್ಯಂತ ಅಚ್ಚುಕಟ್ಟಾಗಿ ಗುರಿಗೆ ಅಪ್ಪಳಿಸಿತು. ನಿಯೋಜಿಸಲಾಗಿದ್ದ ಎಲ್ಲಾ ಶ್ರೇಣಿಯ ಉಪಕರಣಗಳು ರಾಕೆಟ್‌ನ ಸಂಪೂರ್ಣ ಹಾರಾಟದ ಪಥವನ್ನು ಪತ್ತೆಹಚ್ಚಿವೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

ಈ ಪಿನಾಕಾ ಎಲ್‌ಆರ್‌ಜಿಆರ್ ರಾಕೆಟ್ ಅನ್ನು ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಪ್ರಯೋಗಾಲಯ ಹಾಗೂ ರಿಸರ್ಚ್ ಸೆಂಟರ್ ಇಮರತ್ ಬೆಂಬಲದೊಂದಿಗೆ, ಆರ್ಮಮೆಂಟ್ ರಿಸರ್ಚ್ ಅಂಡ್ ಡೆವಲಪ್‌ಮೆಂಟ್ ಎಸ್ಟಾಬ್ಲಿಷ್‌ಮೆಂಟ್ ಮತ್ತು ಹೈ ಎನರ್ಜಿ ಮೆಟೀರಿಯಲ್ಸ್ ರಿಸರ್ಚ್ ಲ್ಯಾಬೊರೇಟರಿ ಸಹಯೋಗದಲ್ಲಿ ವಿನ್ಯಾಸಗೊಳಿಸಲಾಗಿದೆ. ಈ ಹಾರಾಟದ ಪರೀಕ್ಷೆಯನ್ನು ಐಟಿಆರ್ ಮತ್ತು ಪ್ರೂಫ್ ಅಂಡ್ ಎಕ್ಸ್‌ಪರಿಮೆಂಟಲ್ ಎಸ್ಟಾಬ್ಲಿಷ್‌ಮೆಂಟ್ ಸಂಘಟಿಸಿದ್ದವು. ಪ್ರಸ್ತುತ ಸೇವೆಯಲ್ಲಿರುವ ಪಿನಾಕಾ ಲಾಂಚರ್‌ನಿಂದಲೇ ಈ ರಾಕೆಟ್ ಅನ್ನು ಉಡಾವಣೆ ಮಾಡಲಾಗಿದ್ದು, ಇದು ಅದರ ಬಹುಮುಖ ಸಾಮರ್ಥ್ಯವನ್ನು ಪ್ರದರ್ಶಿಸಿದೆ. ಅಲ್ಲದೆ, ಒಂದೇ ಲಾಂಚರ್‌ನಿಂದ ವಿವಿಧ ಶ್ರೇಣಿಯ ಪಿನಾಕಾ ರೂಪಾಂತರಗಳನ್ನು ಉಡಾವಣೆ ಸಾಮರ್ಥ್ಯವನ್ನು ಇದು ಒದಗಿಸುತ್ತದೆ.

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಯಶಸ್ವಿ ಹಾರಾಟ ಪರೀಕ್ಷೆಗಾಗಿ ಡಿಆರ್‌ಡಿಒ, ಭಾರತೀಯ ಸೈನ್ಯ ಮತ್ತು ಉದ್ಯಮ ರಂಗವನ್ನು ಅಭಿನಂದಿಸಿದ್ದಾರೆ. ಅಲ್ಲದೆ, ಇದು ದೂರಗಾಮಿ ಮಾರ್ಗದರ್ಶಿ ರಾಕೆಟ್‌ಗಳ ಸ್ವದೇಶಿ ವಿನ್ಯಾಸ ಮತ್ತು ಅಭಿವೃದ್ಧಿ ಸಾಮರ್ಥ್ಯದಲ್ಲಿ ಒಂದು ಪ್ರಮುಖ ಮೈಲಿಗಲ್ಲು ಎಂದು ಬಣ್ಣಿಸಿದ್ದಾರೆ.

ರಕ್ಷಣಾ ಕಾರ್ಯದರ್ಶಿ ಹಾಗೂ ರಕ್ಷಣಾ ಆರ್&ಡಿ ಇಲಾಖೆಯ ಕಾರ್ಯದರ್ಶಿ ಮತ್ತು ಡಿಆರ್‌ಡಿಒ ಅಧ್ಯಕ್ಷ ರಾಜೇಶ್ ಕುಮಾರ್ ಸಿಂಗ್ ಅವರು ಈ ಪರೀಕ್ಷೆಗಳನ್ನು ಸೂಕ್ಷ್ಮವಾಗಿ ಗಮನಿಸಿದ್ದು, ಯಶಸ್ವಿ ಪರೀಕ್ಷೆಗೆ ಕಾರಣರಾದ ಎಲ್ಲಾ ತಂಡಗಳಿಗೆ ಶ್ಲಾಘನೆ ವ್ಯಕ್ತಪಡಿಸಿದ್ದಾರೆ.

# ಶೋಪಿಯಾನ್ ಎನ್‌ಕೌಂಟರ್: ಲಷ್ಕರ್ ಉಗ್ರ ಜಾಕಿರ್ ಗನಿ ಹತ್ಯೆ

**ನವದೆಹಲಿ, ಜು.8:** ಜಮ್ಮು–ಕಾಶ್ಮೀರದ ಶೋಪಿಯಾನ್ ಜಿಲ್ಲೆಯಲ್ಲಿ ನಡೆದ ಭಯೋತ್ಪಾದನೆ ನಿಗ್ರಹ ಕಾರ್ಯಾಚರಣೆಯಲ್ಲಿ ಲಷ್ಕರ್–ಎ–ತೊಯ್ಬಾ ಸಂಘಟನೆಯ ಉಗ್ರ ಜಾಕಿರ್ ಅಹ್ಮದ್ ಗನಿ ಹತ್ಯೆಯಾಗಿದ್ದಾನೆ. ಭಾರತೀಯ ಸೇನೆ, ಜಮ್ಮು–ಕಾಶ್ಮೀರ ಪೊಲೀಸ್‌ನ ವಿಶೇಷ ಕಾರ್ಯಾಚರಣೆ ಪಡೆ ಹಾಗೂ ಸಿಆರ್‌ಪಿಎಫ್‌ನ ಜಂಟಿ ಕಾರ್ಯಾಚರಣೆಯಲ್ಲಿ ಈ ಯಶಸ್ಸು ದೊರೆತಿದೆ. ಖಚಿತ ಮಾಹಿತಿ ದೊರೆತ ಹಿನ್ನೆಲೆಯಲ್ಲಿ ಶೋಪಿಯಾನ್ ಜಿಲ್ಲೆಯ ಮೀಮಂದರ್–ಚನ್ನೋರಾ ಪ್ರದೇಶದಲ್ಲಿ ಶೋಧ ಕಾರ್ಯಾಚರಣೆ ಆರಂಭಿಸಲಾಯಿತು. ಈ ವೇಳೆ ಅಡಗಿದ್ದ ಉಗ್ರರು ಭದ್ರತಾ ಪಡೆಗಳ ಮೇಲೆ ಗುಂಡಿನ ದಾಳಿ ನಡೆಸಿದ್ದು, ಪ್ರತಿದಾಳಿಯಲ್ಲಿ ಜಾಕಿರ್ ಗನಿ ಹತ್ಯೆಯಾಗಿದ್ದಾನೆ ಎಂದು ಸೇನಾ ಮೂಲಗಳು ತಿಳಿಸಿವೆ. ಜಾಕಿರ್ ಗನಿ ದಕ್ಷಿಣ ಕಾಶ್ಮೀರದಲ್ಲಿ ಸಕ್ರಿಯವಾಗಿದ್ದ ಲಷ್ಕರ್–ಎ–ತೊಯ್ಬಾದ ಪ್ರಮುಖ ಸ್ಥಳೀಯ ಉಗ್ರರಲ್ಲಿ ಒಬ್ಬನಾಗಿದ್ದ. ಹಲವು ಭಯೋತ್ಪಾದಕ ಚಟುವಟಿಕೆಗಳು ಹಾಗೂ ಭದ್ರತಾ ಪಡೆಗಳ ಮೇಲಿನ ದಾಳಿಗಳಲ್ಲಿ ಭಾಗಿಯಾಗಿದ್ದಾನೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅವನ ವಿರುದ್ಧ ಹಲವು ಪ್ರಕರಣಗಳು ದಾಖಲಾಗಿದ್ದವು. ಎನ್‌ಕೌಂಟರ್‌ಸ್ಥಳದಿಂದ ಎಕೆ–47 ರೈಫಲ್ ಸೇರಿದಂತೆ ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳನ್ನು ವಶಪಡಿಸಿಕೊಳ್ಳಲಾಗಿದೆ.

ಕುಲ್ಗಾಮ್ ನಿವಾಸಿಯಾದ ಝಾಕಿರ್ ಗನ್ನೈ 2024 ರಲ್ಲಿ ಎಲ್‌ಇಟಿಗೆ ಸೇರಿದ್ದರು ಮತ್ತು ಭದ್ರತಾ ಪಡೆಗಳ ವಾಂಟೆಡ್ ಪಟ್ಟಿಯಲ್ಲಿ ಎ+++ ಎಂದು ವರ್ಗೀಕರಿಸಲ್ಪಟ್ಟ, ಕಾರ್ಯಾಚರಣೆಯಲ್ಲಿ ಲತೀಫ್ ಭಟ್ ತಲೆಮರಿಸಿಕೊಂಡಿದ್ದು ಆತನ ಹುಡುಕಾಟ ನಡೆಸಲಾಗುತ್ತಿದೆ. ಈ ನಡುವೆ ಭಾರತೀಯ ಸೇನೆ ಹಾಗೂ ಜಮ್ಮು–ಕಾಶ್ಮೀರ ಪೊಲೀಸರು, ಕಣಿವೆಯಲ್ಲಿ ಭಯೋತ್ಪಾದನೆಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವ ಕಾರ್ಯಾಚರಣೆಗಳು ಮುಂದುವರಿಯಲಿವೆ ಎಂದು ಸ್ಪಷ್ಟಪಡಿಸಿದ್ದಾರೆ.

# ವೈದ್ಯರ ಮೇಲೆ ಹಲ್ಲೆ: ಶಿವಸೇನೆ ಕಾರ್ಪೊರೇಟರ್ ವಿರುದ್ಧ ಎಫ್‌ಐಆರ್, ಮೂವರ ಬಂಧನ

**ಮುಂಬೈ, ಜು.7:** ಮಹಾರಾಷ್ಟ್ರದ ಥಾಣೆ ಜಿಲ್ಲೆಯ ಡೊಂಬಿವ್ಲಿಯಲ್ಲಿರುವ ಕಲ್ಯಾಣ–ಡೊಂಬಿವ್ಲಿ ಮಹಾನಗರ ಪಾಲಿಕೆ ವ್ಯಾಪ್ತಿಯ ಶಾಸ್ತ್ರಿನಗರ ಆಸ್ಪತ್ರೆಯಲ್ಲಿ ಕರ್ತವ್ಯ ನಿರತ ವೈದ್ಯರು ಹಾಗೂ ಆಸ್ಪತ್ರೆ ಸಿಬ್ಬಂದಿ ಮೇಲೆ ಹಲ್ಲೆ ನಡೆಸಿದ ಆರೋಪದಡಿ ಶಿವಸೇನೆ (ಶಿಂಧೆ ಬಣ) ಕಾರ್ಪೊರೇಟರ್ ರಮೇಶ್ ಸುಕ್ರಿಯಾ ಮಹಾತ್ರೆ ಹಾಗೂ ಅವರ ಐವರು ಬೆಂಬಲಿಗರ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ. ಘಟನೆಯ ಹಿನ್ನೆಲೆಯಲ್ಲಿ ಮೂವರನ್ನು ಬಂಧಿಸಲಾಗಿದ್ದು, ಕಾರ್ಪೊರೇಟರ್ ಸೇರಿ ಇತರ ಆರೋಪಿಗಳ ಪತ್ತೆಗೆ ಪೊಲೀಸರು ಶೋಧ ಕಾರ್ಯ ಮುಂದುವರಿಸಿದ್ದಾರೆ. ಪೊಲೀಸರ ಮಾಹಿತಿ ಪ್ರಕಾರ, ಗರ್ಭಿಣಿಯೊಬ್ಬರಿಗೆ ಹೆರಿಗೆ ಬಳಿಕ ಜನಿಸಿದ ಶಿಶುವಿನ ಆರೋಗ್ಯ ಗಂಭೀರವಾಗಿತ್ತು. ಆಸ್ಪತ್ರೆಯಲ್ಲಿ ನವಜಾತ ಶಿಶುಗಳ ತೀವ್ರ ನಿಗಾ ಘಟಕದಲ್ಲಿ ಹಾಸಿಗೆ ಲಭ್ಯವಿರದ ಕಾರಣ, ವೈದ್ಯರು ಮಗುವನ್ನು ಹೆಚ್ಚಿನ ಚಿಕಿತ್ಸಾ ಸೌಲಭ್ಯವಿರುವ ಮತ್ತೊಂದು ಆಸ್ಪತ್ರೆಗೆ ಸ್ಥಳಾಂತರಿಸುವಂತೆ ಕುಟುಂಬದವರಿಗೆ ಸಲಹೆ ನೀಡಿದ್ದರು. ಇದೇ ವಿಚಾರಕ್ಕೆ ಆಕ್ರೋಶಗೊಂಡ ಕುಟುಂಬದ ಸದಸ್ಯರು ಆಸ್ಪತ್ರೆಯಲ್ಲಿ ವೈದ್ಯರೊಂದಿಗೆ ವಾಗ್ವಾದ ನಡೆಸಿದ್ದು, ನಂತರ ಕಾರ್ಪೊರೇಟರ್ ರಮೇಶ್ ಮಹಾತ್ರೆ ಹಾಗೂ ಅವರ ಬೆಂಬಲಿಗರು ಆಸ್ಪತ್ರೆಗೆ ಆಗಮಿಸಿ ವೈದ್ಯರು ಮತ್ತು ಸಿಬ್ಬಂದಿ ಮೇಲೆ ಹಲ್ಲೆ ನಡೆಸಿದರೆಂದು ಆರೋಪಿಸಲಾಗಿದೆ.

ಘಟನೆಯ ನಂತರ ವೈದ್ಯರು, ದಾದಿಯರು ಹಾಗೂ ಅರೆವೈದ್ಯಕೀಯ ಸಿಬ್ಬಂದಿ ಪ್ರತಿಭಟನೆ ನಡೆಸಿದ್ದರಿಂದ ಕೆಡಿಎಂಸಿ ವ್ಯಾಪ್ತಿಯ ಹಲವು ಆಸ್ಪತ್ರೆಗಳ ಸೇವೆಯಲ್ಲಿ ವ್ಯತ್ಯಯ ಉಂಟಾಯಿತು.

# ಬದ್ರಿನಾಥ ದೇವಾಲಯ ದೇಣಿಗೆ ವಿವಾದ: ಅಮಾನತುಗೊಂಡಿದ್ದ ಸಿಬ್ಬಂದಿ ವಿರುದ್ಧ ಎಫ್‌ಐಆರ್

**ಡೆಹ್ರಾಡೂನ್, ಜು.8:** ಉತ್ತರಾಖಂಡದ ಪ್ರಸಿದ್ಧ ಬದ್ರಿನಾಥ ಧಾಮದಲ್ಲಿ ಭಕ್ತರ ದೇಣಿಗೆ ದುರ್ಬಳಕೆ ಆರೋಪಕ್ಕೆ ಸಂಬಂಧಿಸಿದಂತೆ ಮಹತ್ವದ ಬೆಳವಣಿಗೆ ನಡೆದಿದೆ. ಈ ಪ್ರಕರಣದಲ್ಲಿ ಈಗಾಗಲೇ ಅಮಾನತುಗೊಂಡಿದ್ದ ಬದ್ರಿನಾಥ–ಕೇದಾರನಾಥ ದೇವಸ್ಥಾನ ಸಮಿತಿ ಸಿಬ್ಬಂದಿ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ.

ಪ್ರಕರಣದ ತನಿಖೆಯನ್ನು ಪೊಲೀಸರು ಹಾಗೂ ದೇವಸ್ಥಾನ ಸಮಿತಿಯ ತನಿಖಾ ಸಮಿತಿ ತೀವ್ರಗೊಳಿಸಿದ್ದು, ಸಿಸಿಟಿವಿ ದೃಶ್ಯಾವಳಿಗಳು ಸೇರಿದಂತೆ ವಿವಿಧ ಸಾಕ್ಷ್ಯಗಳನ್ನು ಪರಿಶೀಲಿಸಲಾಗುತ್ತಿದೆ.

ದೇವಾಲಯದ ಹುಂಡಿ ಹಾಗೂ ಭಕ್ತರು ಸಲ್ಲಿಸುವ ಕಾಣಿಕೆಗಳ ನಿರ್ವಹಣೆಯಲ್ಲಿ ಅಕ್ರಮ ನಡೆದಿದೆ ಎಂಬ ಆರೋಪಗಳು ಇತ್ತೀಚೆಗೆ ಸಾಮಾಜಿಕ ಜಾಲತಾಣಗಳಲ್ಲಿ ಮತ್ತು ಸಾರ್ವಜನಿಕ ವಲಯದಲ್ಲಿ ವ್ಯಾಪಕ ಚರ್ಚೆಗೆ ಗ್ರಾಸವಾಗಿದ್ದವು. ಈ ಹಿನ್ನೆಲೆಯಲ್ಲಿ ಬದ್ರಿನಾಥ–ಕೇದಾರನಾಥ ದೇವಸ್ಥಾನ ಸಮಿತಿಯು ಸಂಬಂಧಪಟ್ಟ ಸಿಬ್ಬಂದಿಯನ್ನು ಅಮಾನತುಗೊಳಿಸಿ, ನಾಲ್ವರು ಸದಸ್ಯರ ಆಂತರಿಕ ತನಿಖಾ ಸಮಿತಿಯನ್ನು ರಚಿಸಿತ್ತು.

## ಪ್ರತ್ಯೇಕವಾಗಿ ಮೂವರು ಅಧಿಕಾರಿಗಳಿಂದ ತನಿಖೆಗೆ ಸರ್ಕಾರದ ಸೂಚನೆ

ಪ್ರಾಥಮಿಕ ತನಿಖೆಯ ಆಧಾರದ ಮೇಲೆ ಅಮಾನತುಗೊಂಡ ಸಿಬ್ಬಂದಿ ವಿರುದ್ಧ ಅಧಿಕೃತವಾಗಿ ಎಫ್‌ಐಆರ್ ದಾಖಲಿಸಲಾಗಿದ್ದು, ಪ್ರಕರಣದ ಕ್ರಿಮಿನಲ್ ತನಿಖೆ ಆರಂಭವಾಗಿದೆ. ತನಿಖಾಧಿಕಾರಿಗಳು ದೇವಾಲಯದ ಹಣ ಎಣಿಕೆ ಪ್ರಕ್ರಿಯೆ, ದೇಣಿಗೆ ಸಂಗ್ರಹಣೆ, ಹಣದ ದಾಖಲೆಗಳು ಹಾಗೂ ಸಿಸಿಟಿವಿ ದೃಶ್ಯಗಳನ್ನು ಪರಿಶೀಲಿಸುತ್ತಿದ್ದಾರೆ. ಆರೋಪ ಸಾಬೀತಾದರೆ ಇನ್ನಷ್ಟು ಸಿಬ್ಬಂದಿ ಅಥವಾ ಅಧಿಕಾರಿಗಳ ಪಾತ್ರವನ್ನೂ ತನಿಖೆಯ ವ್ಯಾಪ್ತಿಗೆ ತರಲಾಗುವ ಸಾಧ್ಯತೆ ಇದೆ.

ಉತ್ತರಾಖಂಡದ ಬದರಿನಾಥ ಸೇರಿದಂತೆ ಹಲವು ಪ್ರಮುಖ ಧಾರ್ಮಿಕ ಕ್ಷೇತ್ರಗಳ ಆಡಳಿತವನ್ನು ನೋಡಿಕೊಳ್ಳುವ ಶಾಸನಬದ್ಧ ಸಂಸ್ಥೆಯಾಗಿರುವ ಬದರಿನಾಥ–ಕೇದಾರನಾಥ ದೇವಸ್ಥಾನ ಮಂಡಳಿಯ ದೂರಿನ ಅನ್ವಯ, ಪೊಲೀಸರು ಆರೋಪಿ ವಿರುದ್ಧ ಭಾರತೀಯ ನ್ಯಾಯ ಸಂಹಿತೆಯ ಸೆಕ್ಷನ್ 306 (ಮಾಲೀಕನ ವಶದಲ್ಲಿರುವ ಆಸ್ತಿಯನ್ನು ಗುಮಾಸ್ತ ಅಥವಾ ಸೇವಕ ಕಳ್ಳತನ ಮಾಡುವುದು) ಮತ್ತು ಸೆಕ್ಷನ್ 316(5) (ನಂಬಿಕೆ ದ್ರೋಹ ಎಸಗುವುದು) ಅಡಿಯಲ್ಲಿ ಕ್ರಿಮಿನಲ್ ಮೊಕದ್ದಮೆ ಹೂಡಿದ್ದಾರೆ.

ಮತ್ತೊಂದೆಡೆ, ಈ ಪ್ರಕರಣವನ್ನು ಉತ್ತರಾಖಂಡ ಸರ್ಕಾರವು ಅತ್ಯಂತ ಗಂಭೀರವಾಗಿ ಪರಿಗಣಿಸಿದ್ದು, ಘಟನೆಯ ಸತ್ಯಾಸತ್ಯತೆ ಹೊರತರುವ ನಿಟ್ಟಿನಲ್ಲಿ ಮಂಗಳವಾರ ಮೂರು ಸದಸ್ಯರ ಪ್ರತ್ಯೇಕ ಉನ್ನತ ಮಟ್ಟದ ಸರ್ಕಾರಿ ತನಿಖಾ ಸಮಿತಿಯನ್ನು ರಚಿಸಿದೆ. ಗರ್ವಾಲ್ ವಿಭಾಗದ ಕಮಿಷನರ್ ಈ ಸಮಿತಿಯ ಅಧ್ಯಕ್ಷರಾಗಿದ್ದು, ಮುಂದಿನ 15 ದಿನಗಳ ಒಳಗಾಗಿ ಕಾಣಿಕೆ ಹಣ ದುರುಪಯೋಗದ ಕುರಿತು ಸಮಗ್ರ ತನಿಖೆ ನಡೆಸಿ ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ಕಟ್ಟುನಿಟ್ಟಿನ ಆದೇಶ ನೀಡಲಾಗಿದೆ. ಭಕ್ತರು ಭಕ್ತಿಯಿಂದ ದೇವರಿಗೆ ಸಲ್ಲಿಸುವ ಕಾಣಿಕೆ ಹಣದಲ್ಲೇ ಅಕ್ರಮ ನಡೆದಿರುವುದು ಸಾರ್ವಜನಿಕ ವಲಯದಲ್ಲಿ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.

# ಮಧ್ಯಪ್ರದೇಶದ ಬಗಲಾಮುಖಿ ದೇವಾಲಯದಲ್ಲೂ ಕಾಣಿಕೆ ದುರ್ಬಳಕೆ

**ಭೂಪಾಲ್, ಜು.8:** ಅಯೋಧ್ಯೆಯ ರಾಮಮಂದಿರದ ಕಾಣಿಕೆ ಕಳವು ಪ್ರಕರಣ ದೇಶವ್ಯಾಪಿ ಚರ್ಚೆಗೆ ಗ್ರಾಸವಾಗಿರುವ ಬೆನ್ನಲ್ಲೇ, ಮಧ್ಯಪ್ರದೇಶದ ಪ್ರಸಿದ್ಧ ಮಾ ಬಗಲಾಮುಖಿ ದೇವಾಲಯದಲ್ಲೂ ಕಾಣಿಕೆ ಹಾಗೂ ದೇವಾಲಯದ ಆಸ್ತಿಯ ದುರ್ಬಳಕೆಯ ಆರೋಪಗಳು ಕೇಳಿಬಂದಿವೆ. ಪ್ರಕರಣದ ಗಂಭೀರತೆಯನ್ನು ಪರಿಗಣಿಸಿರುವ ಮಧ್ಯಪ್ರದೇಶ ಸರ್ಕಾರ ಏಳು ದಿನಗಳೊಳಗೆ ಸಮಗ್ರ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಜಿಲ್ಲಾಡಳಿತಕ್ಕೆ ಸೂಚಿಸಿದೆ. ಮಧ್ಯಪ್ರದೇಶದ ಆಗರ್–ಮಾಲ್ವಾ ಜಿಲ್ಲೆಯ ನಲ್ಖೇಡಾದಲ್ಲಿರುವ ಪ್ರಸಿದ್ಧ ಮಾ ಬಗಲಾಮುಖಿ ದೇವಾಲಯಕ್ಕೆ ದೇಶದ ವಿವಿಧ ಭಾಗಗಳಿಂದ ಭಕ್ತರು ಆಗಮಿಸುತ್ತಾರೆ. ಪ್ರತಿವರ್ಷ ಕೋಟ್ಯಂತರ ರೂಪಾಯಿ ನಗದು ಹಾಗೂ ಚಿನ್ನ–ಬೆಳ್ಳಿಯ ಕಾಣಿಕೆಗಳು ದೇವಾಲಯಕ್ಕೆ ಹರಿದುಬರುತ್ತವೆ. ಇತ್ತೀಚೆಗೆ ಈ ಕಾಣಿಕೆಗಳ ನಿರ್ವಹಣೆಯಲ್ಲಿ ಅಕ್ರಮಗಳು ನಡೆದಿರುವ ಆರೋಪಗಳು ಸಾರ್ವಜನಿಕ ವಲಯದಲ್ಲಿ ಕೇಳಿಬಂದಿದ್ದು, ಇದರಿಂದ ಭಕ್ತರಲ್ಲಿ ಆತಂಕ ಉಂಟಾಗಿದೆ. ಆರೋಪಗಳ ಪ್ರಕಾರ, ದೇವಾಲಯದ ಕಾಣಿಕೆ ಮತ್ತು ಅಮೂಲ್ಯ ಆಭರಣಗಳ ನಿರ್ವಹಣೆಯಲ್ಲಿ ಪಾರದರ್ಶಕತೆ ಪಾಲನೆಯಾಗಿಲ್ಲ. ಸರ್ಕಾರಿ ನಿಯಮಗಳನ್ನು ಮೀರಿ ಕೆಲವು ವ್ಯಕ್ತಿಗಳು ಅಥವಾ ಸಮಿತಿಗಳು ದೇವಾಲಯದ ಆಸ್ತಿಯ ಮೇಲಿನ ನಿಯಂತ್ರಣವನ್ನು ದುರುಪಯೋಗಪಡಿಸಿಕೊಂಡಿರುವ ಸಾಧ್ಯತೆಗಳಿವೆ ಎಂದು ದೂರಲಾಗಿದೆ. ಈ ಹಿನ್ನೆಲೆಯಲ್ಲಿ ದೇವಾಲಯದ ಲೆಕ್ಕಪತ್ರಗಳು, ಕಾಣಿಕೆ ಸಂಗ್ರಹ, ಚಿನ್ನ–ಬೆಳ್ಳಿ ವಸ್ತುಗಳ ದಾಖಲೆಗಳು ಹಾಗೂ ಆಡಳಿತಾತ್ಮಕ ಕ್ರಮಗಳನ್ನು ಪರಿಶೀಲಿಸಲು ಜಿಲ್ಲಾಡಳಿತ ವಿಶೇಷ ತನಿಖೆಗೆ ಆದೇಶಿಸಿದೆ. ಪ್ರಕರಣದ ಕುರಿತು ತನಿಖೆ ನಡೆಸಿ ಏಳು ದಿನಗಳೊಳಗೆ ವರದಿ ಸಲ್ಲಿಸುವಂತೆ ಡಿಸಿ ಸೂಚಿಸಿದ್ದಾರೆ.

## ಏಳು ದಿನಗಳಲ್ಲಿ ತನಿಖೆ ಪೂರ್ಣಗೊಳಿಸಲು ಜಿಲ್ಲಾಡಳಿತ ಆದೇಶ

### ಎಸ್‌ಐಆರ್‌ನಲ್ಲಿ ಸರ್ಕಾರದ ಪಾತ್ರವಿಲ್ಲ, ಸಿಬ್ಬಂದಿ ಮಾತ್ರ ನೀಡಲಾಗಿದೆ

# ಗೊಂದಲ, ದೂರುಗಳಿದ್ದರೆ ಚುನಾವಣಾ ಆಯೋಗದ ಅಧಿಕಾರಿಗಳೇ ನೋಡಿಕೊಳ್ಳುತ್ತಾರೆ: ಉಪಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್

**ಬೆಂಗಳೂರು, ಜು.8:** ಎಸ್‌ಐಆರ್ ನಲ್ಲಿ ರಾಜ್ಯ ಸರ್ಕಾರದ ಪಾತ್ರವಿಲ್ಲ, ಚುನಾವಣಾ ಆಯೋಗದ ಸೂಚನೆ ಯಂತೆ ಪ್ರಕ್ರಿಯೆ ನಡೆಯುತ್ತಿದೆ. ಅದರಲ್ಲಿ ಯಾವುದೇ ಗೊಂದಲಗಳಿಲ್ಲ. ಚುನಾವಣಾ ಅಧಿಕಾರಿಗಳೇ ಎಲ್ಲವನ್ನೂ ನೋಡಿಕೊಳ್ಳುತ್ತಾರೆ. ಒಂದು ವೇಳೆ ಅಧಿಕಾರಿಗಳೇನಾದರೂ ತಪ್ಪು ಮಾಡಿದರೆ ಕ್ರಮ ತೆಗೆದುಕೊಳ್ಳುತ್ತಾರೆ. ರಾಜ್ಯ ಸರ್ಕಾರ ಇದರಲ್ಲಿ ನೇರ ಭಾಗಿ ಅಲ್ಲ ಎಂದು ಡಿಸಿಎಂ ಡಾ.ಜಿ. ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ.

ತುಮಕೂರು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದ ಬಳಿಕ ಸುದ್ದಿಗಾರರೊಂದಿಗೆ ಡಿಸಿಎಂ ಮಾತನಾಡಿದ ಅವರು, ಎಸ್‌ಐಆರ್‌ಗೆ ಸಂಬಂಧಿಸಿ ಸರ್ಕಾರವು ಯಾವುದೇ ಸೂಚನೆಗಳನ್ನು ಕೊಟ್ಟಿಲ್ಲ. ಚುನಾವಣಾ ಆಯೋಗ ಕೇಳಿದ ಸಿಬ್ಬಂದಿಯನ್ನು ಮಾತ್ರ ಸರ್ಕಾರ ನೀಡಿದೆ. ಮನೆ ಮನೆಗೆ ತೆರಳಿ ಎನ್ಯೂಮರೇಷನ್ ಫಾರಂ ವಿತರಿಸಿ, ಅದನ್ನು ಮರಳಿ ಸಂಗ್ರಹಿಸುವ ಜವಾಬ್ದಾರಿ ಬಿಎಲ್‌ಒಗಳದ್ದೇ ಆಗಿದೆ. ಒಂದು ವೇಳೆ ಬಿಎಲ್‌ಒಗಳು ಒಂದೇ ಸ್ಥಳದಲ್ಲಿ ಕುಳಿತು ಫಾರಂ ವಿತರಿಸುತ್ತಿದ್ದರೆ, ಅದು ಅವರ ತಪ್ಪು. ಅಂತಹ ಘಟನೆಗಳು ಕಂಡುಬಂದರೆ ಚುನಾವಣಾ ಆಯೋಗ ಸೂಕ್ತ ಕ್ರಮ ಕೈಗೊಳ್ಳಬೇಕು. ಬೇರೆ ಬೇರೆ ರಾಜ್ಯಗಳಲ್ಲಿ ಈ ಪ್ರಕ್ರಿಯೆ ಹೇಗೆ ನಡೆದಿದೆ ಎಂಬುದನ್ನು ಬಿಜೆಪಿಯವರು ಸೂಕ್ಷ್ಮವಾಗಿ ಪರಿಶೀಲಿಸಲಿ ಎಂದರು.

ಕೆಲವು ಎಂಎಲ್‌ಎಗಳು ಎನ್ಯೂಮರೇಷನ್ ಫಾರಂನಲ್ಲಿ ತಮ್ಮ ಭಾವಚಿತ್ರಗಳನ್ನು ಅಂಟಿಸಿ ಕೊಡುತ್ತಿರುವುದು ಕಂಡು ಬಂದ ಪ್ರಶ್ನೆಗೆ ಉತ್ತರಿಸಿದ ಡಿಸಿಎಂ, ಇದೆಲ್ಲಾ ಬಿಎಲ್‌ಒಗಳು ನೋಡಿಕೊಳ್ಳಬೇಕು. ಎನ್ಯೂಮರೇಷನ್ ಫಾರಂ ಅನ್ನು ಸ್ವತಃ ಬಿಎಲ್‌ಒಗಳೇ ಮನೆ ಮನೆಗೆ ಹೋಗಿ ಕೊಡಬೇಕು. ಆ ಕೆಲಸವನ್ನು ಅವರು ಸರಿಯಾಗಿ ಮಾಡಿಲ್ಲ ಎಂದಾದರೇ ಚುನಾವಣಾ ಆಯೋಗ ದವರು ನೋಡಿ ಕೊಳ್ಳುತ್ತಾರೆ. ಇದರಲ್ಲಿ ನಮ್ಮ ಸರ್ಕಾರದ ಪಾತ್ರ ಎಳ್ಳಷ್ಟು ಇಲ್ಲ ಎಂದು ಸ್ಪಷ್ಟಪಡಿಸಿದರು.



ರಾಜ್ಯ ಸರ್ಕಾರವನ್ನು ಕೇಳಿ ಅವರು ನಿಯಮಗಳನ್ನು ಮಾಡಿಲ್ಲ. ಒಂದು ತಿಂಗಳೊಳಗೆ ಎಸ್‌ಐಆರ್ ಪ್ರಕ್ರಿಯೆಯನ್ನು ಮುಗಿಸಬೇಕು ಎಂದು ಚುನಾವಣಾ ಆಯೋಗ ತೀರ್ಮಾನ ಮಾಡಿದೆ. ಅದರಂತೆ ಅಧಿಕಾರಿಗಳಿಗೆ ಸೂಚನೆಯನ್ನು ಕೊಟ್ಟಿದ್ದಾರೆ. ಇದಕ್ಕೆ ಬೇಕಾದ ಅಗತ್ಯ ಸಹಕಾರವನ್ನು ಮಾತ್ರ ರಾಜ್ಯ ಸರ್ಕಾರ ನೀಡುವುದಷ್ಟೇ ನಮ್ಮ ಜವಾಬ್ದಾರಿ.

–ಡಾ.ಜಿ. ಪರಮೇಶ್ವರ್, ಉಪಮುಖ್ಯಮಂತ್ರಿ

## ಎಕ್ಸ್‌ಪ್ರೆಸ್ ಕೆನಾಲ್ ಯೋಜನೆ ಮುಂದುವರಿಸಲಾಗುವುದು

ಹೇಮಾವತಿ ಎಕ್ಸ್‌ಪ್ರೆಸ್ ಕೆನಾಲ್ ಯೋಜನೆಯ ರದ್ದತಿಯ ಬಗ್ಗೆ ಮಾಧ್ಯಮದ ಪ್ರಶ್ನೆಗೆ ಉತ್ತರಿಸಿದ ಡಿಸಿಎಂ ಡಾ.ಜಿ. ಪರಮೇಶ್ವರ್, ಈ ಯೋಜನೆಗಾಗಿ 900 ಕೋಟಿ ರೂ.ಗಳಿಗೂ ಹೆಚ್ಚು ಹಣವನ್ನು ಮೀಸಲಿಡಲಾಗಿದೆ. ಈಗಾಗಲೇ ಕಾಮಗಾರಿಗಾಗಿ ಒಂದಿಷ್ಟು ಹಣವನ್ನು ವ್ಯಯಿಸಲಾಗಿದೆ. ಅದನ್ನು ಈಗ ನಿಲ್ಲಿಸಬೇಕು ಎಂದು ಹೇಳಿದರೆ ಅದು ಅಸಾಧ್ಯ. ಅದನ್ನು ಮುಂದುವರೆಸಲಾಗುವುದು ಎಂದು ಹೇಳಿದರು.

## ಸಂಪುಟ ವಿಸ್ತರಣೆಯಾದರೆ ಸರ್ಕಾರ ಅಲುಗಾಡಬಹುದು, ಮತ್ತೇನೂ ಆಗಲ್ಲ: ಸಚಿವ ಸತೀಶ್ ಜಾರಕಿಹೊಳಿ

**ಬೆಂಗಳೂರು, ಜು.8:** ಸಂಪುಟ ವಿಸ್ತರಣೆಯಾದರೆ ಸ್ವಲ್ಪಮಟ್ಟಿಗೆ ಸರ್ಕಾರ ಅಲುಗಾಡಬಹುದು. ಆದರೆ ಏನೂ ಆಗುವುದಿಲ್ಲ. ಡಿ.ಕೆ.ಶಿವ ಕುಮಾರ್ ಅವರೇ ಮುಖ್ಯಮಂತ್ರಿ ಯಾಗಿರುತ್ತಾರೆ ಎಂದು ಲೋಕೋಪ ಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ.



ನಗರದಲ್ಲಿಂದು ಸುದ್ದಿಗಾರ ರೊಂದಿಗೆ ಮಾತನಾಡಿದ ಅವರು, ಸಂಪುಟದಲ್ಲಿ ಹೊಸಬರಿಗೆ ಅವಕಾಶ ನೀಡುವ ಕುರಿತು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಹೈಕಮಾಂಡ್ ನಿರ್ಧಾರ ಮಾಡುತ್ತದೆ ಎಂದು ಹೇಳಿದರು.

ಸಂಪುಟ ವಿಸ್ತರಣೆಯ ವೇಳೆ ಸರ್ಕಾರ ಬುಡ ಅಲ್ಲಾಡುತ್ತದೆ ಎಂದು ಬಿಜೆಪಿಯ ರಾಜ್ಯಾಧ್ಯಕ್ಷರ ಹೇಳಿಕೆಗೆ ಪ್ರತಿಕ್ರಿಯಿಸಿದ ಸತೀಶ್ ಜಾರಕಿಹೊಳಿ ಸ್ವಲ್ಪಮಟ್ಟಿಗೆ ಅಲುಗಾಡ ಬಹುದು. ಆದರೆ ಏನೂ ಆಗುವುದಿಲ್ಲ. ಎರಡು ಮೂರು ದಿನಗಳ ಕಾಲ ಆ ರೀತಿಯಾಗಬಹುದು, ಆಮೇಲೆ ಎಲ್ಲವೂ ಸರಿಹೋಗುತ್ತದೆ

ಕಾಂಗ್ರೆಸ್ಸಿನಲ್ಲೂ ಮೂರು ಸಿಎಂಗಳಾಗುತ್ತಾರೆ ಎಂಬುದು ಸರಿಯಲ್ಲ. ಡಿ.ಕೆ.ಶಿವಕುಮಾರ್ ಅವರೇ ಮುಂದುವರೆಯುತ್ತಾರೆ. ನಮ ಸರ್ಕಾರ ಗಟ್ಟಿಯಾಗಿದೆ ಎಂದರು.ಧಾರವಾಡ ವಿಧಾನಸಭಾ ಕ್ಷೇತ್ರಕ್ಕೆ ಉಪ ಚುನಾವಣೆ ಘೋಷಣೆ ಯಾಗುವ ಮುನ್ನವೇ ಚರ್ಚೆ ಮಾಡುವ ಅಗತ್ಯ ಇಲ್ಲ. ಅಲ್ಲಿ ನಾವು ಯಾರನ್ನೂ ಗುರಿ ಮಾಡುತ್ತಿಲ್ಲ. ಕೆಲ ಜವಾಬ್ದಾರಿಗಳ ಹಿನ್ನೆಲೆಯಲ್ಲಿ ತಾವು ಭೇಟಿ ಮಾಡಿದ್ದು ನಿಜ. ಚುನಾವಣೆ ಬಂದಾಗ ಕೆಲಸ ಮಾಡಬೇಕಾಗುತ್ತದೆ ಎಂದು ಹೇಳಿದರು.

## ಒಂದು ಕೋಮಿನ ವಿರುದ್ಧ ಬಿಜೆಪಿ–ಜೆಡಿಎಸ್‌ನಿಂದ ದ್ವೇಷದ ರಾಜಕಾರಣ: ಶಾಸಕ ಎಚ್.ಸಿ.ಬಾಲಕೃಷ್ಣ ವಾಗ್ದಾಳಿ

**ರಾಮನಗರ, ಜು.8:** ಮತ ಹಾಕಿಸಿಕೊಳ್ಳುತ್ತಿದ್ದಾಗ ಮುಸ್ಲಿಮರೆಲ್ಲರೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರ ಪಾಲಿಗೆ ಸ್ಥಳೀಯರಾಗಿದ್ದರು. ಆದರೆ, ಈಗ ಎಸ್‌ಐಆರ್ ಕಾರಣಕ್ಕೆ ಬಾಂಗ್ಲಾದೇಶದವರಾಗಿ ಕಾಣುತ್ತಿದ್ದಾರೆ. ರಾಜಕೀಯಕ್ಕಾಗಿ ಕುಮಾರಸ್ವಾಮಿ ಅವರು ಒಂದು ಕೋಮಿನ ಮೇಲೆ ಗೂಬೆ ಕೂರಿಸುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ಮಾಗಡಿ ಶಾಸಕ ಎಚ್.ಸಿ. ಬಾಲಕೃಷ್ಣ ವಾಗ್ದಾಳಿ ನಡೆಸಿದರು.

ನಗರದ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಕಚೇರಿಯಲ್ಲಿ ಬುಧವಾರ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಎಸ್‌ಐಆರ್ ವಿಷಯದಲ್ಲಿ ಬಿಜೆಪಿ ಮತ್ತು ಜೆಡಿಎಸ್‌ನವರು ಗೊಂದಲ ಸೃಷ್ಟಿಸುತ್ತಾ ಉದ್ದೇಶಪೂರ್ವಕವಾಗಿ ಒಂದು ಕೋಮಿನ ವಿರುದ್ಧ ದ್ವೇಷದ ರಾಜಕಾರಣ ಮಾಡುತ್ತಿದ್ದಾರೆ ಎಂದರು.

ತಳಮಟ್ಟದಲ್ಲಿ ಎಸ್‌ಐಆರ್ ಕೆಲಸ ಮಾಡುತ್ತಿರುವ ಶಿಕ್ಷಕರ ಮೇಲೆ ಗೂಬೆ ಕೂರಿಸಿ, ಅವರಿಗೆ ಅವಮಾನ ಮಾಡುತ್ತಿದ್ದಾರೆ. ಇಷ್ಟಕ್ಕೂ ಇಡೀ ಪ್ರಕ್ರಿಯೆ ನಡೆಯುತ್ತಿರುವುದು ಸ್ವತಂತ್ರ ಸಂಸ್ಥೆಯಾದ ಕೇಂದ್ರ ಚುನಾವಣಾ ಆಯೋಗದಿಂದಲೇ ಹೊರತು ರಾಜ್ಯ ಸರ್ಕಾರದಿಂದಲ್ಲ' ಎಂದು ಕಿಡಿಕಾರಿದರು.

'ಆಯೋಗಕ್ಕೆ ಸಂಬಂಧಿಸಿದ ಕರ್ತವ್ಯಗಳಲ್ಲಿ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ಆಯೋಗದ ನಿಯಂತ್ರಣದಲ್ಲಿರುತ್ತಾರೆ. ಮಾನದಂಡಕ್ಕೆ ಅನುಗುಣವಾಗಿಯೇ ಎಸ್‌ಐಆರ್ ನಡೆಯುತ್ತಿದೆ. ಅಗತ್ಯ ದಾಖಲೆ ಕೊಟ್ಟರಷ್ಟೇ ಪ್ರಕ್ರಿಯೆ ನಡೆಸಲು ಸಾಧ್ಯ. ಹೀಗಿರುವಾಗ ಅಕ್ರಮ ಎಸಗಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದರು.



## ಯೋಗ್ಯ ವ್ಯಕ್ತಿ ಮೇಲ್ಮನೆಗೆ ಆಯ್ಕೆಯಾಗಲಿ: ಬಿ.ವೈ.ವಿಜಯೇಂದ್ರ

**ಬೆಂಗಳೂರು, ಜು.8** ನಮ್ಮ ಸಮಸ್ಯೆಗಳಿಗೆ ಸ್ಪಂದಿಸುವ ಯೋಗ್ಯ ವ್ಯಕ್ತಿ ವಿಧಾನ ಪರಿಷತ್ತಿಗೆ ಬರಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ. ವಿಧಾನಸೌಧವು ಪ್ರಜಾಪ್ರಭುತ್ವದ ದೇಗುಲ ಎಂದು ನಂಬಿದ್ದೇವೆ. ನಾಡಿನ ಆಗುಹೋಗು, ಜ್ವಲಂತ ಸಮಸ್ಯೆಗಳ ಬಗ್ಗೆ ಸಮಗ್ರವಾಗಿ ಚರ್ಚೆ ಆಗಲು ಯೋಗ್ಯ ವ್ಯಕ್ತಿಗಳು ಆಯ್ಕೆಯಾಗಿ ಬರಬೇಕು ಎಂಬ ಅಪೇಕ್ಷೆ ಜನಸಾಮಾನ್ಯರದು ಎಂದು ತಿಳಿಸಿದರು.



ಆಗ್ನೇಯ ಪದವೀಧರ ಕ್ಷೇತ್ರದ ಚುನಾವಣೆಯ ಪೂರ್ವಭಾವಿ ಸಭೆಯಲ್ಲಿ, ಈ ಕ್ಷೇತ್ರವನ್ನು ಬಿಜೆಪಿ 8 ಬಾರಿ ನಿರಂತರವಾಗಿ ಪ್ರತಿನಿಧಿಸಿದೆ. ಈಚಿನ ದಿನಗಳಲ್ಲಿ ತಮ್ಮ ರಾಜಕೀಯ ಚಪಲ, ರಾಜಕೀಯ ಚಟಕ್ಕಾಗಿ ವಿಧಾನಪರಿಷತ್ತಿಗೆ ಬರುತ್ತಿರುವುದನ್ನು ನೋಡುತ್ತಿದ್ದೇವೆ. ಹಣದ ಅಹಂನಿಂದ ಚುನಾವಣೆ ಗೆಲ್ಲುತ್ತೇವೆಂಬ ಭ್ರಮೆಯಿಂದ ಸ್ಪರ್ಧಿಸುವುದನ್ನು ನೋಡುತ್ತಿದ್ದೇವೆ ಎಂದು ತಿಳಿಸಿದರು. ಆಗ್ನೇಯ ಪದವೀಧರ ಕ್ಷೇತ್ರವನ್ನು ಬಿಜೆಪಿ 8 ಬಾರಿ ನಿರಂತರವಾಗಿ ಪ್ರತಿನಿಧಿಸಿದೆ. ಪದವೀಧರ ಕ್ಷೇತ್ರ, ಶಿಕ್ಷಣ ಕ್ಷೇತ್ರವು ಅತ್ಯಂತ ಪ್ರಮುಖವಾದುದು. ವಿಧಾನಪರಿಷತ್ತಿನಲ್ಲಿ ಸೂಕ್ತ ವ್ಯಕ್ತಿ ಈ ಕ್ಷೇತ್ರಗಳನ್ನು ಪ್ರತಿನಿಧಿಸಬೇಕು

ಬಿಜೆಪಿ ಒಬ್ಬ ಪ್ರಾಮಾಣಿಕ ಕಾರ್ಯಕರ್ತ, ಶಿಕ್ಷಣ ಕ್ಷೇತ್ರದಲ್ಲಿ ಹಲವಾರು ದಶಕಗಳಿಂದ ಸೇವೆ ಮಾಡುತ್ತಿರುವ ಸಮಾಜಮುಖಿಯಾಗಿ ಕೆಲಸ ಮಾಡುವ ಪ್ರಾಮಾಣಿಕ ವ್ಯಕ್ತಿ ಕೆ. ಎಂ.ಸುರೇಶರನ್ನು ಎನ್‌ಡಿಎ ಅಭ್ಯರ್ಥಿಯಾಗಿ ಘೋಷಿಸಿದೆ. ಚುನಾವಣೆಗೆ ಹೆಚ್ಚು ದಿನಗಳು ಉಳಿದಿಲ್ಲ. ಮತದಾರರ ಸಂಖ್ಯೆ 50 ಸಾವಿರ ದಾಟುವ ಸಾಧ್ಯತೆ ಇದೆ ಎಂದು ತಿಳಿಸಿದರು.

ಕೆ.ಎಂ.ಸುರೇಶ ಅವರು 5 ಜಿಲ್ಲೆಗಳಲ್ಲಿ ಪ್ರವಾಸ ಮಾಡಬೇಕಿದೆ. 33 ವಿಧಾನಸಭಾ ಕ್ಷೇತ್ರಗಳನ್ನು ಒಳಗೊಂಡ ಈ ಕ್ಷೇತ್ರವನ್ನು ಸುತ್ತಬೇಕಿದೆ. ಚಿತ್ರದುರ್ಗ ಜಿಲ್ಲೆಯ ಮುಖಂಡರು ಹೆಚ್ಚಿನ ಜವಾಬ್ದಾರಿ ತೆಗೆದುಕೊಳ್ಳಬೇಕು ಎಂದು ವಿನಂತಿಸಿದರು. ಕಾಂಗ್ರೆಸ್ ಪಕ್ಷ ಆಡಳಿತದಲ್ಲಿ ಇದ್ದಾಗಲೂ ಶಿಕ್ಷಣ– ಪದವೀಧರರ ಕ್ಷೇತ್ರದಲ್ಲಿ ಬಿಜೆಪಿ ಜಯಭೇರಿ ಬಾರಿಸುತ್ತ ಬಂದಿದೆ. ಪರಿಸ್ಥಿತಿ ಬದಲಾಗುತ್ತಿದೆ. ಆಡಳಿತ ಪಕ್ಷವು ಹಲವು ತಿಂಗಳಿನಿಂದ ಮತದಾರರನ್ನು ನೋಂದಣಿ ಮಾಡಿಸುತ್ತ ಬಂದಿದೆ. ಇನ್ನು ಕೆಲವು ತಿಂಗಳು ಬಾಕಿ ಇದ್ದು ನಾವು ಪ್ರಕ್ರಿಯೆಯನ್ನು ಚುರುಕುಗೊಳಿಸಬೇಕಾಗಿದೆ ಎಂದು ಹೇಳಿದರು.

ಬಿಜೆಪಿ ಜಿಲ್ಲಾ ಅಧ್ಯಕ್ಷ ಕೆ.ಟಿ.ಕುಮಾರಸ್ವಾಮಿ, ಮಾಜಿ ಶಾಸಕರಾದ ತಿಪ್ಪಾರೆಡ್ಡಿ, ಬಸವರಾಜ್, ಶಾಸಕ ಚಂದ್ರಣ್ಣ, ವಿಧಾನಪರಿಷತ್ ಮಾಜಿ ಸದಸ್ಯ ಶಿವಯೋಗಿ ಸ್ವಾಮಿ, ವಿಧಾನಪರಿಷತ್ ಸದಸ್ಯ ಹಾಗೂ ಚುನಾವಣಾ ಜವಾಬ್ದಾರಿ ಹೊತ್ತಿರುವ ಕೇಶವಪ್ರಸಾದ್, ವಿಧಾನಪರಿಷತ್ ಸದಸ್ಯ ನವೀನ್, ಆಗ್ನೇಯ ಪದವೀಧರ ಕ್ಷೇತ್ರದ ಬಿಜೆಪಿ, ಎನ್‌ಡಿಎ ಅಭ್ಯರ್ಥಿ ಕೆ.ಎಂ.ಸುರೇಶ್, ಕಾಡುಗೊಲ್ಲರ ಸಮಾಜದ ರಾಜ್ಯ ಅಧ್ಯಕ್ಷ ರಾಜಣ್ಣ, ಮುಖಂಡರಾದ ಕುಮಾರಸ್ವಾಮಿ, ರಘುಚಂದನ್, ನಾಗರಾಜ್, ಲೋಕೇಶ್, ಮಾಜಿ ಜಿಲ್ಲಾಧ್ಯಕ್ಷ ರವೀಂದ್ರನಾಥ್, ಲಕ್ಷ್ಮೀಕಾಂತ್, ಮಧುಗಿರಿ ಗಿರೀಶ್, ಪಕ್ಷದ ಪ್ರಮುಖರು ಇದ್ದರು.

### ಕಾಂಗ್ರೆಸ್ ವಿರುದ್ಧ ಜನರಲ್ಲಿ ಅಸಮಾಧಾನ

**ಚಂದ್ರಣ್ಣ ಅವರು ನನ್ನನ್ನು ಭವಿಷ್ಯದ ಮುಖ್ಯಮಂತ್ರಿ ಎಂಬ ಮಾತನ್ನು ಪ್ರೀತಿಯಿಂದ ವಿಶ್ವಾಸವಿಟ್ಟು ಹೇಳಿದ್ದಾರೆ. ಅದುವೇ ನಮಗೆ ಸಮಸ್ಯೆ ಆಗಿದೆ. ನಾನು ಒಬ್ಬ ರಾಜ್ಯ ಅಧ್ಯಕ್ಷನಾಗಿ ಕಿವಿಮಾತು ಹೇಳಲು ಬಯಸುತ್ತೇನೆ. ಮುಖ್ಯಮಂತ್ರಿ ಯಾರ ಆಗಬೇಕೆಂಬುದು ಮುಖ್ಯವಲ್ಲ; ಮತದಾರರು ಈ ಭ್ರಷ್ಟ– ಜನವಿರೋಧಿ, ಹಿಂದೂ ವಿರೋಧಿ ಸರಕಾರದ ವಿರುದ್ಧ, ಪರಿಶಿಷ್ಟ ಜಾತಿ, ವರ್ಗದ ದುಡ್ಡನ್ನು ಕೊಳ್ಳೆ ಹೊಡೆಯುವ ಕಾಂಗ್ರೆಸ್ ಸರಕಾರದ ವಿರುದ್ಧ ಬೇಸತ್ತಿದ್ದಾರೆ. ಹಾಗಾಗಿ ನಮ್ಮ ನಿಮ್ಮೆಲ್ಲರ ಜವಾಬ್ದಾರಿ ಹೆಚ್ಚಾಗಿದೆ ಎಂದು ವಿಜಯೇಂದ್ರ ತಿಳಿಸಿದರು.**

## ಸುರೇಶ್ ಕುಮಾರ್ ಕಚೇರಿ ಎದುರು ಕಾಂಗ್ರೆಸ್ ಕಾರ್ಯಕರ್ತರ ಗಲಭೆ ಖಂಡನೀಯ: ರವಿಕುಮಾರ್

**ಬೆಂಗಳೂರು, ಜು.8:** ಶಾಸಕ ಎಸ್. ಸುರೇಶ್ ಕುಮಾರ್ ಅವರ ಕಚೇರಿಗೆ ಘೇರಾವ್ ಹಾಕಲು ಕಾಂಗ್ರೆಸ್ ಕಾರ್ಯಕರ್ತರು ನಡೆಸಿದ ಪ್ರಯತ್ನಗಳನ್ನು ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ತೀವ್ರವಾಗಿ ಖಂಡಿಸಿದ್ದಾರೆ.

ಸುರೇಶ್ ಕುಮಾರ್ ವಿರುದ್ಧದ ಭ್ರಷ್ಟಾಚಾರ ಮತ್ತು ಪಕ್ಷಪಾತದ ಆರೋಪಗಳನ್ನು ರವಿ ಕುಮಾರ್ ಸ್ಪಷ್ಟವಾಗಿ ತಳ್ಳಿ ಹಾಕಿದ್ದಾರೆ.

ಸುರೇಶ್ ಕುಮಾರ್ ವಿರುದ್ಧ ಮಾಡಲಾದ ಎಲ್ಲಾ ಆರೋಪಗಳು ಆಧಾರರಹಿತ, ದುರುದ್ದೇಶಪೂರಿತ ಮತ್ತು ಸತ್ಯಕ್ಕೆ ದೂರವಾದವು. ಕಾಂಗ್ರೆಸ್ ಕಾರ್ಯಕರ್ತರು ಸುರೇಶ್ ಕುಮಾರ್ ವಿರುದ್ಧ ಅಪಪ್ರಚಾರದಲ್ಲಿ ತೊಡಗಿದ್ದಾರೆ, ಅವರ ರಾಜಕೀಯ ದಾಖಲೆ ಸಂಪೂರ್ಣವಾಗಿ ಕಳಂಕರಹಿತವಾಗಿದೆ" ಎಂದು ರವಿಕುಮಾರ್ ಹೇಳಿದ್ದಾರೆ.

ಸುರೇಶ್ ಕುಮಾರ್ ಕಾರಣ ದಿಂದಾಗಿ ಬಿಬಿಎಂಪಿಗೆ 300 ಕೋಟಿ ರೂ. ನಷ್ಟವಾಗಿದೆ ಎಂದು ಕಾಂಗ್ರೆಸ್ ಲೋಕಾಯುಕ್ತಕ್ಕೆ ದೂರು ನೀಡಿದೆ. ಸುರೇಶ್ ಕುಮಾರ್ ಅವರು ಲೋಕಾಯುಕ್ತಕ್ಕೆ ಶೀಘ್ರದಲ್ಲೇ ಉತ್ತರಿಸುವುದಾಗಿ ಹೇಳಿದ್ದಾರೆ. ತನಿಖಾ ಸಂಸ್ಥೆ ತನ್ನ ಕೆಲಸವನ್ನು ಪೂರ್ಣಗೊಳಿಸಿ ವರದಿಯನ್ನು ಸಲ್ಲಿಸಲಿ. ಅಲ್ಲಿಯವರೆಗೆ ಕಾಂಗ್ರೆಸ್ ಕಾಯಬೇಕಾಗಿದೆ. ಬದಲಾಗಿ, ಗ್ರ್ಯಾಂಡ್ ಓಲ್ಡ್ ಪಕ್ಷದ ಕಾರ್ಯಕರ್ತರು ಕಾನೂನನ್ನು ತಮ್ಮ ಕೈಗೆ ತೆಗೆದುಕೊಂಡು ಶಾಸಕರ ಕಚೇರಿಯ ಮುಂದೆ ಪ್ರತಿಭಟನೆ ನಡೆಸಿದ್ದಾರೆ. ಇದು ಸ್ವೀಕಾರಾರ್ಹವಲ್ಲ ಮಾತ್ರವಲ್ಲದೆ ತೀವ್ರವಾಗಿ ಖಂಡನೀಯವಾಗಿದೆ ಎಂದು ರವಿ ಕುಮಾರ್ ಹೇಳಿದ್ದಾರೆ.



ಬಿಜೆಪಿ ಈ ಘಟನೆಯನ್ನು ಗಂಭಿರವಾಗಿ ಪರಿಗಣಿಸಿದೆ,ನಾವು ಸಾಂವಿಧಾನಿಕ ಸುವ್ಯವಸ್ಥೆ ಮತ್ತು ಕಾನೂನಿನ ನಿಯಮವನ್ನು ನಂಬುತ್ತೇವೆ. "ಈ ಗೂಂಡಾಗಿರಿ ಮುಂದುವರಿದರೆ ಬಿಜೆಪಿ ಕಾಂಗ್ರೆಸ್ ವಿರುದ್ಧ ಶಾಂತಿಯುತ ಪ್ರತಿಭಟನೆ ನಡೆಸುತ್ತದೆ" ಎಂದು ರವಿ ಕುಮಾರ್ ಎಚ್ಚರಿಸಿದ್ದಾರೆ.

## 10 ಅಧಿಕಾರಿಗಳ ಮನೆಗಳ ಮೇಲೆ ಲೋಕಾ ದಾಳಿ: ಅಪಾರ ಸಂಪತ್ತು ಪತ್ತೆ

**ಬೆಂಗಳೂರು, ಜು.8:** ಲೋಕಾಯುಕ್ತ ಪೊಲೀಸರು ರಾಜ್ಯದ ಹಲವೆಡೆ ಮಿಂಚಿನ ದಾಳಿ ನಡೆಸಿ 10 ಸರ್ಕಾರಿ ಅಧಿಕಾರಿಗಳ ಅಕ್ರಮ ಸಂಪಾದನೆಯನ್ನು ಬಯಲಿಗೆಳೆದಿದ್ದಾರೆ. ಅಕ್ರಮ ಸಂಪತ್ತಿನ ಬಗ್ಗೆ ದೂರುಗಳು ಬಂದ ಹಿನ್ನೆಲೆಯಲ್ಲಿ ಪರಿಶೀಲನೆ ನಡೆಸಿ ಇಂದು ರಾಜ್ಯದ 30ಕ್ಕೂ ಹೆಚ್ಚು ಕಡೆ ಏಕಕಾಲದಲ್ಲಿ ದಾಳಿ ನಡೆಸಲಾಗಿದೆ.







ಸರ್ಕಾರದ "ಸುರಕ್ಷಿತ ಪಾದಚಾರಿ ಮಾರ್ಗ ಅಭಿಯಾನ"ವನ್ನು ವಿರೋಧಿಸಿ ಬುಧವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬೀದಿ ವ್ಯಾಪಾರಿಗಳು ಪ್ರತಿಭಟನೆ ನಡೆಸಿದರು. 30 ದಿನಗಳ ಕಡ್ಡಾಯ ಲಿಖಿತ ಸೂಚನೆಯನ್ನು ಪೂರೈಸದೆ, ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಬಲವಂತದ ತೆರವು ಮತ್ತು ತಳ್ಳುಗಾಡಿಗಳು, ದಾಸ್ತಾನು ಮತ್ತು ತೂಕದ ಮಾಪಕಗಳನ್ನು ವಶಪಡಿಸಿಕೊಳ್ಳುತ್ತಿದೆ ಎಂದು ಸಂಘಗಳು ಆರೋಪಿಸಿವೆ.

### ತುರ್ತು ಪರಿಹಾರದ ಜತೆಗೆ 50 ಸಾವಿರದವರೆಗಿನ ಸಾಲಮನ್ನಾ ಮಾಡಿ

# ಬರ, ನೆರೆಯಿಂದ ಸಂತ್ರಸ್ತರಾದವರ ನೆರವಿಗೆ ತಕ್ಷಣ ಧಾವಿಸಿ: ಆಶೋಕ್ ಆಗ್ರಹ

**ಮುಖ್ಯಮಂತ್ರಿಗೆ ಪ್ರತಿಪಕ್ಷ ನಾಯಕ ಆರ್.ಅಶೋಕ್ ಪತ್ರ**

**ಬೆಂಗಳೂರು, ಜು.8:** ಬರಗಾಲ ಮತ್ತು ಪ್ರವಾಹದಿಂದ ಸಂತ್ರಸ್ತರಾಗಿರುವ ರೈತರ ನೆರವಿಗೆ ರಾಜ್ಯ ಸರ್ಕಾರ ಕೂಡಲೇ ಧಾವಿಸಬೇಕೆಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಆಗ್ರಹಿಸಿ ದ್ದಾರೆ. ಅಲ್ಲದೇ, ತುರ್ತು ಪರಿಹಾರದ ಜೊತೆಗೆ ತಲಾ 50,000 ರೂ. ವರೆಗಿನ ಸಾಲ ಮನ್ನಾ ಮಾಡಬೇಕು ಎಂದು ಮುಖ್ಯಮಂತ್ರಿಗಳಿಗೆ ಪತ್ರ ಬರೆದಿದ್ದಾರೆ. ರಾಜ್ಯದ ಹಲವಾರು ಜಿಲ್ಲೆಗಳು ತೀವ್ರ ಬರಗಾಲದಿಂದ ತತ್ತರಿಸುತ್ತಿದ್ದರೆ, ಮತ್ತೊಂದೆಡೆ ಉತ್ತರ ಕರ್ನಾಟಕ ಹಾಗೂ ಮಲೆನಾಡು ಭಾಗಗಳಲ್ಲಿ ಅತಿವೃಷ್ಟಿ ಮತ್ತು ಪ್ರವಾಹದ ಆತಂಕ ಎದುರಾಗಿದೆ. ಲಕ್ಷಾಂತರ ರೈತರು, ಕೃಷಿ ಕಾರ್ಮಿಕರು ಹಾಗೂ ಗ್ರಾಮೀಣ ಕುಟುಂಬಗಳು ಸಂಕಷ್ಟದಲ್ಲಿದ್ದು, ಸರ್ಕಾರದ ತುರ್ತು ನೆರವು ನಿರೀಕ್ಷಿಸುತ್ತಿದ್ದಾರೆ. ಇತ್ತೀಚೆಗೆ ತಾವು ಬರಪೀಡಿತ ರೈತರ ಸಾಲಮನ್ನಾ ಕುರಿತು ಪರಿಶೀಲನೆ ನಡೆಸುವುದಾಗಿ ಹೇಳಿಕೆ ನೀಡಿದ್ದೀರಿ. ಆದರೆ ರೈತರಿಗೆ ಈಗ ಬೇಕಾಗಿರುವುದು ಪರಿಶೀಲನೆ ಅಲ್ಲ, ತಕ್ಷಣದ ನಿರ್ಧಾರ. ಆದ್ದರಿಂದ ವಿಳಂಬ ಮಾಡದೆ ಬರ ಮತ್ತು ಪ್ರವಾಹದಿಂದಸಂತ್ರಸ್ತರಾಗಿರುವ ಎಲ್ಲ ರೈತರಿಗೆ 50,000 ರೂ.ವರೆಗೆ ಸಾಲಮನ್ನಾ ಘೋಷಿಸಿ ಅವರ ಸಂಕಷ್ಟಕ್ಕೆ ಸ್ಪಂದಿಸುವಂತೆ ಆಗ್ರಹಿಸಿದ್ದಾರೆ.



**ಕೇಂದ್ರದ ವಿರುದ್ಧ ರಾಜಕೀಯ ನಿರ್ಣಯ ಅಂಗೀಕಾರಕ್ಕೆ ಖಂಡನೆ**

ಕೆಪಿಸಿಸಿ ಸರ್ವಸದಸ್ಯರ ಸಭೆಯಲ್ಲಿ ಬರ ಪರಿಹಾರ ಕಾರ್ಯಕ್ಕಾಗಿ 10 ಸಾವಿರ ಕೋಟಿ ರೂ. ಮೊತ್ತವನ್ನು ಕೇಂದ್ರ ಸರ್ಕಾರ ಕೂಡಲೇ ಬಿಡುಗಡೆ ಮಾಡಬೇಕೆಂದು ಮಾಡಿರುವ ನಿರ್ಣಯ ಬೇಜವಾಬ್ದಾರಿಯುತ ಮತ್ತು ದುರದೃಷ್ಟಕರ. ರಾಜ್ಯ ಸರ್ಕಾರ ತನ್ನ ವೈಫಲ್ಯ ಮುಚ್ಚಿಹಾಕಲು ಹಾಗೂ ರೈತರ ಗಮನ ಬೇರೆಡೆ ಸೆಳೆಯಲು ಕೇಂದ್ರ ಸರ್ಕಾರದ ವಿರುದ್ಧ ರಾಜಕೀಯ ನಿರ್ಣಯ ಅಂಗೀಕರಿಸಿರುವುದು ಖಂಡನೀಯ. ಪ್ರಕೃತಿ ವಿಕೋಪವನ್ನು ಎದುರಿಸುವ ಸಂದರ್ಭದಲ್ಲೂ ರಾಜಕೀಯ ಲಾಭ–ನಷ್ಟದ ಲೆಕ್ಕಾಚಾರ ಮಾಡುವ ಮನಸ್ಥಿತಿ ಈ ನಿರ್ಣಯದಲ್ಲಿ ಪ್ರತಿಫಲಿಸಿದೆ ಎಂದು ಅಶೋಕ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬರ ನಿರ್ವಹಣೆ, ಬೆಳೆಹಾನಿ ಸಮೀಕ್ಷೆ, ಎಸ್ಡಿಆರ್‌ಎಫ್ ನಿಧಿಯ ಸಮರ್ಪಕ ಬಳಕೆ, ರೈತರಿಗೆ ಮಧ್ಯಂತರ ಪರಿಹಾರ ವಿತರಣೆ ಹಾಗೂ ಕೇಂದ್ರ ಸರ್ಕಾರಕ್ಕೆ ಕಾಲಮಿತಿಯೊಳಗೆ ಸಮಗ್ರ ವರದಿ ಸಲ್ಲಿಸುವುದು ರಾಜ್ಯ ಸರ್ಕಾರದ ಜವಾಬ್ದಾರಿ. ಈ ಕರ್ತವ್ಯಗಳನ್ನು ಸಮರ್ಪಕವಾಗಿ ನಿರ್ವಹಿಸುವ ಬದಲು, ತನ್ನ ಆಡಳಿತ ವೈಫಲ್ಯ ಮರೆಮಾಚಲು ಕೇಂದ್ರ ಸರ್ಕಾರದ ವಿರುದ್ಧ ಆರೋಪಗಳ ನಿರ್ಣಯ ಕೈಗೊಂಡಿರುವುದು ರಾಜ್ಯದ ರೈತರಿಗೆ ಮಾಡುವ ದೊಡ್ಡ ದ್ರೋಹ ಎಂದಿದ್ದಾರೆ.

**ಕೇಂದ್ರದಿಂದ ದಾಖಲೆ ಪ್ರಮಾಣ ದಲ್ಲಿ ನೆರವು:** ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರ 2 ಅಧಿಕಾರಕ್ಕೆ ಬಂದ ನಂತರ ಕರ್ನಾಟಕವು ವಿಪತ್ತು ನಿರ್ವಹಣೆ ಮತ್ತು ಪರಿಹಾರಕ್ಕಾಗಿ ಕೇಂದ್ರ ಸರ್ಕಾರದಿಂದ ದಾಖಲೆ ಪ್ರಮಾಣದ ನೆರವು ಪಡೆದಿದೆ. ಕಳೆದ 12 ವರ್ಷಗಳಲ್ಲಿ ಎನ್‌ಡಿಆರ್‌ಎಫ್ ಅಡಿಯಲ್ಲಿಯೇ 12,542.97 ಕೋಟಿಗೂ ಅಧಿಕ ನೆರವು ರಾಜ್ಯಕ್ಕೆ ಬಿಡುಡೆಯಾಗಿದೆ.

ಇದರ ಜೊತೆಗೆ ಎಸ್‌ಡಿಆರ್‌ಎಫ್ ಅಡಿಯಲ್ಲಿ ಕೇಂದ್ರದ ಪಾಲಿನ 3,806.30 ಕೋಟಿಗಳನ್ನು ನಿಯಮಾ ನುಸಾರ ನಿರಂತರವಾಗಿ ಬಿಡುಗಡೆ ಮಾಡಲಾಗಿದೆ. ಇಷ್ಟೊಂದು ದೊಡ್ಡ ಪ್ರಮಾಣದ ನೆರವು ನೀಡಿರುವ ಕೇಂದ್ರ ಸರ್ಕಾರ ಕರ್ನಾಟಕವನ್ನು ನಿರ್ಲಕ್ಷಿಸಿದೆ ಎಂದು ಕೆಪಿಸಿಸಿ ನಿರ್ಣಯದಲ್ಲಿ ಬಿಂಬಿಸಿ ರುವುದು ಅಧಿಕೃತ ಅಂಕಿ–ಅಂಶಗಳನ್ನೇ ನಿರಾಕರಿಸುವ ಪ್ರಯತ್ನವಾಗಿದೆ ಎಂದು ಅಶೋಕ್ ಹೇಳಿದ್ದಾರೆ.

## ಸಮಾನಾಂತರ ಎಸ್‌ಐಆರ್: ರಾಜ್ಯ ಚುನಾವಣಾ ಆಯೋಗಕ್ಕೆ ಹೈಕೋರ್ಟ್ ನೋಟಿಸ್

**ಬೆಂಗಳೂರು, ಜು.8:** ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಕೆಲ ವಾರ್ಡ್‌ಗಳಿಗೆ ಪರ್ಯಾಯ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಕ್ಷರಣೆಗೆ ಮುಂದಾಗಿ ರುವ ಕ್ರಮ ಪ್ರಶ್ನಿಸಿ ಸಲ್ಲಿಕೆಯಾಗಿರುವ ಅರ್ಜಿ ಸಂಬಂಧ ರಾಜ್ಯ ಚುನಾವಣಾ ಆಯೋಗಕ್ಕೆ ಕರ್ನಾಟಕ ಹೈಕೋರ್ಟ್ ನೋಟಿಸ್ ಜಾರಿಗೊಳಿಸಿದೆ.

ಬೆಂಗಳೂರು–ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಕೆಲ ವಾರ್ಡ್‌ಗಳಿಗೆ ಪರ್ಯಾಯ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಕ್ಷರಣೆಗೆ ಮುಂದಾಗಿ ರುವ ಕ್ರಮ ಪ್ರಶ್ನಿಸಿ ಸಲ್ಲಿಕೆಯಾಗಿರುವ ಅರ್ಜಿ ಸಂಬಂಧ ರಾಜ್ಯ ಚುನಾವಣಾ ಆಯೋಗಕ್ಕೆ ಕರ್ನಾಟಕ ಹೈಕೋರ್ಟ್ ನೋಟಿಸ್ ಜಾರಿಗೊಳಿಸಿದೆ.

ದೇಶದಾದ್ಯಂತ ಕೇಂದ್ರ ಚುನಾವಣಾ ಆಯೋಗ ಹಮ್ಮಿ ಕೊಂಡಿರುವ ಎಸ್‌ಐಆರ್ ಪ್ರಕ್ರಿಯೆ ಚಾಲ್ತಿಯಲ್ಲಿರುವಾಗಲೇ, ಬೆಂಗಳೂರಿನ ಕೆಲ ವಾರ್ಡ್‌ಗಳಿಗೆ ಪ್ರತ್ಯೇಕ ಹಾಗೂ ಸಮಾನಾಂತರ ಎಸ್‌ಐಆರ್ ನಡೆಸಲು ರಾಜ್ಯ ಚುನಾವಣಾ ಆಯೋಗ ಜೂನ್ 19ರಂದು ಹೊರಡಿಸಿ ರುವ ಆದೇಶ ರದ್ದು ಕೋರಿ ಬೆಂಗಳೂರಿನ ವಿವೇಕ್ ಸೇರಿ ಐದು ಮಂದಿ ಸಲ್ಲಿಸಿರುವ ಅರ್ಜಿಯನ್ನು ನ್ಯಾ.ಸೂರಜ್ ಗೋವಿಂದರಾಜ್ ಅವರ ಏಕಸದಸ್ಯ ಪೀಠ ವಿಚಾರಣೆ ನಡೆಸಿತು.

ಕೆಲ ಕಾಲ ಅರ್ಜಿ ಆಲಿಸಿದ ಪೀಠವು ಪ್ರತಿವಾದಿಗಳಾದ ರಾಜ್ಯ ಚುನಾವಣಾ ಆಯೋಗ, ರಾಜ್ಯಸರ್ಕಾರ ಹಾಗೂ ಕೇಂದ್ರ ಚುನಾವಣಾ ಆಯೋಗಕ್ಕೆ ನೋಟಿಸ್ ಜಾರಿಗೊಳಿಸಿ ತಲ್ಲದೆ, ಅರ್ಜಿಗೆ ಒಂದು ವಾರದೊಳಗೆ ಆಕ್ಷೇಪಣೆ ಸಲ್ಲಿಸುವಂತೆ ಎಲ್ಲ ಪ್ರತಿವಾದಿಗಳಿಗೆ ಸೂಚಿಸಿ ವಿಚಾರಣೆಯನ್ನು ಜುಲೈ 15ಕ್ಕೆ ಮುಂದೂಡಿತು.ಅಡ್ವೊಕೇಟ್ ಜನರಲ್ ಕೆ ಶಶಿಕಿರಣ್ ಶೆಟ್ಟಿ ಅವರು ಆಕ್ಷೇಪಣೆ ಸಲ್ಲಿಸಲು ಕಾಲಾವಕಾಶ ನೀಡಬೇಕು ಎಂದು ಕೋರಿದರು. ಅರ್ಜಿದಾರರ ಪರವಾಗಿ ವಕೀಲ ವೆಂಕಟೇಶ್ ದಳವಾಯಿ ಹಾಜರಾಗಿದ್ದರು.

### ಸಾರ್ವಜನಿಕರು, ರಾಜಕೀಯ ಪಕ್ಷಗಳ ದೂರಿನ ಆಧಾರದಲ್ಲಿ ಕ್ರಮ: ಅನ್ಬುಕುಮಾರ್

# ಎಸ್‌ಐಆರ್‌ನಲ್ಲಿ ಅಕ್ರಮ: ಸತ್ಯಾಸತ್ಯತೆ ಹೊರತರಲು ಅಧಿಕಾರಿಗಳ ಪರಿಶೀಲನೆ

**ಬೆಂಗಳೂರು, ಜು.8:** ರಾಜಧಾನಿ ಬೆಂಗಳೂರಿನಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಅಕ್ರಮ ನಡೆದಿರುವ ಗಂಭೀರ ಆರೋಪಗಳು ಕೇಳಿಬಂದಿವೆ. ಈ ಹಿನ್ನೆಲೆಯಲ್ಲಿ ಚುನಾವಣಾ ಆಯೋಗವು ತನಿಖೆಗೆ ಮುಂದಾಗಿದ್ದು, ಸಾರ್ವಜನಿಕರು ಮತ್ತು ರಾಜಕೀಯ ಪಕ್ಷಗಳಿಂದ ಬಂದಿರುವ ದೂರುಗಳ ಆಧಾರದ ಮೇಲೆ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ತಿಳಿಸಿದ್ದಾರೆ.

ಮತಪಟ್ಟಿ ಪರಿಷ್ಕರಣೆಯಲ್ಲಿ ನಡೆದಿರಬಹುದಾದ ಅಕ್ರಮಗಳ ಕುರಿತು ಬಂದಿರುವ ಎಲ್ಲ ದೂರುಗಳನ್ನು ಗಂಭೀರವಾಗಿ ಪರಿಗಣಿಸಲಾಗಿದೆ. ಈ ಇಡೀ ಪ್ರಕ್ರಿಯೆಯ ಸತ್ಯಾಸತ್ಯತೆಯನ್ನು ಹೊರತರಲು ಜಂಟಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ನೇತೃತ್ವದಲ್ಲಿ ವಿಶೇಷ ಪರಿಶೀಲನೆ ನಡೆಸಲಾಗುತ್ತಿದೆ. ದೂರು ಬಂದಿರುವ ನಿರ್ದಿಷ್ಟ ಪ್ರದೇಶಗಳು ಮತ್ತು ವಿಧಾನಸಭಾ ಕ್ಷೇತ್ರಗಳ ಮೇಲೆ ಅಧಿಕಾರಿಗಳು ನಿಗಾ ಇಟ್ಟಿದ್ದು, ಶೀಘ್ರದಲ್ಲೇ ವರದಿ ಸಲ್ಲಿಕೆಯಾಗಲಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.



ಮನೆ ಮನೆಗೆ ಹೋಗದೆ ಗುಂಪು ಗುಂಪಾಗಿ ಫಾರಂ ವಿತರಣೆ ಮಾಡಿದ ಆರೋಪ ಮತ್ತು ಕರ್ತವ್ಯ ಲೋಪ ಎಸಗಿದ ಹಿನ್ನೆಲೆಯಲ್ಲಿ ಆಯೋಗವು ಈಗಾಗಲೇ ಕಠಿಣ ಕ್ರಮಕ್ಕೆ ಮುಂದಾಗಿದೆ. ನಿಯಮ ಉಲ್ಲಂಘಿಸಿರುವ ಬೆಂಗಳೂರಿನ 35ಕ್ಕೂ ಹೆಚ್ಚು ಬೂತ್ ಮಟ್ಟದ ಅಧಿಕಾರಿಗಳಿಗೆ ಈಗಾಗಲೇ ಶೋಕಾಸ್ (ಕಾರಣ ಕೇಳಿ) ನೋಟಿಸ್ ಜಾರಿ ಮಾಡಲಾಗಿದೆ. ಅಧಿಕಾರಿಗಳ ಬೇಜವಾಬ್ದಾರಿತನ ಅಥವಾ ಅಕ್ರಮ ಸಾಬೀತಾದರೆ ಕಾನೂನು ಮುಖೇನ ಕಠಿಣ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದು ಅನ್ಬು ಕುಮಾರ್ ಅವರು ಖಡಕ್ ಸಂದೇಶ ನೀಡಿದ್ದಾರೆ.

### ಎಸ್‌ಐಆರ್‌ಗೆ 4.48 ಕೋಟಿ ಅರ್ಜಿ ವಿತರಣೆ

ರಾಜ್ಯದಲ್ಲಿ ಮತಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ನಡೆಯುತ್ತಿದೆ. 5 ಕೋಟಿ 54 ಲಕ್ಷ 32 ಸಾವಿರದ 314 ಮಂದಿಗೆ ಅರ್ಜಿ ವಿತರಣಾ ಕಾರ್ಯ ನಡೆಯುತ್ತಿದೆ . ಇದುವರೆಗೂ 44816723 ಮಂದಿಗೆ ಅರ್ಜಿ ಕೊಟ್ಟಿದ್ದು, ಶೇಕಡಾ 80.85ನಷ್ಟು ಅರ್ಜಿ ವಿತರಣೆ ಆಗಿದೆ ಎಂದು ಕರ್ನಾಟಕ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ಮಾಹಿತಿ ನೀಡಿದ್ದಾರೆ. ಜುಲೈ 29ರವರೆಗೆ ಈ ಪ್ರಕ್ರಿಯೆ ನಿರಂತರವಾಗಿ ನೆಡೆಯಲಿದ್ದು, ಇದರಲ್ಲಿ ಎಲ್ಲರೂ ಭಾಗವಹಿಸಬೇಕು. ಇನ್ನು ಎಸ್‌ಐಆರ್ ಪ್ರಕ್ರಿಯೆಯನ್ನು ಆನ್‌ಲೈನ್‌ನಲ್ಲಿ ಮಾಡುವ ಬಗ್ಗೆ ಮಾಹಿತಿ ನೀಡಿದ ಅನ್ಬುಕುಮಾರ್, ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದರೆ ಮತ್ತೆ ಬಿಎಲ್‌ಒಗಳಿಗೆ ಅರ್ಜಿ ಫಿಲ್ ಮಾಡಿ ಕೊಡುವ ಅವಶ್ಯಕತೆ ಇಲ್ಲ. ಅದು ಆಟೋಮ್ಯಾಟಿಕ್ ಆಗಿ ಬಿಎಲ್‌ಒ ಲಾಗಿನ್‌ಗೆ ಹೋಗುತ್ತೆ. ಅರ್ಜಿ ತುಂಬಿ ಬೇಕಾದರೂ ಬಿಎಲ್‌ಒಗಳಿಗೆ ಕೊಡಬಹುದು ಎಂದು ಹೇಳಿದರು. 2002ರ ಎಸ್‌ಐಆರ್‌ನಲ್ಲಿ ಮಾಹಿತಿ ಇಲ್ಲದಿದ್ದರೂ ಮತ್ತೊಮ್ಮೆ ಅರ್ಜಿ ಕೊಡಬಹುದು. ಈಗಿರುವ ಕೊಟ್ಟಿರುವ ಅರ್ಜಿಯಲ್ಲಿ ಸ್ಪೆಲ್ಲಿಂಗ್ ತಪ್ಪು ಅಥವಾ ಬೇರೆ ತಿದ್ದುಪಡಿ ಮಾಡಬಹುದು. ಫಾರಂ 8 ಭರ್ತಿ ಮಾಡಬೇಕು. ಜುಲೈ 29 ರೊಳಗೆ ಕೊಡಬಹುದು, ಇಲ್ಲವಾದಲ್ಲಿ ಆಗಸ್ಟ್ 5ರ ನಂತರ ಫಾರ್ಮ್ ಸಿಗುತ್ತೆ ಎಂದರು. ಇನ್ನು ಹೊಸಬರು ಅಂದ್ರೆ 2026 ಅಕ್ಟೋಬರ್ 1ರ ವೇಳೆಗೆ 18 ವರ್ಷ ತುಂಬಲಿರುವವರು ಫಾರಂ 6ರಲ್ಲಿ ಅರ್ಜಿ ಸಲ್ಲಿಸಬಹುದು. ಪ್ರತಿ ಬಿಎಲ್‌ಒಗೆ 30 ಫಾರ್ಮ್ ಕೊಟ್ಟಿದ್ದೇವೆ . ಆ ಮೂಲಕ ನೀವೂ ಮತದಾನ ಐಡಿ ಪಡೆಯಬಹುದು ಎಂದು ತಿಳಿಸಿದರು.



ಚಿಕ್ಕಮಗಳೂರಿನಲ್ಲಿ ಬೆಲೆ ಕುಸಿತದ ನಂತರ ಹತಾಶರಾದ ರೈತರು ಟೊಮೆಟೊಗಳನ್ನು ನೆಲಕ್ಕೆ ಸುರಿದರು.

## ಕುಗ್ರಾಮ ಪ್ರದೇಶಗಳಿಗೆ ಮೊಬೈಲ್, ಇಂಟರ್‌ನೆಟ್ ಸೇವೆಗೆ ಆದ್ಯತೆ

# ಮೈಸೂರು ವಲಯದಲ್ಲಿ ಬಿಎಸ್‌ಎನ್‌ಎಲ್‌ನಿಂದ ಮಹತ್ವದ ಯೋಜನೆ ಜಾರಿ


**ಮೈಸೂರು, ಜು.8:** ಬಿಎಸ್‌ಎನ್‌ಎಲ್ ಪುನಶ್ಚೇತನಕ್ಕೆ ಒತ್ತು ನೀಡಲಾಗಿದ್ದು, ಗ್ರಾಮೀಣ ಮತ್ತು ಅರಣ್ಯ ಅಂಚಿನ ಪ್ರದೇಶಗಳ ಡಿಜಿಟಲ್ ಸಬಲೀಕರಣಕ್ಕಾಗಿ ಪ್ರಮುಖ ಯೋಜನೆ ಜಾರಿಗೆ ತರುತ್ತಿದೆ.

ಮೊದಲ ಹಂತದಲ್ಲಿ ಮೈಸೂರು ವಲಯದ ಬಿಎಸ್‌ಎನ್‌ಎಲ್ ಮಹತ್ವದ ಯೋಜನೆಯೊಂದನ್ನು ಕೈಗೆತ್ತಿಕೊಂಡಿದೆ. ನಂತರ ರಾಜ್ಯದ ಇತರ ಕಂದಾಯ ವಿಭಾಗಳಿಗೂ ಈ ವಿನೂತನ ಕಾರ್ಯಕ್ರಮ ಜಾರಿಗೆ ಮುಂದಾಗಿದೆ. ಖಾಸಗಿ ಕಂಪನಿಗಳು ತಲುಪದ ಕಾಡಂಚಿನ ಗಿರಿಜನ ಹಾಡಿಗಳಿಗೂ ಈಗ ಬಿಎಸ್‌ಎನ್‌ಎಲ್ ಹೈ-ಸ್ಪೀಡ್ ಇಂಟರ್ನೆಟ್ ತಲುಪಿಸುತ್ತಿದ್ದು, ಗ್ರಾಮೀಣ ಯುವಕರಿಗೆ 'ಭಾರತ್ ನೆಟ್ ಉದ್ಯಮಿ' ಆಗುವ ಸುವರ್ಣಾವಕಾಶ ನೀಡಿದೆ.

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ 'ಡಿಜಿಟಲ್ ಭಾರತ್ ನಿಧಿ' ಹಾಗೂ 'ಭಾರತ್ ನೆಟ್' ಯೋಜನೆಯಡಿ ಮೈಸೂರು, ಚಾಮರಾಜ ನಗರ, ಮಂಡ್ಯ ಮತ್ತು ಕೊಡಗು ಜಿಲ್ಲೆಗಳ ಹಳ್ಳಿಗಳಲ್ಲಿ ಉಚಿತ ಎಫ್‌ಟಿಟಿಎಚ್ ಇಂಟರ್ನೆಟ್ ಸಂಪರ್ಕ ಕಲ್ಪಿಸಲಾಗುತ್ತಿದೆ. ಇದು ಗ್ರಾಮೀಣ ಭಾಗದ ಬದುಕನ್ನು ಹಸನುಗೊಳಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ಮಹತ್ವದ ಹೆಜ್ಜೆಯಾಗಿದೆ.

ಬಿಎಸ್‌ಎನ್‌ಎಲ್ ಮೈಸೂರು ವಲಯವು ಚಾಮರಾಜನಗರ, ಮೈಸೂರು, ಮಂಡ್ಯ ಹಾಗೂ ಕೊಡಗು ಜಿಲ್ಲೆಗಳ ಹಳ್ಳಿಗಳಲ್ಲಿ ಉಚಿತ ಇಂಟರ್ನೆಟ್ ಅಳವಡಿಕೆ ಮತ್ತು ಗ್ರಾಮೀಣ ಸ್ವಯಂ ಉದ್ಯೋಗ ಅಭಿಯಾನ ಸಹ ಹಮ್ಮಿಕೊಂಡಿದೆ. ಮೈಸೂರು ವಲಯದ ನಾಲ್ಕು ಜಿಲ್ಲೆಗಳಲ್ಲಿ ದಟ್ಟವಾದ ಅರಣ್ಯ ಪ್ರದೇಶಗಳಿದ್ದು, ಪುರಾತನ ಕಾಲದಿಂದಲೂ ಆದಿವಾಸಿ ಬುಡಕಟ್ಟು ಜನಾಂಗದವರು ವಾಸಿಸುತ್ತಿದ್ದಾರೆ. ಈ ಕಾಡಂಚಿನ ಗ್ರಾಮಗಳಿಗೆ ಮತ್ತು ಹಾಡಿಗಳಿಗೆ ಇಂದಿಗೂ ಖಾಸಗಿ ಟೆಲಿಕಾಂ ಕಂಪನಿಗಳು ಮೊಬೈಲ್ ನೆಟ್‌ವರ್ಕ್ ಒದಗಿಸುವಲ್ಲಿ ಸಂಪೂರ್ಣ ವಿಫಲವಾಗಿವೆ.

ಆದರೆ ಬಿಎಸ್‌ಎನ್‌ಎಲ್, ಕಾಡಂಚಿನ ಪ್ರದೇಶಗಳಿಗೂ ಡಿಜಿಟಲ್ ಭಾರತ್ ನಿಧಿಯ ಮೂಲಕ ಕವರೇಜ್ ಒದಗಿಸುತ್ತಿದೆ. ಇದರಿಂದಾಗಿ ಮೂಲಸೌಕರ್ಯ ವಂಚಿತ ಗ್ರಾಮಗಳ ಜನರಿಗೂ ಡಿಜಿಟಲ್ ಕ್ರಾಂತಿಯ ಲಾಭ ಸಿಗುವಂತಾಗಿದೆ. ಈ ಯೋಜನೆಯಡಿ ವೈಫೈ ರೌಟರ್ ಮತ್ತು ಆಪ್ಟಿಕಲ್ ಫೈಬರ್ ಕೇಬಲ್ ಅನ್ನು ಸಂಪೂರ್ಣ ಉಚಿತವಾಗಿ ನೀಡಲಾಗುತ್ತಿದ್ದು, ಯಾವುದೇ ಅನುಷ್ಠಾನದ ಶುಲ್ಕ ಇರುವುದಿಲ್ಲ. ಗ್ರಾಮೀಣ ಗ್ರಾಹಕರಿಗಾಗಿ ಕೇವಲ 259 ರೂಪಾಯಿಗಳ ಮಾಸಿಕ ಯೋಜನೆ ಪರಿಚಯಿಸಲಾಗಿದ್ದು, ಇದರಲ್ಲಿ 25 ಎಂಬಿಪಿಎಸ್ ವೇಗದ 700 ಜಿಬಿ ಡೇಟಾ, ಅನಿಯಮಿತ ಕರೆಗಳು ಹಾಗೂ ಪ್ರಸಾರ ಭಾರತಿ ಟಿವಿ, ವೇವ್ ಆಪ್, ಬಿಎಸ್‌ಎನ್‌ಎಲ್ ಐಎಫ್‌ಟಿವಿ ಚಾನೆಲ್‌ಗಳ ಸೌಲಭ್ಯವೂ ಸಿಗಲಿದೆ. ಅಷ್ಟೇ ಅಲ್ಲದೇ, ಗ್ರಾಮೀಣ ಯುವಕರು




'ಭಾರತ್ ನೆಟ್ ಉದ್ಯಮಿ' ಆಗಿ ನೋಂದಾಯಿಸಿಕೊಂಡು ಆದಾಯ ಸಹ ಗಳಿಸಬಹುದಾಗಿದೆ.

ಖಾಸಗಿ ಕಂಪನಿಗಳು ಲಾಭಕ್ಕಾಗಿ ಪೈಪೋಟಿ ನಡೆಸುತ್ತಿವೆ. ಆದರೆ ಬಿಎಸ್‌ಎನ್‌ಎಲ್ ಮಾತ್ರ ಕಾಡಂಚಿನ ಕಟ್ಟಕಡೆಯ ಹಳ್ಳಿಗೂ ಡಿಜಿಟಲ್ ಕ್ರಾಂತಿಯನ್ನುಂಟು ಮಾಡುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ.


ಬಿಎಸ್‌ಎನ್‌ಎಲ್ ಮೈಸೂರು ವಲಯದ ಸಹಾಯಕ ಮಹಾಪ್ರಬಂಧಕರಾದ ರಾಜೇಂದ್ರ ಹೊನ್ನಪ್ಪನವರ್ ಈ ಕುರಿತು ಮಾಹಿತಿ ನೀಡಿ, ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಯಾದ 'ಡಿಜಿಟಲ್ ಭಾರತ್ ನಿಧಿ' ಯೋಜನೆಯನ್ನು ಮೈಸೂರು ವಲಯದ ಚಾಮರಾಜನಗರ, ಮೈಸೂರು, ಮಂಡ್ಯ, ಕೊಡಗು ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸುತ್ತಿದ್ದೇವೆ. ಈ ಮೂಲಕ ಅತ್ಯಂತ ಕಡಿಮೆ ದರದಲ್ಲಿ ಗ್ರಾಮೀಣ ಭಾಗದ ಜನರಿಗೆ ವೇಗದ ಇಂಟರ್‌ನೆಟ್ ಸೌಲಭ್ಯ ಕಲ್ಪಿಸಲಾಗುತ್ತಿದೆ ಎಂದರು.

ಬಿಎಸ್‌ಎನ್‌ಎಲ್ ಮೈಸೂರು ವಲಯ ಮೊಬೈಲ್ ಸರ್ವಿಸಸ್‌ನ ಸಹಾಯಕ ಮಹಾಪ್ರಬಂಧಕ ಶರತ್‌ಕುಮಾರ್ ಮಾತನಾಡಿ, ಗುಡ್ಡಗಾಡು ಪ್ರದೇಶದ ಗ್ರಾಮೀಣ ಜನರಿಗೆ ಬ್ಯಾಂಕಿಂಗ್ ಸೇರಿದಂತೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಕಲ್ಯಾಣ ಕಾರ್ಯಕ್ರಮಗಳ ಅನುಷ್ಠಾನವನ್ನು ಸದುಪಯೋಗಪಡಿಸಿಕೊಳ್ಳಲು ನೆರವಾಗಲಿದೆ ಎಂದು ಹೇಳಿದರು.

ಪ್ರಗತಿಪರ ರೈತ ಎಸ್ ರಮೇಶ್ ಮಾತನಾಡಿ, ಡಿಜಿಟಲ್ ಭಾರತ್ ನಿಧಿ ಯೋಜನೆಯಿಂದ ಗ್ರಾಮೀಣ ಭಾಗದ ತಾಂತ್ರಿಕ ಬದುಕು ಹಸನಾಗುತ್ತಿದೆ. ಪ್ರಸಾರ ಭಾರತಿ ವ್ಯಾಪ್ತಿಯಲ್ಲಿ ಬರುವ ದೂರದರ್ಶನ ಸೇರಿದಂತೆ ಇನ್ನಿತರ ಒಟಿಟಿಗಳನ್ನು ಉಚಿತವಾಗಿ ವೀಕ್ಷಿಸಲು ಸಹಕಾರಿಯಾಗಲಿದೆ ಎಂದರು.

ಅಂತಾರಾಷ್ಟ್ರೀಯ ಜಾನಪದ ಕಲಾವಿದ ಸಿ.ಎಂ. ನರಸಿಂಹಮೂರ್ತಿ ಮಾತನಾಡಿ, ಗ್ರಾಮೀಣ ಭಾಗದ ಜನರಲ್ಲಿ ವೈಜ್ಞಾನಿಕವಾಗಿ ತಾಂತ್ರಿಕ ಸಂಪರ್ಕ ಕೊಂಡಿಯನ್ನು ಡಿಜಿಟಲ್ ಭಾರತ್ ನಿಧಿ ಒದಗಿಸುತ್ತಿರುವುದು ಶ್ಲಾಘನೀಯ ಎಂದರು. ಚಿತ್ರಕಲಾವಿದ ಮುಡಿಗುಂಡ ಮೂರ್ತಿ, ಡಿಜಿಟಲ್ ಭಾರತ್ ನಿಧಿ ಯೋಜನೆಯು ಗ್ರಾಮೀಣ ಭಾಗದಲ್ಲಿ ಉಚಿತ ಒಟಿಟಿಗಳನ್ನು ಜನರಿಗೆ ಒದಗಿಸುವುದರ ಜೊತೆಗೆ ನಿರುದ್ಯೋಗಿ ಯುವಕರಿಗೆ ಉದ್ಯೋಗ ಕಲ್ಪಿಸಲಿದೆ ಎಂದು ತಿಳಿಸಿದರು.

# ಡ್ರಗ್ಸ್ ಮುಕ್ತ ಸಮಾಜ ನಿರ್ಮಾಣಕ್ಕೆ ವಿದ್ಯಾರ್ಥಿಗಳ ಸಂಕಲ್ಪ



**ಬಳ್ಳಾರಿ, ಜು 08.** ಡ್ರಗ್ಸ್ ಮುಕ್ತ ಸಮಾಜ ನಿರ್ಮಾಣಕ್ಕೆ ವಿದ್ಯಾರ್ಥಿಗಳು ಧೃಢ ಸಂಕಲ್ಪ ಮಾಡಿ ಮಾದಕ ವ್ಯಸನ ಮುಕ್ತ ಸಮಾಜ ನಿರ್ಮಾಣದಲ್ಲಿ ತಮ್ಮ ಪಾತ್ರವನ್ನು ಜವಬ್ದಾರಿಯಿಂದ ನಿರ್ವಹಿಸಬೇಕು ಎಂದು ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘದ ತರಬೇತುದಾರರಾದ ವೆಂಕಟೇಶ್ ರವರು ತಿಳಿಸಿದ್ದಾರೆ.

ಶ್ರೀ ವಾಸವಿ ವಿದ್ಯಾಲಯದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ,ಜನ ಜಾಗೃತಿ ವೇದಿಕೆ ಹಾಗೂ ಶಾಲೆಯ ಸಹಯೋಗದಲ್ಲಿ ಮಾದಕ ವ್ಯಸನ ಮುಕ್ತ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಯಿತು. ಕಾರ್ಯಕ್ರಮವನ್ನು ಜ್ಯೋತಿ ಬೆಳಗುವುದರ ಮೂಲಕ ಉದ್ಘಾಟಿಸಿ, ವಿದ್ಯಾರ್ಥಿಗಳು ದುಶ್ಚಟಗಳಿಂದ ದೂರವಿದ್ದು ಉತ್ತಮ ವ್ಯಕ್ತಿತ್ವವನ್ನು ಬೆಳಸಿಕೊಳ್ಳಬೇಕು ಎಂದು ಮುಖ್ಯ ಅತಿಥಿಗಳಾಗಿ ಕರೆ ನೀಡಿದರು.

ಶಾಲೆಯ ಮುಖ್ಯೋಪಾಧ್ಯಾಯರಾದ ವೀರೇಶ್.ಯು ಮಾತನಾಡಿ, ಶಾಲೆಯ ಶಿಕ್ಷಣದೊಂದಿಗೆ ಉತ್ತಮ ಸಂಸ್ಕಾರ,ನೈತಿಕ ಮೌಲ್ಯಗಳು ಹಾಗೂ ಜವಾಬ್ದಾರಿಯುತ ನಾಗರಿಕ ರನ್ನು ರೂಪಿಸುವ ಪವಿತ್ರ ತಾಣವಾಗಿದೆ. ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಉತ್ತಮ ಗುರಿಯನ್ನು ಹೊಂದಿ, ದುಶ್ಚಟಗಳಿಂದ ದೂರವಿದ್ದು, ಆರೋಗ್ಯಕರ ಜೀವನ ಶೈಲಿಯನ್ನು ಆಳವಡಿಸಿಕೊಳ್ಳಬೇಕು. ಪೋಷಕರು, ಶಿಕ್ಷಕರು ಮತ್ತು ಸಮಾಜದ ಸಹಕಾರದಿಂದ ಮಾತ್ರ ಡ್ರಗ್ಸ್ ಮುಕ್ತ ಸಮಾಜವನ್ನು ನಿರ್ಮಿಸಲು ಸಾಧ್ಯ.ಇಂದಿನ ಜಾಗೃತಿ ಕಾರ್ಯಕ್ರಮದ ಸಂದೇಶವನ್ನು ಪ್ರತಿಯೊಬ್ಬ ವಿದ್ಯಾರ್ಥಿಯೂ ತಮ್ಮ ಕುಟುಂಬ ಹಾಗೂ ಸಮಾಜಕ್ಕೂ ತಲುಪಿಸಬೇಕು ಎಂದು ಕರೆ ನೀಡಿದರು.

ಶ್ರೀ ವಾಸವಿ ಎಜ್ಯುಕೇಷನ್ ಟ್ರಸ್ಟ್ ನ ಅಧ್ಯಕ್ಷರಾದ ವಿಟ್ಟ ಕೃಷ್ಣಕುಮಾರ್, ಕಾರ್ಯದರ್ಶಿಗಳಾದ ಪಿ.ಎನ್.ಸುರೇಶ್,ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘದ ಮೇಲ್ವಿಚಾರಕರಾದ ಶ್ರೀಮತಿ ರತ್ನ,ಸೇವಾ ಪ್ರತಿನಿಧಿಗಳಾದ ಗೌಸಿಯಾ ಬೇಗಂ, ಜನಜಾಗೃತಿ ವೇದಿಕೆಯ ಉಪಾಧ್ಯಕ್ಷರಾದ ಶ್ರೀಮತಿ ರೂಪ, ಶಾಲಾ ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿಗಳು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ವಿದ್ಯಾರ್ಥಿನಿ ಹರಣಿ ಪ್ರಾರ್ಥನಾ ಗೀತೆಯನ್ನು ಸಲ್ಲಿಸಿದರು. ಶಿಕ್ಷಕಿಯಾದ ಬಸವರಾಜೇಶ್ವರಿ ಜೆ.ಎಸ್. ಕಾರ್ಯಕ್ರಮವನ್ನು ನಿರ್ವಹಿಸಿ ದರು. ಕಾರ್ಯಕ್ರಮವು ವಿದ್ಯಾರ್ಥಿಗಳಲ್ಲಿ ಮಾದಕ ವ್ಯಸನದ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸಿ, ಆರೋಗ್ಯಕರ, ಶಿಸ್ತಿನ ಹಾಗೂ ಜವಾಬ್ದಾರಿಯುತ ಜೀವನ ನಡೆಸುವ ಸಂದೇಶವನ್ನು ಯಶಸ್ವಿಯಾಗಿ ಸಾರಿತು.

# ರಾಜಾಸೀಟ್‌ಗೆ ಜು.12ರವರೆಗೆ ಪ್ರವೇಶ ನಿರ್ಬಂಧ




**ಮಡಿಕೇರಿ, ಜು.8:** ನಗರದ ಪ್ರವಾಸಿತಾಣ ರಾಜಾಸೀಟ್ ಉದ್ಯಾನಕ್ಕೆ ಜುಲೈ 12ರವರೆಗೆ ಸಾರ್ವಜನಿಕರ ಪ್ರವೇಶ ನಿರ್ಬಂಧಿಸಿ ಜಿಲ್ಲಾಧಿಕಾರಿ ಎಸ್.ಜೆ.ಸೋಮಶೇಖರ್ ಆದೇಶ ಹೊರಡಿಸಿದ್ದಾರೆ.

ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ರಸ್ತೆ ಬದಿ ಕುಸಿದು ಸಂಚಾರ ನಿರ್ಬಂಧಿಸಿರುವುದರಿಂದ ರಾಜಾಸೀಟ್ ಉದ್ಯಾನದ ರಸ್ತೆಯಲ್ಲಿ ಬಸ್ ಗಳು ಸಂಚರಿಸುತ್ತಿವೆ ಈಗ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಬರುತ್ತಿರುವುದರಿಂದ ಸಂಚಾರದಟ್ಟಣೆ ಅಧಿಕವಾಗಿದೆ.

ಹಾಗಾಗಿ 12ರವರೆಗೆ ರಾಜಾಸೀಟ್ ಉದ್ಯಾನಕ್ಕೆ ಪ್ರವಾಸಿಗರ ಪ್ರವೇಶ ಮತ್ತು ಉದ್ಯಾನದ ಮುಂದೆ ವಾಹನ ನಿಲುಗಡೆ ನಿಷೇಧಿಸಲಾಗಿದೆ.

## ಸಂಯುಕ್ತ ಹೋರಾಟ-ಕರ್ನಾಟಕ ಒಕ್ಕೂಟ ಬೈರಮಂಗಲದ ಸರ್ಕಲ್‌ನಲ್ಲಿ ಆಯೋಜನೆ

# ಬಿಡದಿ ಟೌನ್‌ಶಿಪ್: ರೈತರ ಅಹವಾಲು ಆಲಿಸಲು ಬಿಡದಿಯಲ್ಲಿ ಜು.11ರಂದು ಬೃಹತ್ ಪಬ್ಲಿಕ್ ಹಿಯರಿಂಗ್

**ಬಿಡದಿ, ಜು.8:** ಕೃಷಿ ಭೂಮಿಯ ಉಳಿವಿಗಾಗಿ ಬಿಡದಿ ಟೌನ್‌ಶಿಪ್ ಯೋಜನೆ ವಿರುದ್ಧ ಕಳೆದ 480 ದಿನಗಳಿಂದ ರೈತರು ಹೋರಾಟ ನಡೆಸುತ್ತಿದ್ದಾರೆ. ರೈತರ ಅಳಲು-ಅಹವಾಲು ಆಲಿಸಬೇಕಿದ್ದ ಸರ್ಕಾರ ಮತ್ತು ವಿಪಕ್ಷಗಳ ನಾಯಕರು ಪರಸ್ಪರ ಕೆಸರೆರಚಾಟದಲ್ಲಿ ತೊಡಗಿದ್ದಾರೆ. ಈ ಹಿನ್ನೆಲೆಯಲ್ಲಿ, ರೈತರ ಅಹವಾಲು ಆಲಿಸಲು ಸಂಯುಕ್ತ ಹೋರಾಟ-ಕರ್ನಾಟಕ ಒಕ್ಕೂಟವು ಜುಲೈ 11ರಂದು ಬಿಡದಿಯ ಬೈರಮಂಗಲದಲ್ಲಿ ಬೃಹತ್ ಪಬ್ಲಿಕ್ ಹಿಯರಿಂಗ್ ಕಾರ್ಯಕ್ರಮ ಆಯೋಜಿಸಿದೆ.

ಈ ಬಗ್ಗೆ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ರೈತ ಹೋರಾಟಗಾರ ಟಿ ಯಶವಂತ್, ಸಂಯುಕ್ತ ಹೋರಾಟ - ಕರ್ನಾಟಕ ಮತ್ತು ಬೈರಮಂಗಲ-ಕಂಚುಗಾರನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಭೂ ಹಿತರಕ್ಷಣಾ ಸಂಘವು ಜಂಟಿಯಾಗಿ ಪಬ್ಲಿಕ್ ಹಿಯರಿಂಗ್ ಕ್ರಾರ್ಯಕ್ರಮ ಆಯೋಜಿಸಿದ್ದು, ಬೈರಮಂಗಲ ವೃತ್ತದಲ್ಲಿ ಶನಿವಾರ ಮಧ್ಯಾಹ್ನ 12 ಗಂಟೆಗೆ ಕಾರ್ಯಕ್ರಮ ಆರಂಭವಾಗಲಿದೆ ಎಂದು ತಿಳಿಸಿದ್ದಾರೆ.

ರೈತರ ಅಹವಾಲುಗಳನ್ನು ಸುಪ್ರೀಂಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ವಿ. ಗೋಪಾಲಗೌಡ ಅವರು ನೇತೃತ್ವದಲ್ಲಿ ಆಲಿಸಲಾಗುತ್ತದೆ. ಈ ವೇಳೆ, ಕೃಷಿ ಬೆಲೆ ಆಯೋಗದ ಮಾಜಿ ಅಧ್ಯಕ್ಷ, ಕೃಷಿ ಅರ್ಥಶಾಸ್ತ್ರಜ್ಞ ಡಾ. ಪ್ರಕಾಶ್ ಕಮ್ಮರಡಿ, ಖ್ಯಾತ ಸಮಾಜಶಾಸ್ತ್ರಜ್ಞೆ ಡಾ. ಎ.ಆರ್. ವಾಸವಿ ಹಾಗೂ ಹಿರಿಯ ಪತ್ರಕರ್ತ ಡಿ. ಉಮಾಪತಿ ಅವರು ಇರಲಿದ್ದಾರೆ ಎಂದು ತಿಳಿಸಿದ್ದಾರೆ.

ನಿವೃತ್ತ ನ್ಯಾಯಮೂರ್ತಿ ವಿ. ಗೋಪಾಲಗೌಡ ಅವರು ಸಂವಿಧಾನ, ನಾಗರಿಕ ಹಕ್ಕುಗಳು, ಸಾಮಾಜಿಕ ನ್ಯಾಯ ಹಾಗೂ ಪ್ರಜಾಪ್ರಭುತ್ವದ ದೃಷ್ಟಿಕೋನದಿಂದ ಟೌನ್‌ಶಿಪ್ ಯೋಜನೆಯ ವಿವಿಧ ಆಯಾಮಗಳನ್ನು ಪರಾಮರ್ಶಿಸಲಿದ್ದಾರೆ. ಕೃಷಿ ಆರ್ಥಿಕತೆ, ಪರಿಸರ ಸಂರಕ್ಷಣೆ ಹಾಗೂ ಸಾಮಾಜಿಕ-ಆರ್ಥಿಕ ಪರಿಣಾಮಗಳ ಕುರಿತು ಡಾ. ಪ್ರಕಾಶ್ ಕಮ್ಮರಡಿ, ಡಾ. ಎ.ಆರ್. ವಾಸವಿ ಮತ್ತು ಡಿ. ಉಮಾಪತಿ ತಮ್ಮ ಅಭಿಪ್ರಾಯಗಳನ್ನು ಮಂಡಿಸಲಿದ್ದಾರೆ ಎಂದು ವಿವರಿಸಿದ್ದಾರೆ.

ಬೈರಮಂಗಲ ಹಾಗೂ ಕಂಚುಗಾರನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಟೌನ್‌ಶಿಪ್ ಯೋಜನೆಯಿಂದ ಭೂಮಿ ಕಳೆದುಕೊಳ್ಳುವ ಆತಂಕದಲ್ಲಿರುವ ರೈತರ ಅಹವಾಲುಗಳನ್ನು ಆಲಿಸಿದ ಬಳಿಕ, ತಜ್ಞರ ತಂಡ ತನ್ನ ಅಭಿಪ್ರಾಯ ಹಾಗೂ ತೀರ್ಪನ್ನು ಪ್ರಕಟಿಸಲಿದೆ ಎಂದು ಯಶವಂತ್ ವಿವರಿಸಿದ್ದಾರೆ.

ಬೆಂಗಳೂರು ಸುತ್ತಮುತ್ತಲಿನ ಸಮೃದ್ಧ ಹಸಿರು ಪ್ರದೇಶಗಳು ಮತ್ತು ನೀರಾವರಿ ಹೊಂದಿರುವ ಕೃಷಿ ಭೂಮಿಗಳು ನಗರದ ಪರಿಸರ ಸಮತೋಲನ ಮತ್ತು ಆಮ್ಲಜನಕದ ಮೂಲವಾಗಿವೆ.ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ವೈಪರೀತ್ಯದ ಹಿನ್ನೆಲೆಯಲ್ಲಿ ಇಂತಹ ಪ್ರದೇಶಗಳ ಸಂರಕ್ಷಣೆ ಅತ್ಯಂತ ಮಹತ್ವದ್ದಾಗಿದೆ ಎಂದಿದ್ದಾರೆ.

ಟೌನ್‌ಶಿಪ್ ಯೋಜನೆಗೆ ಸಂಬಂಧಿಸಿದಂತೆ, ಈ ಪ್ರದೇಶದಲ್ಲಿ ಕೃಷಿ ಭೂಮಿಯೇ ಇಲ್ಲ ಎಂಬ ಅಪಪ್ರಚಾರ ಮೊದಲು ನಡೆದಿತ್ತು. ಇದೀಗ ಸಮೃದ್ಧ ಕೃಷಿ ಪ್ರದೇಶದ ವಾಸ್ತವ ಚಿತ್ರಣ ಹೊರಬರುತ್ತಿದ್ದಂತೆ, ಬಹುಸಂಖ್ಯಾತ ರೈತರು ಭೂಸ್ವಾಧೀನಕ್ಕೆ ಒಪ್ಪಿಗೆ ನೀಡಿದ್ದಾರೆ ಎಂಬ ಮತ್ತೊಂದು ಅಪಪ್ರಚಾರ ನಡೆಯುತ್ತಿದೆ. ಆದರೆ, ಯಾವೊಬ್ಬ ರೈತರೂ ತಮ್ಮ ಕೃಷಿ ಭೂಮಿ ನೀಡಲು ಸಿದ್ಧರಿಲ್ಲ ಎಂದು ತಿಳಿಸಿದ್ದಾರೆ

## 600 ಕೋಟಿ ವೆಚ್ಚ ನೀರಿನಲ್ಲಿ ಹೋಮ: ಮಧುಸೂದನ್ ನಾಯಕ್ ವರದಿ ಬಹಿರಂಗಪಡಿಸಲು ತೀವ್ರ ಹೋರಾಟ ಎಚ್ಚರಿಕೆ

# ಸಿದ್ದರಾಮಯ್ಯ ಆಡಳಿತದ ಜಾತಿ ಸಮೀಕ್ಷೆ ಫಲಶ್ರುತಿ ಶೂನ್ಯ: ಪ್ರಮೋದ್ ಮಧ್ವರಾಜ್

**ಕಲಬುರಗಿ, ಜು.8:** ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರವು ಹಿಂದುಳಿದ ವರ್ಗಗಳ ರಕ್ಷಕರು ಹಾಗೂ ಅಭಿವೃದ್ಧಿಯ ಹರಿಕಾರರು ಎಂದು ಹೇಳುತ್ತಲೇ 600 ಕೋಟಿ ರೂಪಾಯಿ ವೆಚ್ಚ ಮಾಡಿ ಆಯೋಗಗಳು ಸಲ್ಲಿಸಿದ ವರದಿ ಫಲ ಶ್ರುತಿ ಶೂನ್ಯವಾಗಿದ್ದು ಹಿಂದುಳಿದ ವರ್ಗದವರಿಗೆ ಭಾರೀ ಮೋಸವೆಸಗಿದ್ದಾರೆ ಎಂದು ಮಾಜಿ ಸಚಿವರು ಹಾಗೂ ಹಿಂದುಳಿದ ವರ್ಗಗಳ ನಾಯಕರಾದ ಪ್ರಮೋದ್ ಮಧ್ವರಾಜ್ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಕಲಬರಗಿಯ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಬುಧವಾರ ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿ ಶೇ. 35ರಷ್ಟು ಇರುವ ಪ್ರವರ್ಗ ಒಂದು ಮತ್ತು ಎರಡು ಹಾಗೂ ಹಿಂದುಳಿದ ವರ್ಗಗಳ ಕುರಿತಾದ ಕಾಂತರಾಜ್ ವರದಿ, ಜಯಪ್ರಕಾಶ್ ಹೆಗಡೆ ವರದಿ ಮಧುಸೂದನ ನಾಯಕ್ ವರದಿ ಸಿದ್ಧಪಡಿಸಲು 600 ಕೋಟಿ ರೂಪಾಯಿ ವೆಚ್ಚ ಮಾಡಿ ಜನರ ತೆರಿಗೆ ಹಣವನ್ನು ಲೂಟಿ ಮಾಡಿದ ಸಿದ್ದರಾಮಯ್ಯ ಅವರು 12 ವರ್ಷಗಳ ಕಾಲ ಜಾತಿ ಗಣತಿ ಹೆಸರಲ್ಲಿ ಕಾಲಹರಣ ಮಾಡಿದರು. ಆದರೆ ಫಲಿತಾಂಶ ಮಾತ್ರ ಶೂನ್ಯವಾಗಿದೆ.




ಇದರಿಂದ ಹಿಂದುಳಿದ ವರ್ಗಕ್ಕೆ ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ದ್ರೋಹ ಬಗೆದಿದೆ ಎಂದು ತೀವ್ರವಾಗಿ ಖಂಡಿಸಿದ್ದಾರೆ. ಸಿದ್ದರಾಮಯ್ಯ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಲು ರಾಹುಲ್ ಆದೇಶ ನೀಡಿದ ಮರುದಿನ ಮೇ 27ರಂದು ತರಾತುರಿಯಲ್ಲಿ ಮಧುಸೂದನ ನಾಯಕ್ ವರದಿಯನ್ನು ಸ್ವೀಕರಿಸುವ ಶಾಸ್ತ್ರ ಮಾಡಿ ಮುಂಗೈಗೆ ಬೆಲ್ಲ ಹಚ್ಚುವ ರಾಜಕೀಯ ಹುನ್ನಾರ ನಡೆಸಿದರು.ಯಾವುದೇ ಬದ್ಧತೆಯು ಇಲ್ಲದೆ ವರದಿಯನ್ನು ಬಹಿರಂಗ ಪಡಿಸಲು ಕೂಡ ಸಾಧ್ಯವಾಗಿಲ್ಲ. ಅವರು ಹಿಂದುಳಿದ ವರ್ಗಗಳಿಗೆ ಕಣ್ಣಿಗೆ ಮಣ್ಣೆರಚ್ಚುವ ಕೆಲಸ ಮಾಡಿದರು ಎಂದು ಖಾರವಾಗಿ ನುಡಿದರು. ನೂತನ ಮುಖ್ಯಮಂತ್ರಿಗಳಾದ ಡಿ.ಕೆ ಶಿವಕುಮಾರ್ ಕೂಡ ಈ ಬಗ್ಗೆ ತುಟಿ ಬಿಚ್ಚುತ್ತಿಲ್ಲ ಎಂದು ಮಧ್ವರಾಜ್ ದೂರಿದರು. ಮಧುಸೂದನ್ ನಾಯಕ ವರದಿ ವಿಷಯ ಈಗ ಹೈಕೋರ್ಟ್ ಮೆಟ್ಟಿಲೇರಿದ್ದು ವಾದವನ್ನು ಆಗಸ್ಟ್ 20ಕ್ಕೆ ಮುಂದೂಡಲಾಗಿದೆ. ಸಿದ್ದರಾಮಯ್ಯ ಅವರು ಈಗ ಹೈಕೋರ್ಟನತ್ತ ಬೊಟ್ಟು ಮಾಡಲು ಹುನ್ನಾರ ನಡೆಸಿದ್ದಾರೆ ಎಂದು ದೂರಿದರು.

2027ರ ಜನಗಣತಿಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಜಾತಿ ಸಮೀಕ್ಷೆ ನಡೆಸಲು ಸೂಚನೆ ನೀಡಿರುವುದು ಉತ್ತಮ ಬೆಳವಣಿಗೆಯಾಗಿದ್ದು ಹಿಂದುಳಿದ ವರ್ಗದವರಿಗೆ ಉತ್ತಮ ಭವಿಷ್ಯ ನಿರ್ಮಾಣ ಮಾಡಲು ಇದರಿಂದ ಸಾಧ್ಯ. 1931 ರಲ್ಲಿ ಬ್ರಿಟಿಷರು ಮಾಡಿದ ಕೊನೆಯ ಜಾತಿಗಣತಿಯ ನಂತರ ಪ್ರಧಾನಮಂತ್ರಿ ಯವರು ನೂರು ವರ್ಷಗಳ ನಂತರ ಮತ್ತೆ ಜಾತಿಗಣತಿಗೆ ಆದೇಶ ನೀಡಿರುವುದು ಉತ್ತಮ ಬೆಳವಣಿಗೆ ಯಾಗಿದೆ. ರಾಜ್ಯ ಸರ್ಕಾರವು ಜಾತಿ ಗಣತಿ ವರದಿ ಬಹಿರಂಗಪಡಿಸಲು ಒತ್ತಾಯಿಸಿ ದೊಡ್ಡ ಮಟ್ಟದಲ್ಲಿ ಹಿಂದುಳಿದ ವರ್ಗಗಳ ನೇತೃತ್ವದಲ್ಲಿ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಓಬಿಸಿ ಮೋರ್ಚಾದ ವೆಂಕಟೇಶ ಉಪ್ಪಾರ ಮಾಜಿ ಶಾಸಕ ಸುಭಾಷ್ ಆರ್ ಗುತ್ತೇದಾರ್, ಅವ್ವಣ್ಣ ಮ್ಯಾಕೇರಿ, ಶರಣಪ್ಪ ತಳವಾರ ಈರಣ್ಣ ಹಡಪದ, ಲಿಂಗರಾಜ ಬಿರಾದಾರ, ವಿದ್ಯಾಧರ ಮಂಗಳೂರ, ಸಂಗಣ್ಣ ಹುಳಗುಳಕರ, ದೇವೇಂದ್ರ ಮತಕೂಡ, ಶರಣಗೌಡ ಪಾಟೀಲ್ ಬಸವರಾಜ ಗುಂಡಲಗೇರಿ ರೇವಣಸಿದ್ದಪ್ಪ ಸಂಕಾಲಿ ಮತ್ತಿತರರು ಇದ್ದರು.

# ರಾಹೆ 75ರ ವಿಸ್ತರಣೆ ಕಾಮಗಾರಿ ಸ್ಥಳದಲ್ಲಿ ಗುಡ್ಡ ಕುಸಿತ: ವಾಹನ ಸವಾರರಲ್ಲಿ ಹೆಚ್ಚಿದ ಆತಂಕ



**ಹಾಸನ, ಜು.8:** ಜಿಲ್ಲೆಯ ಸಕಲೇಶಪುರ ತಾಲ್ಲೂಕಿನ ಕಪ್ಪಳ್ಳಿ ಸಮೀಪ ರಾಷ್ಟ್ರೀಯ ಹೆದ್ದಾರಿ-75ರ ಬೆಂಗಳೂರು-ಮಂಗಳೂರು ಮಾರ್ಗದಲ್ಲಿ ರಸ್ತೆ ವಿಸ್ತರಣೆ ಕಾಮಗಾರಿ ನಡೆದಿರುವ ಪ್ರದೇಶದಲ್ಲಿ ಗುಡ್ಡ ಕುಸಿಯುತ್ತಿದ್ದು, ಪ್ರಯಾಣಿಕರು ಹಾಗೂ ವಾಹನ ಸವಾರರಲ್ಲಿ ಆತಂಕ ಸೃಷ್ಟಿಸಿದ್ದು ಸಂಚಾರ ಅಸ್ತವ್ಯಸ್ತಗೊಂಡಿದೆ.

ಜಿಲ್ಲೆಯಾದ್ಯಂತ ಮಳೆಯಾ ಗುತ್ತಿದ್ದು, ಮಳೆನೀರಿನಿಂದ ಮಣ್ಣು ಸಡಿಲಗೊಂಡು ಗಿಡಗಳ ಸಮೇತ ರಸ್ತೆಗೆ ಜಾರುತ್ತಿದ್ದು, ಮಳೆ ಇದೇ ರೀತಿ ಮುಂದುವರಿದರೆ ಹೆಚ್ಚಿನ ಪ್ರಮಾಣದಲ್ಲಿ ಗುಡ್ಡ ಕುಸಿಯುವ ಆತಂಕ ವ್ಯಕ್ತವಾಗಿದೆ.ಇನ್ನೊಂದೆಡೆ, ಚಿಕ್ಕಂದೂರು ಗ್ರಾಮದ ಬಳಿ ಬಹತ್ ಗಾತ್ರದ ಮರ ರಸ್ತೆ ಮೇಲೆ ಉರುಳಿದ್ದರಿಂದ ಉಚ್ಚಂಗಿ, ಯಸಳೂರು ಹಾಗೂ ಕೊಡ್ಲಿಪೇಟೆ ಸಂಪರ್ಕ ರಸ್ತೆ ಕೆಲಕಾಲ ಬಂದ್ ಆಗಿತ್ತು. ವಾಹನ ಸಂಚಾರ ಕಡಿಮೆ ಇದ್ದ ಕಾರಣ ಯಾವುದೇ ಅನಾಹುತ ಸಂಭವಿಸಿಲ್ಲ. ಸ್ಥಳೀಯರ ಮಾಹಿತಿ ಮೇರೆಗೆ ಅರಣ್ಯ ಇಲಾಖೆ ಮರ ತೆರವು ಕಾರ್ಯ ಕೈಗೊಂಡಿದೆ.

ಜುಲೈ 4 ಮತ್ತು 5ರಂದು ಸುರಿದ ಬಿರುಗಾಳಿ ಸಹಿತ ಮಳೆಯಿಂದ ಸಕಲೇಶಪುರ ಪಟ್ಟಣದಲ್ಲಿ ತಡೆಗೋಡೆ ಕುಸಿದು ಎರಡು ಮನೆಗಳಿಗೆ ಹಾನಿಯಾಗಿದೆ. ಸಾರ್ವಜನಿಕರ ಸುರಕ್ಷತೆಯನ್ನು ಗಮನದಲ್ಲಿಟ್ಟು ಕೊಂಡು ಅಪಾಯಕಾರಿಯಾಗಿದ್ದ ಎಂಟು ಮರಗಳನ್ನು ಅರಣ್ಯ ಇಲಾಖೆ ತೆರವುಗೊಳಿಸಿದೆ. ಸಕಲೇಶಪುರ ವಿಭಾಗದಲ್ಲಿ ಒಟ್ಟು 43 ವಿದ್ಯುತ್ ಕಂಬಗಳಿಗೆ ಹಾನಿಯಾಗಿದ್ದು, ದುರಸ್ತಿ ಕಾರ್ಯ ಮುಂದುವರಿದಿದೆ ಎಂದು ತಹಶೀಲ್ದಾರ್ ಸುಪ್ರಿತಾ ತಿಳಿಸಿದ್ದಾರೆ.ಮಳೆ ಇನ್ನೂ ಕೆಲವು ದಿನ ಮುಂದುವರಿಯುವ ಸಾಧ್ಯತೆ ಇರುವುದರಿಂದ ಜನರು ಅನಗತ್ಯವಾಗಿ ಪ್ರವಾಸ ಕೈಗೊಳ್ಳದಂತೆ ಹಾಗೂ ಗುಡ್ಡ ಪ್ರದೇಶಗಳು, ನದಿಹಳ್ಳಗಳ ಸಮೀಪ ಎಚ್ಚರಿಕೆಯಿಂದ ಇರುವಂತೆ ಜಿಲ್ಲಾಡಳಿತ ಮನವಿ ಮಾಡಿದೆ. ವಿದ್ಯುತ್ ತಂತಿಗಳು ತುಂಡಾಗಿ ಬಿದ್ದಿರುವ ಸ್ಥಳಗಳಿಗೆ ಸಾರ್ವಜನಿಕರು ಸಮೀಪಿಸದಂತೆ ಸೂಚಿಸಲಾಗಿದೆ.

# ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ: ಅರ್ಜಿಗಳ ಆಹ್ವಾನ

ವಿಜಯಪುರ: ಕಾರ್ಯನಿರತ ಪತ್ರಕರ್ತರ ಸಂಘ ವಿಜಯಪುರ ಜಿಲ್ಲಾ ಘಟಕದ ಸದಸ್ಯರ ಮಕ್ಕಳಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿಗಳನ್ನು ಆಹ್ವಾನಿಸ ಲಾಗಿದೆ.

2025-26 ನೇ ಸಾಲಿನಲ್ಲಿ ಎಸ್ಸೆಸ್ಸೆಲ್ಸಿ ಹಾಗೂ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇ.80 ಮತ್ತು ಅದಕ್ಕೂ ಅಧಿಕ ಫಲಿತಾಂಶ ಪಡೆದ ಮಕ್ಕಳು ಪ್ರತಿಭಾ ಪುರಸ್ಕಾರಕ್ಕೆ ಅರ್ಹರಾಗಿರುತ್ತಾರೆ.

ಅರ್ಹ ಮಕ್ಕಳ ಅಂಕಪಟ್ಟಿ ಮತ್ತು ಭಾವಚಿತ್ರದೊಂದಿಗೆ ಅರ್ಜಿಯನ್ನು ಅವರ ಪಾಲಕರು ಆಯಾ ತಾಲೂಕು ಘಟಕದ ಅಧ್ಯಕ್ಷರು ಮತ್ತು ಪ್ರಧಾನ ಕಾರ್ಯದರ್ಶಿ ಗೆ ಸಲ್ಲಿಸಬೇಕು. ವಿಜಯಪುರ ನಗರ ಮತ್ತು ತಾಲೂಕಿನ ಸದಸ್ಯರು ಕಾರ್ಯದರ್ಶಿಗಳಾದ ಅವಿನಾಶ ಬಿದರಿ (ಮೊ: 9513139595) ಮತ್ತು ವಿನೋದ ಸಾರವಾಡ (ಮೊ: 9916553711 ಅವರಿಗೆ ಸಲ್ಲಿಸಬೇಕು.

ಅರ್ಜಿಗಳನ್ನು ಸಲ್ಲಿಸಲು ಜುಲೈ.10 ಕೊನೆಯ ದಿನವಾಗಿರುತ್ತದೆ.

ಈ ತಿಂಗಳು ಮೂರನೆ ವಾರ ನಡೆಯಲಿರುವ ಪತ್ರಿಕಾ ದಿನಾಚರಣೆ ಯಂದು ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುವುದು ಎಂದು ಜಿಲ್ಲಾಧ್ಯಕ್ಷ ಅಶೋಕ ಯಡಳ್ಳಿ, ಪ್ರಧಾನ ಕಾರ್ಯದರ್ಶಿ ಇಂದುಶೇಖರ ಮಣೂರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಳ್ಳಾರಿ ಜಿಲ್ಲೆಯಲ್ಲಿ ಮನೆ-ಮನೆಗೆ ಮತದಾರರ ಪಟ್ಟಿ ಪರಿಷ್ಕರಣೆ ಕುರಿತ ನಮೂನೆ ವಿತರಣೆ: ಶೇ. 85.56ರಷ್ಟು ಪ್ರಗತಿ

**ಬಳ್ಳಾರಿ,ಜು.08.**ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಚುರುಕಿನಿಂದ ಸಾಗುತ್ತಿದ್ದು, ಬೂತ್ ಮಟ್ಟದ ಅಧಿಕಾರಿಗಳು ಮತದಾರರಿಗೆ ಎಸ್‌ಐಆರ್ ಎನ್ಯುಮರೇಶನ್ ನಮೂನೆಗಳನ್ನು ತಲುಪಿಸಲು ಮನೆ-ಮನೆಗೆ ಭೇಟಿ ನೀಡುವ ಪ್ರಕ್ರಿಯೆ ನಡೆಯುತ್ತಿದೆ. ಜಿಲ್ಲೆಯಲ್ಲಿ ಈವರೆಗೆ ಶೇ.85.56 ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ನಾಗೇಂದ್ರ ಪ್ರಸಾದ್.ಕೆ ಅವರು ತಿಳಿಸಿದ್ದಾರೆ.

ಜಿಲ್ಲೆಯ ಒಟ್ಟು 12,29,586 ಮತದಾರರಿಗೆ ಈಗಾಗಲೇ ಅಗತ್ಯವಿರುವ ಗಣತಿ ನಮೂನೆಗಳನ್ನು ಮುದ್ರಿಸಿ ಬಿ.ಎಲ್.ಒ ಗಳಿಗೆ ವಿತರಿಸಲಾಗಿದೆ. ಜಿಲ್ಲೆಯಲ್ಲಿ ಒಟ್ಟಾರೆ ಶೇ. 97.83 ರಷ್ಟು ಮತದಾರರ ಮ್ಯಾಪಿಂಗ್ ಕಾರ್ಯ ಪೂರ್ಣಗೊಂಡಿದೆ.

**ಗಣತಿ ಮತ್ತು ಡಿಜಿಟಲೀಕರಣ:**

ಮನೆ-ಮನೆ ಗಣತಿ ಹಾಗೂ ಡಿಜಿಟಲೀಕರಣ ಪ್ರಕ್ರಿಯೆಯು ಜೂನ್ 30 ರಿಂದ ಆರಂಭವಾಗಿದ್ದು, ಜುಲೈ 29 ರವರೆಗೆ ನಡೆಯಲಿದೆ. ಜಿಲ್ಲೆಯಾದ್ಯಂತ ಇದುವರೆಗೆ ಒಟ್ಟು 10,55,044 (ಶೇ. 85.56) ಗಣತಿ ನಮೂನೆಗಳನ್ನು ಈಗಾಗಲೇ ವಿತರಿಸಲಾಗಿದೆ. ಪ್ರಸ್ತುತ 1,73,142 (ಶೇ. 14.08) ನಮೂನೆಗಳ ಡಿಜಿಟಲೀ ಕರಣ ಕಾರ್ಯ ಮುಕ್ತಾಯಗೊಂಡಿದೆ. ಇದಲ್ಲದೆ, 1,348 ಮತದಾರರು ಆನ್‌ಲೈನ್ ಮೂಲಕ ಸ್ವತಃ ನಮೂನೆಗಳನ್ನು ಸಲ್ಲಿಸಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ಪಟ್ಟಿ ಪರಿಷ್ಕರಣೆ ವೇಳೆ ಒಟ್ಟು



1,626 ಮತದಾರರನ್ನು ವಿಶೇಷ ವರ್ಗದಡಿ ಗುರುತಿಸಲಾಗಿದೆ. ಇದರಲ್ಲಿ 808 ಮೃತ ಮತದಾರರು, 593 ಕಾಯಂ ಸ್ಥಳಾಂತರ ಗೊಂಡವರು, 195 ಈಗಾಗಲೇ ನೊಂದಾಯಿತರಾಗಿರುವವರು, 11 ಗೈರುಹಾಜರಿ/ಪತ್ತೆಯಾಗದ ಮತದಾರರು ಹಾಗೂ 19 ಇತರ ಪ್ರಕರಣಗಳು ಒಳಗೊಂಡಿವೆ.

ವಿಧಾನಸಭಾವಾರು ಪ್ರಗತಿ (ಜುಲೈ 7, ಸಂಜೆ 06 ಗಂಟೆಯ ವರೆಗೆ):

**ಕಂಪ್ಲಿ (91):** 2,28,666 ಮತದಾರರಿದ್ದು, 2,18,984 ಗಣತಿ ನಮೂನೆಗಳನ್ನು ವಿತರಿಸಲಾಗಿದೆ. 48,727 ನಮೂನೆಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ.

**ಸಿರುಗುಪ್ಪ (92):** 2,28,277 ಮತದಾರರಿದ್ದು, 2,20,893 ಗಣತಿ ನಮೂನೆಗಳನ್ನು ವಿತರಿಸಲಾಗಿದೆ. 42,625 ನಮೂನೆಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ.

**ಬಳ್ಳಾರಿ ಗ್ರಾಮೀಣ (93):** 2,51,325 ಮತದಾರರಿದ್ದು, 2,01,240 ಗಣತಿ ನಮೂನೆಗಳನ್ನು ವಿತರಿಸಲಾಗಿದೆ. 11,419 ನಮೂನೆ ಡಿಜಿಟಲೀಕರಣವಾಗಿವೆ.

**ಬಳ್ಳಾರಿ ನಗರ (94):** 2,79,144 ಮತದಾರರಿದ್ದು, 1,91,950 ಗಣತಿ ನಮೂನೆಗಳನ್ನು ವಿತರಿಸಲಾಗಿದೆ. 11,583 ನಮೂನೆಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ.

**ಸಂಡೂರು(95):** 2,42,174 ಮತದಾರರಿದ್ದು, 2,18,977 ಗಣತಿ ನಮೂನೆಗಳನ್ನು ವಿತರಿಸಲಾಗಿದೆ. 58,788 ನಮೂನೆಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ.

ಜಿಲ್ಲೆಯಲ್ಲಿ ಮತದಾರರ ಪಟ್ಟಿಯನ್ನು ಅತ್ಯಂತ ಪಾರದರ್ಶಕವಾಗಿ ರೂಪಿಸಲು ಸಾರ್ವಜನಿಕರು ಮತ್ತು ಮತದಾರರು ತಮ್ಮ ಮನೆಗೆ ಭೇಟಿ ನೀಡುವ ಬಿ.ಎಲ್.ಒ ಅಧಿಕಾರಿಗಳಿಗೆ ಅಗತ್ಯ ಮಾಹಿತಿ ನೀಡಿ ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅತಿ ಶೀಘ್ರದಲ್ಲಿ ಮಹರ್ಷಿ ವಾಲ್ಮೀಕಿ ಪುತ್ಥಳಿ ಅನಾವರಣ ಅದ್ಧೂರಿ ಕಾರ್ಯಕ್ರಮಕ್ಕೆ ಯೋಜನೆ: ಶಾಸಕ ಭರತ್ ರೆಡ್ಡಿ

**ಬಳ್ಳಾರಿ, ಜು.08:** ಕೆಲ ಕಾರಣಗಳಿಂದ ಮಹರ್ಷಿ ವಾಲ್ಮೀಕಿಯವರ ಪುತ್ಥಳಿಯ ಅನಾವರಣ ಕಾರ್ಯಕ್ರಮ ಮುಂದೂಡಲ್ಪಟ್ಟಿದ್ದು, ಅತಿ ಶೀಘ್ರ ಅನಾವರಣ ಕಾರ್ಯಕ್ರಮ ಏರ್ಪಡಿಸಲಾಗುವುದು ಎಂದು ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಹೇಳಿದರು.



ಮಂಗಳವಾರ ನಗರದ ಸೊಂತ ಲಿಂಗಣ್ಣ ಕಾಲೋನಿಯಲ್ಲಿ ಏರ್ಪಡಿಸಿದ್ದ ಪಾರ್ಕ್ ಅಭಿವೃದ್ಧಿ ಕಾಮಗಾರಿಯ ಭೂಮಿ ಪೂಜೆಯಲ್ಲಿ ಭಾಗವಹಿಸಿದ ನಂತರ ಮಾಧ್ಯಮದವರೊಂದಿಗೆ ಮಾತನಾಡಿದರು.

ಈ ಹಿಂದೆ ಒಂದು ದುರ್ಘಟನೆ ನಡೆದು ಕಾರ್ಯಕ್ರಮ ಮುಂದೂಡಲ್ಪಟ್ಟಿತ್ತು, ಆದರೆ ಈಗ ಯಾರೇ ಅಡ್ಡ ಬಂದರೂ ಕಾರ್ಯಕ್ರಮ ನಿಲ್ಲುವುದಿಲ್ಲ, ಈ ಹಿಂದೆ ಅಂದುಕೊಂಡದ್ದಕ್ಕಿಂತ ಅದ್ಧೂರಿಯಾಗಿ ಅನಾವರಣ ಕಾರ್ಯಕ್ರಮ ಏರ್ಪಡಿಸಲಿದ್ದೇವೆ ಎಂದರು.

ಕೊಳಗಲ್ ರಸ್ತೆಯ ಅಭಿವೃದ್ಧಿಗೆ ಸಂಬಂಧಿಸಿ ಮರಗಳ ತೆರವು ವಿಚಾರಕ್ಕೆ ಪ್ರತಿಕ್ರಿಯಿಸಿದ ಶಾಸಕ ನಾರಾ ಭರತ್ ರೆಡ್ಡಿ, ರಸ್ತೆ ಸೇರಿದಂತೆ ಯಾವುದೇ ರೀತಿಯ ಅಭಿವೃದ್ಧಿ ಮಾಡುವಾಗ ಮರ ಸೇರಿದಂತೆ ವಿವಿಧ ಅಡೆತಡೆಗಳನ್ನು ತೆರವು ಮಾಡುವುದು ಸಹಜ, ಮರಗಳ ತೆರವನ್ನು ಪ್ರಶ್ನಿಸುವವರು ಯಾರೂ ಒಂದು ಮರ ನೆಡುವುದಿಲ್ಲ, ಹೆಸರಿಗೆ ಪರಿಸರ ಪ್ರೇಮಿ ಎಂದು ಹೇಳಿಕೊಳ್ಳುತ್ತಾರೆ, ನಾನು ಶಾಸಕನಾದ ಒಂದೇ ವರ್ಷಕ್ಕೆ ಮಿಯಾವಾಕಿ ಮಾದರಿಯಲ್ಲಿ 25 ಸಾವಿರ ಸಸಿಗಳನ್ನು ನೆಟ್ಟಿರುವೆ. ಜಿಪಂ ಸದಸ್ಯ ಆಗಿದ್ದ ವೇಳೆ ಕೊರ್ಲಗುಂದಿ ಕ್ಷೇತ್ರದಲ್ಲಿ 45 ಸಾವಿರ ಸಸಿಗಳನ್ನು ನೆಟ್ಟಿರುವೆ, ನಗರವನ್ನು ಪ್ರವೇಶಿಸುವ ರಸ್ತೆಗಳು ಅಭಿವೃದ್ಧಿ ಆಗಲೇ ಬೇಕು, ಇಲ್ಲದಿದ್ದರೆ ಅಭಿವೃದ್ಧಿ ಕುಂಠಿತ ಆಗುತ್ತದೆ ಎಂದರು.

ಜಿಲ್ಲೆಯ ಶಾಸಕರ ಬೆಂಬಲವಿದ್ದವರಿಗೆ ಸಚಿವ ಸ್ಥಾನ: ನೀವು ಸಚಿವ ಸ್ಥಾನ ಆಕಾಂಕ್ಷಿಯೇ? ಯುವಕರ ಕೋಟಾದಲ್ಲಿ ನಿಮಗೆ ಅವಕಾಶ ಸಿಗಲಿದೆಯೇ ಎಂದು ಕೇಳಿದ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಶಾಸಕ ನಾರಾ ಭರತ್ ರೆಡ್ಡಿ; ನನ್ನ ಮೇಲಿನ ಅಭಿಮಾನಕ್ಕೆ ನನ್ನ ಸಹದ್ಯೋಗಿ ಶಾಕರು ನನಗೆ ಸಚಿವ ಸ್ಥಾನ ಸಿಗಲಿ ಎಂದಿದ್ದಾರೆ, ಅದು ಅವರ ಪ್ರೀತಿ ಅಭಿಮಾನ. ಯುವಕರ ಕೋಟಾದಡಿ ಅವಕಾಶ ಸಿಗುವುದಾದರೆ ಶಾಸಕರಾದ ಬಸವರಾಜ ಶಿವಗಂಗಾ ಹಾಗೂ ರವಿ ಗಣಿಗ ಅವರಿಗೆ ಅವಕಾಶ ಸಿಗಲಿ. ಮುಂದುವರಿದು; ಜಿಲ್ಲೆಯಲ್ಲಿ ನಾವು ಈಗಾಗಲೇ ಯಾರಿಗೆ ಕೊಡಬೇಕು ಎಂದು ಹೇಳಿದ್ದೇವೆಯೋ ಅವರಿಗೆ ಸಚಿವ ಸ್ಥಾನದ ಅವಕಾಶ ಸಿಗಲಿದೆ ಎಂದರು. ಪಾರ್ಕ್‌ಗಳ ಅಭಿವೃದ್ಧಿಗೆ ಸಂಬಂಧಿಸಿ, ಸಾರ್ವಜನಿಕರು ಆಸ್ಥೆ ವಹಿಸಿ ಪಾರ್ಕ್‌ಗಳ ಅಭಿವೃದ್ಧಿಗೆ ಮುಂದಾಗಬೇಕು, ಪಾರ್ಕ್ ಸಮಿತಿಗಳನ್ನು ಮಾಡಿಕೊಂಡರೆ ಪಾಲಿಕೆಯಿಂದ ಮಾಸಿಕ 10 ಸಾವಿರ ರೂ.ಗಳನ್ನು ನಿರ್ವಹಣಾ ವೆಚ್ಚ ನೀಡಲಾಗುವುದು. ಎಪಿಎಂಸಿಯಲ್ಲಿ ನಿಯಮ ಮೀರಿ ಅಂಗಡಿಗಳನ್ನು ವ್ಯಾಪಾರಿಗಳಿಗೆ ನೀಡಬಾರದು ಎಂದ ಅವರು, ಇತ್ತೀಚೆಗೆ ನಗರದಲ್ಲಿ ನಡೆಯುತ್ತಿರುವ ಲೋಕಾಯುಕ್ತ ದಾಳಿಗಳನ್ನು ಸಮರ್ಥಿಸಿದರಲ್ಲದೇ ಲೋಕಾಯುಕ್ತರಿಗೆ ಬೆಂಬಲಿಸುವುದಾಗಿ ಹೇಳಿದರು.

ಪಾಲಿಕೆಯ ವಾರ್ಡಿನ ಸದಸ್ಯ ಹನುಮಂತಪ್ಪ, ಮೇಯರ್ ಪಿ.ಗಾದೆಪ್ಪ, ಪಾಲಿಕೆಯ ಇತರ ಸದಸ್ಯರಾದ ನೂರ್ ಮೊಹಮ್ಮದ್, ಕುಬೇರಾ, ಕಾಂಗ್ರೆಸ್ ಮುಖಂಡರಾದ ಬಜ್ಜಪ್ಪ, ದುರ್ಗಾ ಮೋಹನ್, ಯರಗುಡಿ ಸೋಮಣ್ಣ, ನಾಗರಾಜ್, ಬಿಆರೆಲ್ ಸೀನಾ, ಹೊನ್ನಪ್ಪ, ಪರಶುರಾಮುಡು, ಹಗರಿ ಗೋವಿಂದ, ಚಾನಾಳ್ ಶೇಖರ್, ಪದ್ಮಾ ಹಾಜರಿದ್ದರು.




ನೇತಾಜಿ ಸುಭಾಷ್ ಚಂದ್ರ ಬೋಸ್ ಅವರನ್ನು ಬಿಜೆಪಿ ಅವಮಾನಿಸಿರುವುದನ್ನು ಖಂಡಿಸಿ ಅಖಿಲ ಭಾರತ ಪ್ರಜಾಸತ್ತಾತ್ಮಕ ವಿದ್ಯಾರ್ಥಿ ಸಂಘಟನೆಯ ಕರ್ನಾಟಕ ರಾಜ್ಯ ಸಮಿತಿ ಸದಸ್ಯರು ಬುಧವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿದರು.

# ಲಾಯನ್ಸ್ ಕ್ಲಬ್ ಕಾರ್ಯಕ್ರಮದಲ್ಲಿ ಸಾಧಕರಿಗೆ ಸನ್ಮಾನ




**ಅಂಕೋಲಾ, ಜು.8:** ಲಯನ್ಸ್ ಕ್ಲಬ್ ಅಂಕೋಲಾ ಸಿಟಿ ಇದರ ನೂತನ ಅಧ್ಯಕ್ಷರಾಗಿ ಪ್ರದೀಪ ರಾಯ್ಕರ, ಕಾರ್ಯದರ್ಶಿಯಾಗಿ ಡಾ. ವಿಜಯದೀಪ ಎಂ., ಖಜಾಂಚಿಯಾಗಿ ಉದಯಕುಮಾರ ನೇರಲಕಟ್ಟೆ ಇವರು ಅಧಿಕಾರ ಸ್ವೀಕಾರ ಕಾರ್ಯಕ್ರಮ ಪಟ್ಟಣದ ನಾಡವರ ಸಮುದಾಯ ಭವನದಲ್ಲಿ ನಡೆಯಿತು.

ಲಯನ್ಸ್ ಕ್ಲಬ್ ಪಿಡಿಜಿ ಶ್ರೀಕಾಂತ ಮೊರೆ ಪದಗ್ರಹಣ ಕಾರ್ಯಕ್ರಮ ಉದ್ಘಾಟಿಸಿ ಅಂಕೋಲಾ ಲಯನ್ಸ್ ಕ್ಲಬ್ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು. ನೂತನ ಅಧ್ಯಕ್ಷ ಪ್ರದೀಪ ರಾಯ್ಕರ ಮಾತನಾಡಿ, ಈಗಾಗಲೇ ಲಯನ್ಸ್ ಕ್ಲಬ್ ಸಾಕಷ್ಟು ವಿದಾಯಕ ಕಾರ್ಯಗಳನ್ನು ಮಾಡಿದ್ದು, ನನ್ನ ಅಧಿಕಾರ ಅವಧಿ ಯಲ್ಲಿ ಇನ್ನು ಹೆಚ್ಚಿನ ಸೇವೆ ಸಲ್ಲಿಸಲು ಬದ್ಧನಾಗಿದ್ದೇನೆ ಎಂದರು.

ರಿಜನಲ್ ಚೇರಪರ್ಸನ್ ವಿನಯ ನಾಯ್ಕ, ಲಯನ್ಸ್ ಕ್ಲಬ್‌ನ ಡಾ. ಶಾಂತಾರಾಮ ಶಿರೋಡ್ಕರ, ಕೃಷ್ಣಾನಂದ ವಿ. ಶೆಟ್ಟಿ ಮಾತನಾಡಿದರು. ನಿಕಟ ಪೂರ್ವ ಅಧ್ಯಕ್ಷ ಶಶಿಧರ ಶೇಣ್ವಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಎನ್.ಎಚ್.ನಾಯ್ಕ ವರದಿ ವಾಚಿಸಿದರು. ವಿಜಯಾ ಭಟ್ ಪ್ರಾರ್ಥಿಸಿದರು. ಜಿ.ಎಂ.ಹೆಗಡೆ ವಂದಿಸಿದರು.

**ಸನ್ಮಾನ :** ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಗುರುತಿಸಿಕೊಂಡ ಡಾ. ವೆಂಕಟೇಶ ಕೇಣಿಕರ, ಕಿರಣ ಕೇಣಿಕರ, ವಾಸುದೇವ ಗುನಗಾ ಇವರಿಗೆ ಸನ್ಮಾನಿಸಿ ಗೌರವಿಸಿದರು.

## ಭ್ರೂಣಲಿಂಗ ಪತ್ತೆ: ನಿರ್ದಾಕ್ಷಿಣ್ಯ ಕ್ರಮಕ್ಕೆ ಸೂಚನೆ

# ನಕಲಿ ವೈದ್ಯರ ವಿರುದ್ಧವೂ ಕ್ರಮಕ್ಕೆ ವಿಜಯಪುರ ಡಿ.ಸಿ ಆದೇಶ ವಿಶೇಷ ತಂಡದ ಕಾರ್ಯಾಚರಣೆ ಚುರುಕು



**ವಿಜಯಪುರ, ಜು.8:** ವಿಜಯಪುರ ಗಡಿ ಜಿಲ್ಲೆಯಾಗಿರುವುದರಿಂದ ಪ್ರಸವ ಪೂರ್ವ ಭ್ರೂಣ ಲಿಂಗ ಪತ್ತೆ ಹಾಗೂ ಹತ್ಯೆ ನಡೆಯದಂತೆ ಕಣ್ಗಾವಲು ಇರಿಸಲು ಈ ಕಾಯ್ದೆಯಡಿ ರಚಿತವಾದ ತಂಡ ನಿಯಮಿತವಾಗಿ ತಪಾಸಣೆ ಮತ್ತು ದಿಢೀರ ಕಾರ್ಯಾಚರಣೆಯನ್ನು ಕೈಗೊಂಡು ಇಂತಹ ಪ್ರಕರಣ ಜಿಲ್ಲೆಯಲ್ಲಿ ನಡೆಯದಂತೆ ನೋಡಿಕೊಳ್ಳಬೇಕು. ಆಸ್ಪತ್ರೆ ಹಾಗೂ ಸ್ಕ್ಯಾನಿಂಗ್ ಕೇಂದ್ರಗಳ ಪರಿಶೀಲನೆ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ನಡೆದ ಕೆಪಿಎಂಇ ಜಿಲ್ಲಾ ನೋಂದಣಿ ಮತ್ತು ಕುಂದುಕೊರತೆ ನಿವಾರಣೆ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಬಾಲ ಗರ್ಭಿಣಿಯರು ಕಂಡು ಬಂದರೆ ಅಂಥವರ ಮಾಹಿತಿಯನ್ನು ಸಹಾಯವಾಣಿ 1098 ಗೆ ಕರೆ ಮಾಡಲು ತಿಳಿಸಿ ಜಿಲ್ಲೆಯಲ್ಲಿ ಬಾಲ ಗರ್ಭಿಣಿಯರ ಪ್ರಕರಣಗಳು ಕಡಿಮೆ ಮಾಡುವ ನಿಟ್ಟಿನಲ್ಲಿ ಸಂಬಂಧಪಟ್ಟ ಇಲಾಖೆಗಳ ಸಮನ್ವಯದೊಂದಿಗೆ ಕಾರ್ಯಪ್ರವೃತವಾಗಿ ಕೆಲಸ ನಿರ್ವಹಿಸಬೇಕೆಂದು ಸೂಚಿಸಿದರು.

ವಿಜಯಪುರ ತಾಲೂಕಿನಲ್ಲಿ 742 ಖಾಸಗಿ ಆರೋಗ್ಯ ಸಂಸ್ಥೆಗಳು ಜಿಲ್ಲಾ ಕೆ.ಪಿ.ಎಂ.ಇ ಅಡಿಯಲ್ಲಿ ನೋಂದಣಿ ಆಗಿರುತ್ತದೆ. ಬ.ಬಾಗೇವಾಡಿ ತಾಲೂಕಿನಲ್ಲಿ 109, ಮುದ್ದೇಬಿಹಾಳ ತಾಲೂಕಿನಲ್ಲಿ 115, ಇಂಡಿ ತಾಲೂಕಿನಲ್ಲಿ 152. ಸಿಂದಗಿ ತಾಲೂಕಿನಲ್ಲಿ 157, ಒಟ್ಟು 1275 ಖಾಸಗಿ ಆಸ್ಪತ್ರೆಗಳು ನೋಂದಣಿ ಆಗಿರುತ್ತವೆ. ಜಿಲ್ಲೆಯಲ್ಲಿ ನೋಂದಣಿಗೊಂಡ ಪ್ರತಿಯೊಂದು ಖಾಸಗಿ ಆರೋಗ್ಯ ಸಂಸ್ಥೆಗಳು ಕಡ್ಡಾಯವಾಗಿ ನಿರ್ದಿ?ಪಡಿಸಿದ ವೈದ್ಯಕೀಯ ಚಿಕಿತ್ಸಾ ಪದ್ಧತಿ, ಸಂಸ್ಥೆಯ ಹೆಸರು, ಮಾಲಿಕರು, ನೋಂದಣಿ ಸಂಖ್ಯೆಗಳ ಬಣ್ಣದ ಫಲಕವನ್ನು ಪ್ರದರ್ಶಿಸುವಂತೆ ಸಭೆಯಲ್ಲಿ ಹಾಜರಿದ್ದ ತಾಲೂಕಾ ಆರೋಗ್ಯಾಧಿಕಾರಿಗಳಿಗೆ ಸೂಚಿಸಿದರು.

ಇನ್ನು ಮುಂದೆ ಜಿಲ್ಲೆಯಲ್ಲಿ ನವೀಕರಣಕ್ಕಾಗಿ ಅರ್ಜಿ ಸಲ್ಲಿಸುವ ಖಾಸಗಿ ಆರೋಗ್ಯ ಸಂಸ್ಥೆಗಳು ಕಡ್ಡಾಯವಾಗಿ ನಿರ್ದಿಷ್ಟಪಡಿಸಿದ ಬಣ್ಣದ ಫಲಕ ಅಳವಡಿಸಿದರೆ ಮಾತ್ರ ಕೆ.ಪಿ.ಎಂ.ಇ ಅಡಿ ಅನುಮೋದನೆ ನೀಡುವಂತೆ ಸಭೆಯಲ್ಲಿ ಪಾಲ್ಗೊಂಡಿದ್ದ ಅಧಿಕಾರಿಗಳಿಗೆ ಸೂಚಿಸಿದರು. ನಕಲಿ ವೈದ್ಯರ ವಿರುದ್ಧವೂ ಕ್ರಮಕ್ಕೆ ಸೂಚನೆ: ನಕಲಿ ವೈದ್ಯರ ವಿರುದ್ಧ ಕ್ರಮ ಜರುಗಿಸಲು ವಿಶೇ? ಕಾರ್ಯಪಡೆ ತಂಡವು ಪ್ರತಿ ವಾರ ಒಂದು ತಾಲೂಕಿಗೆ ಅನಿರೀಕ್ಷಿತ ಭೇಟಿ ನೀಡಿ ನಕಲಿ ವೈದ್ಯರ ವಿರುದ್ಧ ನಿಯಮಾನುಸಾರ ಕ್ರಮ ಜರುಗಿಸಿ ವರದಿ ಸಲ್ಲಿಸಲು ಎಲ್ಲ ತಾಲೂಕಾ ಆರೋಗ್ಯಾಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚಿಸಿದರು.

# ವಿಜಯಪುರ ನಗರ ಕ್ಷೇತ್ರ: ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಜಿಲ್ಲಾಧಿಕಾರಿ ದಿಢೀರ್ ಭೇಟಿ, ಪರಿಶೀಲನೆ



**ವಿಜಯಪುರ,ಜು.8:** ಜಿಲ್ಲೆಯಲ್ಲಿ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣಾ ಕಾರ್ಯವು ಅತ್ಯಂತ ಚುರುಕಿನಿಂದ ಸಾಗಿದ್ದು, ಜಿಲ್ಲಾ ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಬುಧವಾರ ವಿಜಯಪುರ ನಗರ ಮತಕ್ಷೇತ್ರದ ವ್ಯಾಪ್ತಿಯಲ್ಲಿ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕಳೆದ ಜೂನ್ 29 ರಿಂದಲೇ ಜಿಲ್ಲೆಯಾದ್ಯಂತ ಮತದಾರರ ಪಟ್ಟಿ ಸಮಗ್ರ ಪರಿಷ್ಕರಣಾ ಕಾರ್ಯವು ಆರಂಭಗೊಂಡಿದೆ. ಈ ಹಿನ್ನೆಲೆಯಲ್ಲಿ ನಗರದ ಚುನಾವಣೆ ಭಾಗ ಸಂಖ್ಯೆ 2ರ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಪರಿಷ್ಕರಣಾ ಕಾರ್ಯದ ಪ್ರಗತಿಯನ್ನು ಖುದ್ದಾಗಿ ವೀಕ್ಷಿಸಿದ ಜಿಲ್ಲಾಧಿಕಾರಿಗಳು, ಇಡೀ ಪ್ರಕ್ರಿಯೆಯ ಮೇಲ್ವಿಚಾರಣೆ ನಡೆಸಿದರು.

ಇದೇ ವೇಳೆ ಸ್ಥಳದಲ್ಲಿದ್ದ ನಿಯೋಜಿತ ಅಧಿಕಾರಿಗಳು ಹಾಗೂ ಸಿಬ್ಬಂದಿಯೊಂದಿಗೆ ಚರ್ಚಿಸಿದ ಅವರು, ಯಾವುದೇ ಲೋಪ ದೋಷಗಳಿಗೆ ಆಸ್ಪದ ನೀಡದಂತೆ ಅತ್ಯಂತ ನಿಖರವಾಗಿ ಕಾರ್ಯ ನಿರ್ವಹಿಸಲು ಅಗತ್ಯ ಸಲಹೆ– ಸೂಚನೆಗಳನ್ನು ನೀಡಿದರು.

## ಅತಿ ಹಿಂದುಳಿದ ಸ್ವಾಮೀಜಿಗಳ ನಡೆ, ಧರ್ಮಸ್ಥಳ ಕಡೆ

# ಧರ್ಮಸ್ಥಳದ ಡಾ. ವೀರೇಂದ್ರ ಹೆಗ್ಗಡೆಗೆ ಬೆಂಬಲ ಪತ್ರ : ಪ್ರಣವಾನಂದ ಶ್ರೀ

**ಕಲಬುರಗಿ, ಜು.8:** ರಾಜ್ಯದ ಹಿಂದುಳಿದ ಮಠಾಧೀಶರ ತಂಡವು ಜುಲೈ ಹತ್ತರಂದು ಶುಕ್ರವಾರ ಧರ್ಮಸ್ಥಳಕ್ಕೆ ತೆರಳಿ ಧರ್ಮಾಧಿಕಾರಿ ಡಾ. ಡಿ ವೀರೇಂದ್ರ ಹೆಗ್ಗಡೆಯವರಿಗೆ ಪೂರ್ಣ ಬೆಂಬಲ ವ್ಯಕ್ತಪಡಿಸುವ ಪತ್ರ ನೀಡಲಾಗುವುದು ಎಂದು ರಾಜ್ಯ ಅತಿ ಹಿಂದುಳಿದ ಮಠಾಧೀಶರ ಮಹಾಸಭೆಯ ರಾಜ್ಯಾಧ್ಯಕ್ಷರಾದ ಡಾ. ಪ್ರಣವಾನಂದ ಸ್ವಾಮೀಜಿ ತಿಳಿಸಿದ್ದಾರೆ.



ಕಲಬುರಗಿಯಲ್ಲಿ ಜೂ.27 ಮತ್ತು 28 ರಂದು ನಡೆದ ರಾಜ್ಯದ ಅತಿ ಹಿಂದುಳಿದ ಮಠಾಧೀಶರ ಮಹಾಸಭೆಯಲ್ಲಿ ಕೈಗೊಂಡ ನಿರ್ಣಯದಂತೆ ಧರ್ಮಸ್ಥಳ ಕ್ಷೇತ್ರ ಪ್ರವಾಸ ಕೈಗೊಳ್ಳಲಾಗುತ್ತಿದೆ. ಅದರ ಮೂಲಕ ಸನಾತನ ಧರ್ಮವನ್ನು ಉಳಿಸಬೇಕು.ಶುಕ್ರವಾರ ಬೆಳಗ್ಗೆ 10:30ಕ್ಕೆ ರಾಜ್ಯದ ವಿವಿಧ ಸಮುದಾಯಗಳ ಎಂಟು ಹತ್ತು ಸ್ವಾಮೀಜಿಗಳು ದೇವಸ್ಥಾನಕ್ಕೆ ತೆರಳಿ ಶ್ರೀ ಮಂಜುನಾಥ ಸ್ವಾಮಿಯ ದರ್ಶನ ಪಡೆದು ನಂತರ ಧರ್ಮಸ್ಥಳದ ಧರ್ಮಾಧಿಕಾರಿ ಡಾ. ಡಿ ವೀರೇಂದ್ರ ಹೆಗ್ಗಡೆಯವರನ್ನು ಭೇಟಿ ಮಾಡಿ ಚರ್ಚಿಸಿ ಬೆಂಬಲ ಪತ್ರ ಹಸ್ತಾಂತರಿಸಲಾ ಗುವುದು.

ಭಾರತದ ಆಧ್ಯಾತ್ಮಿಕ ಕೇಂದ್ರಗಳಲ್ಲಿ ಬಹಳ ದೊಡ್ಡ ಮಟ್ಟದಲ್ಲಿ ಪ್ರಸಿದ್ಧಿ ಹೊಂದಿದ ಶ್ರೀ ಕ್ಷೇತ್ರ ಧರ್ಮಸ್ಥಳ ಹಾಗೂ ಪರಮಪೂಜ್ಯ ಡಾ. ಡಿ ವೀರೇಂದ್ರ ಹೆಗ್ಗಡೆಯವರನ್ನು ಉದ್ದೇಶಪೂರ್ವಕವಾಗಿ ಗುರಿಯಾಗಿಸಿ ಕಳಂಕ ಹಚ್ಚಲು ಯತ್ನಿಸಲಾಗುತ್ತಿದೆ.

ಸನಾತನ ಧರ್ಮವನ್ನು ನಿಂದಿಸಿ ನಾಶಗೊಳಿಸಲು ಅಂತರಾಷ್ಟ್ರೀಯ ಮಟ್ಟದಲ್ಲಿ ನಡೆಯುತ್ತಿರುವ ಷಡ್ಯಂತ್ರದ ವಿರುದ್ಧ ರಾಜ್ಯದ ಅತಿ ಹಿಂದುಳಿದ ಮಠಾಧೀಶರು ಒಗ್ಗಟ್ಟಿನಿಂದ ದನಿಗೂಡಿಸಲು ಅತಿ ಹಿಂದುಳಿದ ಸ್ವಾಮೀಜಿಗಳ ನಡೆ ಧರ್ಮಸ್ಥಳ ಕಡೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಡಾ. ಪ್ರಣವಾನಂದ ಸ್ವಾಮೀಜಿ

# ಬಳ್ಳಾರಿ: ಮುಂದುವರೆದ ಸರ್ಕಾರಿ ಜಾಗ ಒತ್ತುವರಿ ತೆರವು ಕಾರ್ಯಾಚರಣೆ

ಬಳ್ಳಾರಿ,ಜು.08.ನಗರದ ವಿವಿಧ ವಾರ್ಡ್ಗಳಲ್ಲಿರುವ ಕೋಟ್ಯಂತರ ರೂಪಾಯಿ ಮೌಲ್ಯದ ಸರ್ಕಾರಿ ಜಾಗ ಹಾಗೂ ಅಂಗನವಾಡಿ ಕೇಂದ್ರಗಳಿಗೆ ಕಾಯ್ದಿರಿಸಿದ ಜಾಗಗಳಲ್ಲಿ ಅತಿಕ್ರಮವಾಗಿ ಆಕ್ರಮಿಸಿಕೊಂಡಿರುವುದನ್ನು ಖಚಿತಪಡಿಸಿಕೊಂಡು ಜಿಲ್ಲಾಡಳಿತ ಗುರುವಾರ ಒತ್ತುವರಿ ಕಾರ್ಯಾಚರಣೆ ನಡೆಸಿದೆ.



ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರ ನಿರ್ದೇಶನದಂತೆ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ ಹಾಗೂ ತಹಶೀಲ್ದಾರ್ ಟಿ.ರೇಖಾ ನೇತೃತ್ವದ ಅಧಿಕಾರಿಗಳ ತಂಡವು ನಗರದ ವಿವಿಧೆಡೆ ಭೇಟಿ ನೀಡಿ ಪರಿಶೀಲನೆ ನಡೆಸಿ ಸಾರ್ವಜನಿಕ ಮತ್ತು ಸರ್ಕಾರಿ ಜಾಗಗಳನ್ನು ರಕ್ಷಿಸಲಾಯಿತು.

ಬೆಳ್ಳಂಬೆಳಗ್ಗೆ ವಿವಿಧ ಯಂತ್ರೋಪಕರಣಗಳ ಮೂಲಕ ಸರ್ಕಾರಕ್ಕೆ ಸೇರಬೇಕಾದ ಜಾಗಗಳನ್ನು ಜಿಲ್ಲಾಡಳಿತದ ವತಿಯಿಂದ ತೆರವುಗೊಳಿಸಲಾಯಿತು.

ಬಳ್ಳಾರಿ ನಗರದ ಸಿಟಿಎಸ್ ವಾರ್ಡ್ ನಂ. 21, ಬ್ಲಾಕ್ ನಂ. 03 ರ ಟಿ.ಎಸ್ ನಂ. 41 ರಲ್ಲಿದ್ದ 0.08 ಸೆಂಟ್ಸ್ ಜಾಗವನ್ನು ಅಂಗನವಾಡಿ ಕೇಂದ್ರಕ್ಕೆ ನಿಗದಿಪಡಿಸಲಾಗಿದ್ದು, ಇಲ್ಲಿ ಅತಿಕ್ರಮಣಗೊಂಡ ಜಾಗವನ್ನು ಸುಪರ್ದಿಗೆ ಪಡೆದುಕೊಂಡು ಅತಿಕ್ರಮಣದಾರರ ವಿರುದ್ಧ ಕಾನೂನು ಕ್ರಮ ಜರುಗಿಸುವುದಾಗಿ ಬೋರ್ಡ್ ಹಾಕಲಾಗಿದೆ.

ವಾರ್ಡ್ ನಂ. 22, ಬ್ಲಾಕ್ ನಂ. 11 ರ ಟಿ.ಎಸ್ ನಂ. 94 ವಿ ಯಲ್ಲಿರುವ ಸುಮಾರು 0.49.6 ಸೆಂಟ್ಸ್ ವಿಸ್ತೀರ್ಣದ ಕರ್ನಾಟಕ ಸರ್ಕಾರದ ಬಯಲು ಜಾಗವನ್ನು ಜಿಲ್ಲಾಡಳಿತ ತೆರವುಗೊಳಿಸಿದೆ.

ಅದೇ ರೀತಿ ವಾರ್ಡ್ ನಂ. 21, ಬ್ಲಾಕ್ ನಂ. 03 ರ ಟಿ.ಎಸ್ ನಂ. 43 ರ ಪೈಕಿ ವಿ ಯಲ್ಲಿರುವ 0.75 ಸೆಂಟ್ಸ್ ಜಾಗವು ಸಂಪೂರ್ಣ ಸರ್ಕಾರಿ ಸ್ವತ್ತಾಗಿದ್ದು, ಅಕ್ರಮ ಪ್ರವೇಶ ಅಥವಾ ಒತ್ತುವರಿ ಮಾಡುವವರ ವಿರುದ್ಧ ಕಠಿಣ ಕ್ರಮದ ಎಚ್ಚರಿಕೆ ನೀಡಲಾಗಿದೆ.

ನಗರದ ಬುಡಾ ಪಾರ್ಕ್, ನಾರಾಯಣಪ್ಪ ಕಾಂಪೌಂಡ್, ಕೋಟೆ ಪ್ರದೇಶ ಹಾಗೂ ಸಿದ್ಧಾರ್ಥ ನಗರ, ದೇವಿ ನಗರದ ಸರ್ಕಾರಿ ಜಾಗಗಳಿಗೆ ಕಂದಾಯ ನಿರೀಕ್ಷಕರು, ಗ್ರಾಮ ಆಡಳಿತಾಧಿಕಾರಿಗಳು ಹಾಗೂ ಪೊಲೀಸ್ ಸಿಬ್ಬಂದಿಗಳೊಂದಿಗೆ ಭೇಟಿ ನೀಡಿ ಒತ್ತುವರಿ ತೆರವು ಹಾಗೂ ರಕ್ಷಣಾ ಕಾರ್ಯ ಕೈಗೊಂಡರು.

ಸರ್ಕಾರಿ ಆಸ್ತಿಯನ್ನು ಸಾರ್ವಜನಿಕರ ಹಿತಬಲಿಗಾಗಿ ಕಾಯ್ದಿರಿಸಲಾಗಿದ್ದು, ಯಾವುದೇ ವ್ಯಕ್ತಿ ಅಥವಾ ಸಂಸ್ಥೆಗಳು ಇದನ್ನು ಅಕ್ರಮವಾಗಿ ವಶಪಡಿಸಿಕೊಳ್ಳಲು ಯತ್ನಿಸಿದರೆ ಮುಲಾಜಿಲ್ಲದೆ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಡಳಿತ ತಿಳಿಸಿದೆ.

# ಎಸ್ಐಆರ್‌ಗೆ ರಾಜಕೀಯ ಪಕ್ಷಗಳು ಸಹಕರಿಸಲು ಮತದಾರರ ನೋಂದಣಾಧಿಕಾರಿ ಮೆಕ್ಕಳಕಿ ಮನವಿ

**ವಿಜಯಪುರ,ಜು.8:** ನೈಜ ಮತದಾರರು ಮತದಾರರ ಪಟ್ಟಿಯಿಂದ ಹೊರಗೆ ಉಳಿಯದಂತೆ ಮತ್ತು ಅನರ್ಹ ಮತದಾರರನ್ನು ಯಾವುದೇ ಕಾರಣಕ್ಕೂ ಮತದಾರರ ಪಟ್ಟಿಗೆ ಸೇರ್ಪಡೆಯಾಗದಂತೆ ಕ್ರಮ ವಹಿಸಲು ಎಲ್ಲ ರಾಜಕೀಯ ಪಕ್ಷಗಳು ಹಾಗೂ ಮತದಾರರು ಸಹಕರಿಸಬೇಕು ಎಂದು ಮತದಾರರ ನೋಂದಣಾಧಿಕಾರಿಗಳು ಆಗಿರುವ ಮಹಾನಗರ ಪಾಲಿಕೆ ಆಯುಕ್ತರಾದ ವಿಜಯ ಮೆಕ್ಕಳಕಿ ಅವರು ಹೇಳಿದರು. ಮತದಾರರ ಸಮಗ್ರ ಪರಿಷ್ಕರಣೆ ಕುರಿತು ನಗರದ ಎಲ್ಲ ರಾಜಕೀಯ ಪಕ್ಷಗಳ ಮುಖಂಡರ



ಸಭೆಯ ಅಧ್ಯಕ್ಷತೆ ವಹಿಸಿ ಅವರು ನಗರದ ಎಲ್ಲ ರಾಜಕೀಯ ಪಕ್ಷಗಳ ಮುಖಂಡರ ಸಭೆಯಲ್ಲಿ, ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ತಮ್ಮ ಪಕ್ಷಗಳಿಂದ ನೇಮಿಸಿಕೊಂಡ ಬಿಎಲ್ಒ ಗಳನ್ನು ಈ ಪರಿಷ್ಕರಣೆ ಕಾರ್ಯದಲ್ಲಿ ಭಾಗವಹಿಸುವಂತೆ ನೋಡಿಕೊಳ್ಳಬೇಕು ಎಂದರು. ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಜೂ. 30 ರಿಂದ ಜು. 29ರವರೆಗೆ ಮತದಾರರ ಮನೆಮನೆಗೆ ತೆರಳಿ ಮತದಾರ ಗಣತಿ ನಮೂನೆಗಳನ್ನು ವಿತರಣೆ ಮಾಡಲಾಗುತ್ತಿದೆ. ಈ ಹಂತದಲ್ಲಿ ಆಯಾ ರಾಜಕೀಯ ಪಕ್ಷಗಳಿಂದ ನೇಮಿಸಿದ ಪ್ರತಿನಿಧಿಗಳು ಭಾಗವಹಿಸಬಹುದು ಎಂದರು.

# ಗಾಳಿಯ ರಭಸದಿಂದಾಗಿ ಧರೆಗುರುಳುತ್ತಿರುವ ವಿದ್ಯುತ್ ಕಂಬ, ಗಿಡಮರಗಳು

**ಅಂಕೋಲಾ, ಜು.8:** ತಾಲೂಕಿನಲ್ಲಿ ಈ ಬಾರಿ ಮಳೆಗಿಂತ ಗಾಳಿಯೇ ಹೆಚ್ಚು ಅನಾಹುತ ಸೃಷ್ಟಿಸಿದೆ. ಗಾಳಿಯ ವೇಗವಾದ ರಭಸಕ್ಕೆ ವಿದ್ಯುತ್ ಕಂಬಗಳ ಜತೆಗೆ ಗಿಡಮರಗಳು ಕೂಡ ಧರೆಗುರುತ್ತಿವೆ. ಹಲವು ಮನೆಗಳ ಮೇಲೆ ಗಿಡ ಮರಗಳು ಬಿದ್ದು ಸಾಕಷ್ಟು ಹಾನಿ ಉಂಟಾಗಿದೆ.

ಇಲ್ಲಿಯವರೆಗೆ ತಾಲೂಕಿನಲ್ಲಿ 161 ವಿದ್ಯುತ್ ಕಂಬಗಳು ಮುರಿದುಬಿದ್ದಿವೆ. ಹೀಗಾಗಿ ಹೆಸ್ಕಾಂ ಸಿಬ್ಬಂದಿಗಳು ಕೂಡ ನಿರಂತರವಾಗಿ ತಮ್ಮ ಕಾರ್ಯ ಮಾಡುತ್ತಲೇ ಇದ್ದಾರೆ. ಆಂದ್ಲೆ ಗ್ರಾಮದಲ್ಲಿ ಮರವೊಂದು ವಿದ್ಯುತ್ ಕಂಬದ ಮೇಲೆ ಬಿದ್ದು ಸಾಕಷ್ಟು ಹಾನಿ ಉಂಟಾಗಿದೆ. ಇದರಿಂದಾಗಿ ಸಿಬ್ಬಂದಿಗಳ ಕೊರತೆಯ ನಡುವೆಯು ಹೆಸ್ಕಾಂ ಸಿಬ್ಬಂದಿಗಳು ವಿದ್ಯುತ್ ಲೈನ್ ದುರಸ್ಥಿಗೊಳಿಸಲು ಪರದಾಡುತ್ತಿದ್ದಾರೆ.



# ಹಾರವಾಡದ ಕಡಲಕೊರೆತಕ್ಕೆ ಶಾಶ್ವತ ಪರಿಹಾರ ಯಾವಾಗ ?

**ಅಂಕೋಲಾ, ಜು.8:** ಕಳೆದ ಹಲವು ವರ್ಷಗಳಿಂದ ಹಾರವಾಡ ಎಂಬ ಗ್ರಾಮವು ಕಡಲಕೊರೆತದಿಂದಾಗಿ ಸಾಕಷ್ಟು ನಷ್ಟ ಅನುಭವಿಸಿದೆ. ಈ ಗ್ರಾಮದಲ್ಲಿ ಇರುವವರೆಲ್ಲರೂ ಬಹುತೇಕ ಮೀನುಗಾರರು. ಹೀಗಾಗಿ ಇವರು ಕಡಲನ್ನೇ ನಂಬಿಕೊಂಡು ಸಮೀಪದಲ್ಲಿಯೇ ವಾಸವಾಗಿದ್ದವರು. ಆದರೆ ವರ್ಷದಿಂದ ವರ್ಷಕ್ಕೆ ಉಂಟಾಗುವ ಕಡಲಕೊರೆತದಿಂದಾಗಿ ಸಾಕಷ್ಟು ಜನರು ತಮ್ಮ ಮನೆಮಠವನ್ನು ಕಳೆದುಕೊಂಡಿದ್ದಾರೆ. ಹೀಗಾಗಿ ಹಾರವಾಡದ ಕಡಲಕೊರೆತಕ್ಕೆ ಶಾಶ್ವತ ಪರಿಹಾರವೇನು ಎನ್ನುವುದು ಈಗ ಒಂದು ರೀತಿಯ ಯಕ್ಷಪ್ರಶ್ನೆಯಾಗಿದೆ.



ಉಡುಪಿ ಜಿಲ್ಲೆಯ ಬೈಂದೂರು ತಾಲೂಕು ವ್ಯಾಪ್ತಿಯ ಕಡಲ ತೀರಗಳಲ್ಲಿ ಚಿರೆಕಲ್ಲಿನಲ್ಲಿ ನಿರ್ಮಿಸಲಾದ ತಡೆಗೋಡೆಯಂತೆ ಇಲ್ಲಿಯೂ ಕೂಡ ನಿರ್ಮಿಸಿದರೆ ಇದಕ್ಕೊಂದು ಶಾಶ್ವತ ಪರಿಹಾರ ಸಾಧ್ಯವಿದೆ ಎನ್ನುವುದು ಸ್ಥಳೀಯ ಮೀನುಗಾರರು ತಮ್ಮ ಅಭಿಪ್ರಾಯ ವ್ಯಕ್ತಪಡಿಸುತ್ತಿದ್ದಾರೆ. ಪ್ರತಿವರ್ಷ ಒಂದೆರಡು ಮನೆ ತೆಂಗಿನಮರ ಸೇರಿದಂತೆ ಸಾಕಷ್ಟು ಆಸ್ತಿಪಾಸ್ತಿಗಳು ಹಾನಿಗೊಳಗಾಗಿವೆ. ಆದರೆ ತಾತ್ಕಾಲಿಕವಾಗಿ ತಡೆಗೋಡೆ ನಿರ್ಮಿಸಿದರು ಕೂಡ ಮಳೆಗಾಲದಲ್ಲಿ ಕಡಲಬ್ಬರದಿಂದಾಗಿ ಕಲ್ಲುಗಳನ್ನು ಕೂಡ ಕೊಚ್ಚಿಕೊಂಡು ಹೋಗುತ್ತಿದೆ.

ಹತ್ತಾರು ಕುಟುಂಬಗಳು ಈಗಾಗಲೇ ಸ್ಥಳಾಂತರಗೊಂಡಿದೆ. ಕೆಲವರು ಬೇರೆ ಕಡೆ ಜಾಗ ಖರೀದಿಸಿ ಮನೆ ನಿರ್ಮಿಸಿದ್ದಾರೆ. ಆದರೆ ಕೆಲವು ಸಾಮಾನ್ಯ ಮೀನುಗಾರರು ಜಾಗ ಖರೀದಿಸಲಾಗದೆ, ಹೊಸ ಮನೆ ನಿರ್ಮಿಸಲಾಗದೆ ವ್ಯಥೆ ಪಡುವಂತಾಗಿದೆ. ಹೀಗಾಗಿ ಮೀನುಗಾರಿಕೆಯ ದೃಷ್ಟಿಯಿಂದಲೇ ಕಡಲಕೊರೆತಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳ ಬೇಕಾಗಿದೆ. ಮಳೆ ಇಲ್ಲದಿದ್ದರೂ ಕೂಡ ಗಾಳಿ ಜೋರಾದಾಗ ಅಲೆಗಳ ಅಬ್ಬರ ದಡಕ್ಕೆ ಬಂದು ಅಪ್ಪಳಿಸುತ್ತದೆ. ಇದರಿಂದಾಗಿ ಕಲ್ಲುಗಳ ಜತೆಗೆ ಉಸುಕಿನ ದಿಬ್ಬವನ್ನು ಕೂಡ ಬಲಿಪಡೆಯುತ್ತದೆ. ಈ ವರ್ಷವೂ ಕೂಡ ಹಾರವಾಡದ ಪರಿಸ್ಥಿತಿ ತುಂಬ ಚಿಂತಾಜನಕವಾಗಿದೆ. ಹತ್ತಾರು ತೆಂಗಿನಮರಗಳು, ಶೌಚಾಲಯ ಸಮುದ್ರ ಪಾಲಾಗಿದೆ. ಹಾಗೇ ಸಾಕಷ್ಟು ಮನೆಗಳ ಮೇಲ್ಛಾವಣಿ ಕೂಡ ಹಾರಿಹೋಗಿದೆ. ಅಷ್ಟರಮಟ್ಟಿಗೆ ಗಾಳಿ ವೇಗವಾಗಿ ಬೀಸುತ್ತದೆ. ಇತ್ತೀಚಿಗೆ ಆಗಮಿಸಿದ ಜಿಲ್ಲಾ ಉಸ್ತುವಾರಿ ಸಚಿವ ಯು.ಟಿ.ಖಾದರ ಅವರಿಗೆ ಸ್ಥಳೀಯರು ಮನವಿಯನ್ನು ನೀಡಿ ಶಾಶ್ವತ ಪರಿಹಾರ ಕಲ್ಪಿಸುವಂತೆ ವಿನಂತಿಸಿಕೊಂಡಿದ್ದಾರೆ. ಇವರ ಮನವಿಗೆ ಸಕರಾತ್ಮಕವಾಗಿ ಸಚಿವರು ಪ್ರತಿಕ್ರಿಯಿಸಿದ್ದಾರೆ.

**ಹಾರವಾಡದ ಜನರು ಹಲವು ವರ್ಷಗಳಿಂದ ಪ್ರತಿ ಮಳೆಗಾಲದಲ್ಲಿ ಸಾಕಷ್ಟು ಸಮಸ್ಯೆಯನ್ನು ಅನುಭವಿಸುತ್ತಲೇ ಬರುತ್ತಿದ್ದಾರೆ. ಆದರೆ ಶಾಶ್ವತ ಪರಿಹಾರ ಇದುವರೆಗೂ ಮರಿಚಿಕೆಯಾಗಿದೆ. ಈ ಹಿನ್ನೆಲೆಯಲ್ಲಿ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಶಾಶ್ವತ ಪರಿಹಾರ ಪ್ರಯತ್ನಿಸಬೇಕಾಗಿದೆ.**
**–ಉಮೇಶ ಹರಿಕಾಂತ, ಮೀನುಗಾರ, ಹಾರವಾಡ**

ಉಡುಪಿ ಮಾದರಿಯಲ್ಲಿ ತಡೆಗೋಡೆ ನಿರ್ಮಿಸಿದರೆ ಇಲ್ಲಿಯ ಸಮಸ್ಯೆ ಕಡಿಮೆಯಾಗುವ ಸಾಧ್ಯತೆಯಿದೆ. ಈ ನಿಟ್ಟಿನಲ್ಲಿ ಜಿಲ್ಲಾಡಳಿತ ಹಾರವಾಡದ ಕಡಲಕೊರೆತದ ಬಗ್ಗೆ ಗಂಭೀರವಾಗಿ ಪರಿಗಣಿಸಿ ಸರಕಾರಕ್ಕೆ ವರದಿ ಸಲ್ಲಿಸಬೇಕಾಗಿದೆ. ಇನ್ನು ಶಾಸಕ ಸತೀಶ ಸೈಲ್, ಜಿಲ್ಲಾ ಉಸ್ತುವಾರಿ ಸಚಿವ ಯು.ಟಿ.ಖಾದರ ಇವರ ಪ್ರಯತ್ನವು ಅತಿಮುಖ್ಯವಾಗಿದೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಚಿಂತಿಸಬೇಕಾಗಿದೆ.

# ಇರಾನ್ ಜತೆ ಯುದ್ಧ ವಿರಾಮ ಅಂತ್ಯ: ಟ್ರಂಪ್ ಘೋಷಣೆ

## ಪಶ್ಚಿಮ ಏಷ್ಯಾದಲ್ಲಿ ಮತ್ತೆ ಯುದ್ಧದ ಕಾರ್ಮೋಡ, ಉದ್ವಿಗ್ನತೆ

**ವಾಷಿಂಗ್ಟನ್, ಜು.8:** ಇರಾನ್‌ನೊಂದಿಗೆ ಮಾಡಿಕೊಂಡಿದ್ದ ಯುದ್ಧ ವಿರಾಮ ಒಪ್ಪಂದವು "ಅಂತ್ಯಗೊಂಡಿದೆ" ಎಂದು ಅಮೆರಿಕ ಅಧ್ಯಕ್ಷ ಟ್ರಂಪ್ ಘೋಷಿಸಿದ್ದಾರೆ. ಇದರ ಬೆನ್ನಲ್ಲೇ ಪಶ್ಚಿಮ ಏಷ್ಯಾದಲ್ಲಿ ಮತ್ತೆ ಯುದ್ಧದ ಕಾರ್ಮೋಡ ದಟ್ಟವಾಗಿದ್ದು, ಹಾರ್ಮುಜ್ ಜಲಸಂಧಿ ಮುಚ್ಚಿ, ಪುನಃ ತೈಲ ಬಿಕ್ಕಟ್ಟು ಎದುರಾಗುವ ಭೀತಿ ತಲೆದೋರಿದೆ.ಇದರ ಜೊತೆಗೆ ಇರಾನ್ ಮೇಲೆ ಮತ್ತೆ ದಾಳಿ ಆರಂಭಗೊಂಡಿದ್ದು, ಟೆಹರಾನ್ ಕೂಡ ಪ್ರತಿದಾಳಿ ನಡೆಸಿದೆ.

**ಸಮಯ ವ್ಯರ್ಥ..!**

2026ರ ನ್ಯಾಟೋ ಶೃಂಗಸಭೆಯಲ್ಲಿ ಟರ್ಕಿಯ ಅಂಕಾರಾದಲ್ಲಿ ಮಾತನಾಡಿದ ಅವರು, ತೆಹ್ರಾನ್‌ನೊಂದಿಗೆ ನಡೆಸಿದ ಮಾತುಕತೆ "ಸಮಯ ವ್ಯರ್ಥ" ಎಂದು ಹೇಳಿದ್ದಾರೆ.

ಮಂಗಳವಾರ ತಡರಾತ್ರಿ ಅಮೆರಿಕ ಇರಾನ್ ವಿರುದ್ಧ ಹೊಸದಾಗಿ ದಾಳಿ ನಡೆಸಿದ ಬಳಿಕ ಟ್ರಂಪ್ ಈ ಹೇಳಿಕೆ ನೀಡಿದ್ದಾರೆ. ಇದಕ್ಕೆ ಪ್ರತಿಯಾಗಿ ಇರಾನ್ ಬಹ್ರೇನ್, ಕುವೈತ್ ಸೇರಿದಂತೆ ಗಲ್ಫ್ ಪ್ರದೇಶದಲ್ಲಿರುವ ಅಮೆರಿಕದ ಸೇನಾ ನೆಲೆಗಳ ಮೇಲೆ ಹೊಸ ದಾಳಿ ನಡೆಸಿದೆ.

ನ್ಯಾಟೋ ಪ್ರಧಾನ ಕಾರ್ಯದರ್ಶಿ ಜೊತೆ ನಡೆದ ಸುದ್ದಿಗೋಷ್ಠಿಯಲ್ಲಿ, "ಇರಾನ್ ಜೊತೆಗಿನ ಯುದ್ಧ ವಿರಾಮ ಮುಗಿದಿದೆಯೇ, 14 ಅಂಶಗಳ ಒಪ್ಪಂದ ಸತ್ತಂತೆಯೇ" ಎಂಬ ಪತ್ರಕರ್ತರ ಪ್ರಶ್ನೆಗೆ ಟ್ರಂಪ್ ಉತ್ತರಿಸಿದರು.

"ನನ್ನ ದೃಷ್ಟಿಯಲ್ಲಿ ಅದು ಮುಗಿದಿದೆ. ಇನ್ನು ಮುಂದೆ ಇರಾನ್‌ನೊಂದಿಗೆ ವ್ಯವಹರಿಸಲು ನನಗೆ ಆಸಕ್ತಿಯಿಲ್ಲ. ಅವರು ದುಷ್ಟರು, ನಕಾರಾತ್ಮಕ ಮನೋಭಾವದವರು. ಅವರನ್ನು ಮುನ್ನಡೆಸುತ್ತಿರುವವರೂ ಹಿಂಸಾತ್ಮಕ ಮತ್ತು ಕ್ರೂರ ಸ್ವಭಾವದವರು," ಎಂದು ಟ್ರಂಪ್ ದೂಷಿಸಿದರು.

ನಾವು ಇರಾನ್‌ನ ಅಪಾಯಕಾರಿ ಗುರಿಗಳ ಮೇಲೆ ಅತ್ಯಂತ ಪ್ರಬಲ ದಾಳಿ ನಡೆಸಿದ್ದೇವೆ. ಅವರಲ್ಲಿ ಏನೋ ಸಮಸ್ಯೆಯಿದೆ. ನಾವು 'ನಿಮ್ಮ ಅಂತ್ಯಕ್ರಿಯೆಯ ಕೆಲಸಗಳನ್ನು ಮಾಡಿ' ಎಂದು ಹೇಳಿದರೂ, ಅದರ ಬದಲು ಅವರು ಹಡಗುಗಳ ಮೇಲೆ ರಾಕೆಟ್‌ಗಳನ್ನು ಹಾರಿಸಲು ಆರಂಭಿಸಿದರು. ಆದ್ದರಿಂದ ನಾವು ಮಂಗಳವಾರ ರಾತ್ರಿ ಅವರಿಗೆ ತಕ್ಕ ಉತ್ತರ ನೀಡಿದ್ದೇವೆ " ಎಂದು ಟ್ರಂಪ್ ಹೇಳಿದ್ದಾರೆ.



### ಮುಖ್ಯಾಂಶಗಳು

- ಯುದ್ಧ ವಿರಾಮ ಅಂತ್ಯ ; ಗಲ್ಫ್ ಮತ್ತೆ ಉದ್ವಿಗ್ನ...
- ಅಮೆರಿಕದ ಹೊಸ ದಾಳಿಗೆ ಇರಾನ್ ಪ್ರತಿದಾಳಿ..
- ಪಶ್ಚಿಮ ಏಷ್ಯಾದಲ್ಲಿ ಮತ್ತೆ ಯುದ್ಧದ ಕಾರ್ಮೋಡ ;
- ಟ್ರಂಪ್ ಘೋಷಣೆಯಿಂದ ಹೆಚ್ಚಿದ ಆತಂಕ..
- ಇರಾನ್ ದಾಳಿಗೆ ಕತಾರ್ ಖಂಡನೆ..
- ಇರಾನ್ ವಿರುದ್ಧ ಅಮೆರಿಕದ ಭಾರೀ ದಾಳಿ; 'ಒಪ್ಪಂದ ಸತ್ತಂತೆಯೇ' ಎಂದ ಟ್ರಂಪ್..
- ಕಚ್ಚಾತೈಲ ಬೆಲೆ 5% ಏರಿಕೆ..

### ಕಚ್ಚಾತೈಲ ಬೆಲೆ ದಿಢೀರ್ ಏರಿಕೆ

ಅಮೆರಿಕ ಅಧ್ಯಕ್ಷ ಟ್ರಂಪ್ ಹೇಳಿಕೆ ಹೊರಬಿದ್ದ ಬೆನ್ನಲ್ಲೇ ಜಾಗತಿಕ ಕಚ್ಚಾತೈಲ ಮಾರುಕಟ್ಟೆಯಲ್ಲಿ ಭಾರಿ ಏರಿಕೆ ದಾಖಲಾಗಿದೆ. ಪಶ್ಚಿಮ ಏಷ್ಯಾದಲ್ಲಿ ಮತ್ತೆ ಉದ್ವಿಗ್ನತೆ ಹೆಚ್ಚುವ ಸಾಧ್ಯತೆಯ ಹಿನ್ನೆಲೆಯಲ್ಲಿ ತೈಲ ಪೂರೈಕೆ ವ್ಯತ್ಯಯವಾಗುವ ಆತಂಕ ಮೂಡಿದ್ದು, ಬುಧವಾರ ಕಚ್ಚಾತೈಲ ಬೆಲೆ ಶೇ.5ಕ್ಕೂ ಹೆಚ್ಚು ಏರಿಕೆಯಾಗಿದೆ.

ಬ್ರೆಂಟ್ ಕಚ್ಚಾತೈಲ ಭವಿಷ್ಯದ ವಹಿವಾಟಿನ ಬೆಲೆ 3.82 ಡಾಲರ್ (ಶೇ.5.15) ಏರಿಕೆಯಾಗಿ ಪ್ರತಿ ಬ್ಯಾರೆಲ್‌ಗೆ 77.98 ಡಾಲರ್ ತಲುಪಿದೆ. ಇದೇ ವೇಳೆ, ಅಮೆರಿಕದ ವೆಸ್ಟ್ ಟೆಕ್ಸಾಸ್ ಇಂಟರ್‌ಮೀಡಿಯೇಟ್ ಕಚ್ಚಾತೈಲದ ಬೆಲೆ 3.70 ಡಾಲರ್ (ಶೇ.5.25) ಏರಿಕೆಯಾಗಿ ಪ್ರತಿ ಬ್ಯಾರಲ್‌ಗೆ 74.14 ಡಾಲರ್ ದಾಖಲಾಗಿದೆ. ಜೂನ್ 23ರ ಬಳಿಕ ಎರಡೂ ಮಾನದಂಡಗಳು ಇದೇ ಮೊದಲ ಬಾರಿಗೆ ಗರಿಷ್ಠ ಮಟ್ಟ ತಲುಪಿವೆ.

ಮಂಗಳವಾರವೂ ಕಚ್ಚಾತೈಲ ಬೆಲೆಯಲ್ಲಿ ಶೇ.3ರಷ್ಟು ಏರಿಕೆಯಾಗಿತ್ತು. ಇರಾನ್‌ನ ಕಚ್ಚಾತೈಲ ಮಾರಾಟಕ್ಕೆ ಅವಕಾಶ ನೀಡಿದ್ದ ಸಾಮಾನ್ಯ ಪರವಾನಗಿಯನ್ನು ಅಮೆರಿಕ ಹಿಂಪಡೆದ ಬೆನ್ನಲ್ಲೇ ಈ ಏರಿಕೆ ಕಂಡುಬಂದಿತ್ತು.

ಟ್ರಂಪ್ ಅವರ ಇತ್ತೀಚಿನ ಹೇಳಿಕೆ ಮತ್ತು ಅಮೆರಿಕದ ಕ್ರಮಗಳಿಂದ ಪಶ್ಚಿಮ ಏಷ್ಯಾದಲ್ಲಿ ಮತ್ತೆ ಸಂಘರ್ಷ ತೀವ್ರಗೊಳ್ಳುವ ಸಾಧ್ಯತೆ ಹೆಚ್ಚಿದ್ದು, ಜಾಗತಿಕ ತೈಲ ಪೂರೈಕೆ ಮೇಲೆ ಅದರ ಪರಿಣಾಮ ಬೀಳುವ ಆತಂಕದಿಂದ ಮಾರುಕಟ್ಟೆಯಲ್ಲಿ ಕಚ್ಚಾತೈಲ ಬೆಲೆಗಳು ಮತ್ತಷ್ಟು ಏರಿಕೆ ಕಂಡಿವೆ.

**ಅಮೆರಿಕ–ಇರಾನ್ ಸಂಘರ್ಷ ಮತ್ತೆ ಆರಂಭವೇ?**

ಇರಾನ್ ಸರ್ಕಾರ ಮತ್ತು ಐಆರ್‌ಜಿಸಿಯ ಅಧಿಕೃತ ಪ್ರತಿಕ್ರಿಯೆ ಇನ್ನೂ ಬಾಕಿಯಿರುವಾಗಲೇ, ಅಮೆರಿಕ ಹೊಸ ದಾಳಿಗಳನ್ನು ನಡೆಸಿದ ಹಿನ್ನೆಲೆಯಲ್ಲಿ ಎರಡೂ ದೇಶಗಳ ನಡುವಿನ ಸಂಘರ್ಷ ಮತ್ತೆ ತೀವ್ರಗೊಂಡಿದೆ.

ಅಮೆರಿಕದ ಸೆಂಟ್ರಲ್ ಕಮಾಂಡ್ (ಸೆಂಟಕಾಂ) ಪ್ರಕಾರ, ಇರಾನ್ ವಿರುದ್ಧ ಮತ್ತೊಮ್ಮೆ "ಆಕ್ರಮಣಕಾರಿ ದಾಳಿ" ನಡೆಸಲಾಗಿದೆ.

ಈ ದಾಳಿಯಲ್ಲಿ ಇರಾನ್‌ನ ವಾಯು ರಕ್ಷಣಾ ವ್ಯವಸ್ಥೆ, ಕಮಾಂಡ್ ಮತ್ತು ನಿಯಂತ್ರಣ ಕೇಂದ್ರ, ಕರಾವಳಿ ರಾಡಾರ್ ತಾಣ, ಹಡಗು ವಿರೋಧಿ ಕ್ಷಿಪಣಿ ಸಾಮರ್ಥ್ಯ ಹಾಗೂ ಜಲಸಂಧಿಯ ಸಮೀಪದಲ್ಲಿದ್ದ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ (ಐಆರ್ ಜಿಸಿ)ಗೆ ಸೇರಿದ 60ಕ್ಕೂ ಹೆಚ್ಚು ಸಣ್ಣ ದೋಣಿಗಳನ್ನು ಗುರಿಯಾಗಿಸಲಾಗಿದೆ. ಅಂತರರಾಷ್ಟ್ರೀಯ ವ್ಯಾಪಾರ ಮಾರ್ಗದಲ್ಲಿ ಸಂಚರಿಸುವ ಹಡಗುಗಳ ಮೇಲೆ ದಾಳಿ ನಡೆಸುವ ಇರಾನ್‌ನ ಸಾಮರ್ಥ್ಯವನ್ನು ಕುಗ್ಗಿಸುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಸೆಂಟಕಾಂ ತಿಳಿಸಿದೆ.

ಅಮೆರಿಕದ ಪ್ರಕಾರ, ಮಾರ್ಶಲ್ ದ್ವೀಪಗಳ ಧ್ವಜ ಹೊಂದಿದ್ದ ಅಲ್ ರೆಕಾಯ್ಯತ್ , ಸೌದಿ ಅರೇಬಿಯಾದ ವೆಡ್ಯಾನ್ ಹಾಗೂ ಲೈಬೀರಿಯಾದ ಸೈಪ್ರಸ್ ಪ್ರಾಸ್ಪೆರಿಟಿ ಎಂಬ ಮೂರು ವಾಣಿಜ್ಯ ಹಡಗುಗಳನ್ನು ಇರಾನ್ ಗುರಿಯಾಗಿಸಿಕೊಂಡಿದ್ದ ಹಿನ್ನೆಲೆಯಲ್ಲಿ ಪ್ರತೀಕಾರವಾಗಿ ಈ ದಾಳಿ ನಡೆಸಲಾಗಿದೆ.



**ಖಮೇನಿ ಅಂತ್ಯಕ್ರಿಯೆ ಇಂದು: ಇರಾನ್ ಮೇಲೆ ಪ್ರಬಲ ದಾಳಿ– ಟ್ರಂಪ್ ಮತ್ತೆ ಬೆದರಿಕೆ**

ವಾಷಿಂಗ್ಟನ್: ಇರಾನ್‌ನ ಪರಮೋಚ್ಚ ನಾಯಕ ಆಯತ್ ಉಲ್ಲಾ ಅಲಿ ಖಮೇನಿ ಅಂತ್ಯಕ್ರಿಯೆ ವಿಧಿಗಳು ಗುರುವಾರ ಪೂರ್ಣಗೊಳ್ಳಲಿದ್ದು, ಅದಕ್ಕೆ ಮೊದಲೇ ಇರಾನ್ ಮೇಲೆ ಮಾರಕ ದಾಳಿ ನಡೆಸುವುದಾಗಿ ಅಮೆರಿಕ ಅಧ್ಯಕ್ಷ ಟ್ರಂಪ್ ಮತ್ತೆ ಬೆದರಿಕೆ ಹಾಕಿದ್ದಾರೆ. ನ್ಯಾಟೊ ಸಭೆಯಲ್ಲಿ ಪಾಲ್ಗೊಂಡ ವೇಳೆ ಈ ಬೆದರಿಕೆ ಹಾಕಿದ ಟ್ರಂಪ್, ಟೆಹರಾನ್‌ಗೆ ಸಣ್ಣ ಎಚ್ಚರಿಕೆ ಕೊಡುತ್ತಿದ್ದೇನೆ. ಇರಾನಿಯನ್ನರ ಮೇಲೆ ಪ್ರಬಲ ದಾಳಿ ಕೈಗೊಳ್ಳುತ್ತಿದ್ದೇವೆ ಎಂದು ಸುಳಿವು ನೀಡಿದರು...



ಇಂಡೋನೇಷ್ಯಾ ಪ್ರವಾಸ ಮುಗಿಸಿ ಆಸ್ಟ್ರೇಲಿಯಾದತ್ತ ಪ್ರಯಾಣ ಬೆಳೆಸಿದ ಪ್ರಧಾನಿ ನರೇಂದ್ರ ಮೋದಿ ಅವರನ್ನು ಜಕಾರ್ತಾದಲ್ಲಿ ಅಧ್ಯಕ್ಷ ಪ್ರಬಾವೊ ಸುಬಿಯಾಂತೊ ಬುಧವಾರ ಆತ್ಮೀಯವಾಗಿ ಬೀಳ್ಕೊಟ್ಟರು.

## ಟ್ರಂಪ್ ವ್ಯಾಪಾರ ಬೆದರಿಕೆ ಆರೋಪ: ಸ್ಪೇನ್ ತಿರಸ್ಕಾರ

**ಅಂಕಾರ, ಜು.8:** ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ದೇಶದೊಂದಿಗಿನ ವ್ಯಾಪಾರವನ್ನು ನಿಲ್ಲಿಸುವ ಇತ್ತೀಚಿನ ಬೆದರಿಕೆಯನ್ನು ಸ್ಪೇನ್ ತಿರಸ್ಕರಿಸಿದೆ.

ವಾಷಿಂಗ್ಟನ್ ನೊಂದಿಗಿನ ತನ್ನ ಆರ್ಥಿಕ, ಸಾಮಾಜಿಕ ಮತ್ತು ಸಾಂಸ್ಕೃತಿಕ ಸಂಬಂಧವು ಪ್ರಬಲವಾಗಿದೆ ಮತ್ತು ಪರಸ್ಪರ ಪ್ರಯೋಜನಕಾರಿಯಾಗಿದೆ ಎಂದು ಹೇಳಿದೆ. ಅಂಕಾರಾದಲ್ಲಿ ನಡೆದ ನ್ಯಾಟೋ ಶೃಂಗಸಭೆಯ ಸಂದರ್ಭದಲ್ಲಿ ಮಾತನಾಡಿದ ಟ್ರಂಪ್, ಸ್ಪೇನ್ ತನ್ನ ರಕ್ಷಣಾ ವೆಚ್ಚದ ಬದ್ಧತೆಗಳ ಬಗ್ಗೆ ಟೀಕಿಸಿದ್ದರು ಮತ್ತು ಎರಡೂ ದೇಶಗಳ ನಡುವಿನ ವ್ಯಾಪಾರವನ್ನು ಕೊನೆಗೊಳಿಸ ಬೇಕೆಂದು ಕರೆ ನೀಡಿದ್ದರು, ಮ್ಯಾಡ್ರಿಡ್ ಅನ್ನು ವಿಶ್ವಾಸಾರ್ಹವಲ್ಲದ ಮಿತ್ರ ಎಂದು ಬಣ್ಣಿಸಿದರು. ಟ್ರಂಪ್ ಸ್ಪೇನ್ ಅನ್ನು ನಿರ್ದಿಷ್ಟ ಟೀಕೆಗೆ ಪ್ರತ್ಯೇಕಿಸಿದರು, ಅದನ್ನು "ನ್ಯಾಟೋದಲ್ಲಿ ಭಯಾನಕ ಪಾಲುದಾರ" ಎಂದು ಕರೆದರು. ಸ್ಪೇನ್ ವ್ಯರ್ಥ ಕಾರಣ. ನಾವು ಇನ್ನು ಮುಂದೆ ಸ್ಪೇನ್ ಜೊತೆ ಯಾವುದೇ ವ್ಯಾಪಾರ ವ್ಯವಹಾರವನ್ನು ಮಾಡಲು ಬಯಸುವುದಿಲ್ಲ" ಎಂದು ಅವರು ಹೇಳಿದರು, ತಮ್ಮ ಖಜಾನೆ ಕಾರ್ಯದರ್ಶಿ ಸ್ಕಾಟ್ ಬೆಸೆಂಟ್ ಅವರನ್ನು, ಅದನ್ನು ಕಡಿತಗೊಳಿಸು ವಂತೆ" ಕೇಳಿದರು.



ಸ್ಪ್ಯಾನಿಷ್ ಸುದ್ದಿ ಸಂಸ್ಥೆ ಪ್ರಕಾರ, ಸ್ಪೇನ್ ಅಮೆರಿಕದೊಂದಿಗೆ ಭವ್ಯವಾದ ಸಾಮಾಜಿಕ, ಸಾಂಸ್ಕೃತಿಕ ಮತ್ತು ಆರ್ಥಿಕ ಸಂಬಂಧವನ್ನು ನಿರ್ವಹಿಸುತ್ತಿದೆ ಎಂದು ಹೆಸರಿಸದ ಸರ್ಕಾರಿ ಮೂಲಗಳು ತಿಳಿಸಿವೆ. ಎರಡೂ ದೇಶಗಳ ನಡುವಿನ ಆರ್ಥಿಕ ಸಂಬಂಧಗಳು ಹೆಚ್ಚಾಗಿ ಖಾಸಗಿ ವ್ಯವಹಾರಗಳಿಂದ ನಡೆಸಲ್ಪಡುತ್ತವೆ ಮತ್ತು ಎರಡೂ ಕಡೆಯವರಿಗೆ ಪ್ರಯೋಜನವನ್ನು ನೀಡುತ್ತವೆ ಎಂದು ಮ್ಯಾಡ್ರಿಡ್ ಗಮನಿಸಿದೆ.

ಅಮೆರಿಕ–ಸ್ಪೇನ್ ವ್ಯಾಪಾರ ಸಂಬಂಧವು ಎರಡೂ ಆರ್ಥಿಕತೆಗಳಿಗೆ ಸಕಾರಾತ್ಮಕವಾಗಿ ಕೊಡುಗೆ ನೀಡುತ್ತದೆ ಎಂದು ಸ್ಪ್ಯಾನಿಷ್ ಅಧಿಕಾರಿಗಳು ಹೈಲೈಟ್ ಮಾಡಿದ್ದಾರೆ. NATO ರಕ್ಷಣಾ ವೆಚ್ಚದ ಕುರಿತು US ಮತ್ತು ಸ್ಪೇನ್ ನಡುವಿನ ಉದ್ವಿಗ್ನತೆ ಹೆಚ್ಚಾಯಿತು. 2035ರ ವೇಳೆಗೆ ರಕ್ಷಣಾ ವೆಚ್ಚವನ್ನು GDPಯ ಶೇ.5ಕ್ಕೆ ಹೆಚ್ಚಿಸುವ ಗುರಿಯನ್ನು ತಲುಪಲು ಬದ್ಧರಾಗದ ಏಕೈಕ ಮೈತ್ರಿಕೂಟದ ಸದಸ್ಯ ಸ್ಪೇನ್, ಇತ್ತೀಚಿನ ವರ್ಷಗಳಲ್ಲಿ ಇದು ವೆಚ್ಚವನ್ನು ಹೆಚ್ಚಿಸಿದೆ. ರಾಜಕೀಯ ಭಿನ್ನಾಭಿಪ್ರಾಯದ ಹೊರತಾಗಿಯೂ, ಸ್ಪೇನ್ ಮತ್ತು ಅಮೆರಿಕ ನಿಕಟ ಆರ್ಥಿಕ ಮತ್ತು ರಕ್ಷಣಾ ಸಂಪರ್ಕ ಕಾಯ್ದು ಕೊಳ್ಳುತ್ತವೆ, ಆಲಿವ್ ಎಣ್ಣೆ, ಆಟೋಮೋಟಿವ್ ಘಟಕ, ಉಕ್ಕು ಮತ್ತು ರಾಸಾಯನಿಕಗಳು ಸೇರಿದಂತೆ ವ್ಯಾಪಾರ ವಲಯಗಳನ್ನು ಒಳಗೊಂಡಿವೆ.

## ಪೇಟ್ರಿಯಾಟ್ ಕ್ಷಿಪಣಿ ವ್ಯವಸೆ: ಉಕ್ರೇನ್‌ಗೆ ಟ್ರಂಪ್ ಅನುಮತಿ

**ಅಂಕಾರ, ಜು.8:** ಕೈವ್‌ನ ಸ್ವಂತ ಶಸ್ತ್ರಾಗಾರವು ಖಾಲಿಯಾಗುತ್ತಿರುವಾಗ ರಷ್ಯಾದ ಕ್ಷಿಪಣಿ ದಾಳಿಗಳ ನಿರಂತರ ದಾಳಿಯ ನಡುವೆಯೂ, ಉಕ್ರೇನ್ ತನ್ನ MIM–104 ಪೇಟ್ರಿಯಾಟ್ ವ್ಯವಸ್ಥೆಗಳನ್ನು ತಯಾರಿಸಲು ಅನುಮತಿ ನೀಡಲಾಗುವುದು ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಬುಧವಾರ ಘೋಷಿಸಿದರು. ಟರ್ಕಿಯಲ್ಲಿ ನಡೆದ ನ್ಯಾಟೋ ಶೃಂಗಸಭೆಯ ಹೊರತಾಗಿ ಟ್ರಂಪ್ ಉಕ್ರೇನಿಯನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರೊಂದಿಗಿನ ಭೇಟಿಯ ಸಂದರ್ಭದಲ್ಲಿ ಈ ಘೋಷಣೆ ಬಂದಿದೆ. ನಾವು ಅವರಿಗೆ ಪೇಟ್ರಿಯಾಟ್‌ಗಳನ್ನು ತಯಾರಿಸುವ ಹಕ್ಕನ್ನು ನೀಡುತ್ತೇವೆ. ಅದನ್ನು ಹೇಗೆ ಮಾಡಬೇಕೆಂದು ನಾವು ಅವರಿಗೆ ತೋರಿಸುತ್ತೇವೆ" ಎಂದು ಟ್ರಂಪ್ ಹೇಳಿದರು.

ಅವರು ಅವುಗಳನ್ನು ಬಹಳ ಬೇಗನೆ ಉತ್ಪಾದಿಸಬಹುದು ಎಂದು ನಾನು ಭಾವಿಸುತ್ತೇನೆ." ಹೆಚ್ಚುವರಿ ಪೇಟ್ರಿಯಾಟ್ ವ್ಯವಸ್ಥೆಗಳನ್ನು ಒದಗಿಸುವಂತೆ ತನ್ನ ಪಾಶ್ಚಿಮಾತ್ಯ ಪಾಲುದಾರರನ್ನು ಪದೇ ಪದೇ ಒತ್ತಾಯಿಸುತ್ತಿರುವ ಉಕ್ರೆನ್‌ಗೆ ಈ ನಿರ್ಧಾರ ಮಹತ್ವದ್ದಾಗಿದೆ ಮತ್ತು ಇತ್ತೀಚೆಗೆ, ತನ್ನದೇ ಆದ ಇಂಟರ್‌ಸೆಪ್ಟರ್‌ಗಳ ದಾಸ್ತಾನು ಅತ್ಯಂತ ತೆಳುವಾಗುತ್ತಿದೆ, ದೇಶೀಯ ಉತ್ಪಾದನೆಗೆ ಅವಕಾಶ ನೀಡುವ ಉತ್ಪಾದನಾ ಪರವಾನಗಿ ಅತ್ಯಂತ ತೆಳುವಾಗುತ್ತಿದೆ. ಪೇಟ್ರಿಯಾಟ್ ಬ್ಯಾಟರಿಗಳು ವಿಶ್ವದ ಅತ್ಯಂತ ಬೇಡಿಕೆಯ ವಾಯು ರಕ್ಷಣಾ ವ್ಯವಸ್ಥೆಗಳಲ್ಲಿ ಉಳಿದಿವೆ, ಇದು ಕೈವ್ನ ವಾಯು ರಕ್ಷಣೆಯ ಬೆನ್ನೆಲುಬನ್ನು ರೂಪಿಸುತ್ತದೆ.

ವಿಶ್ವದ ಅತ್ಯಂತ ಮುಂದುವರಿದ ಬ್ಯಾಲಿಸ್ಟಿಕ್ ಕ್ಷಿಪಣಿಗಳನ್ನು ಪತ್ತೆಹಚ್ಚುವ ಸಾಮರ್ಥ್ಯವನ್ನು ಹೊಂದಿದ್ದರೂ, ಪೇಟ್ರಿಯಾಟ್‌ಗಳು ಸಹ ತುಂಬಾ ದುಬಾರಿಯಾಗಿದೆ, ತಯಾರಿಸಲು ಸಮಯ ತೆಗೆದುಕೊಳ್ಳುತ್ತದೆ.

ಇತ್ತೀಚಿನ ತಿಂಗಳುಗಳಲ್ಲಿ ರಷ್ಯಾ ಪ್ರಮುಖ ನಗರಗಳ ಮೇಲೆ ಕ್ಷಿಪಣಿ ದಾಳಿಗಳನ್ನು ಹೆಚ್ಚಿಸಿರುವುದರಿಂದ ಹೆಚ್ಚುವರಿ ಪ್ರತಿಬಂಧಕಗಳಿಗೆ ಉಕ್ರೇನ್ ಬೇಡಿಕೆ ತೀವ್ರಗೊಂಡಿದೆ, ಇದು ಕೈವ್ನ ವಾಯು ರಕ್ಷಣಾ ಜಾಲದಲ್ಲಿನ ಕೊರತೆಯನ್ನು ಬಹಿರಂಗಪಡಿಸಿದೆ. ಹಿಂದಿನ ಸಭೆಗಳಿಗೆ ಹೋಲಿಸಿದರೆ ಟ್ರಂಪ್ ಮತ್ತು ಝೆಲೆನ್ಸ್ಕಿ ನಡುವಿನ ಸಂಬಂಧಗಳಲ್ಲಿ ಈ ಸಭೆಯು ಗಮನಾರ್ಹ ಸುಧಾರಣೆಯನ್ನು ಗುರುತಿಸಿದೆ, ಅವುಗಳಲ್ಲಿ ಕೆಲವು ಸಾರ್ವಜನಿಕ ಭಿನ್ನಾಭಿಪ್ರಾಯಗಳು ಮತ್ತು ಗಡಿರೇಖೆಯ ಹಗೆತನದಿಂದ ಗುರುತಿಸಲ್ಪಟ್ಟವು.

## ಖಾರ್ಗ್ ದ್ವೀಪದ ಮೇಲೆ ಅಮೆರಿಕ ದಾಳಿ: ಟ್ರಂಪ್ ಮುನ್ಸೂಚನೆ

**ಅಂಕಾರ, ಜು.8:** ಹಾರ್ಮುಜ್ ಜಲಸಂಧಿಯಲ್ಲಿ ಹಡಗು ಸಾಗಣೆಗೆ ಸಂಬಂಧಿಸಿದ ಉತ್ತುಂಗದ ನಂತರ ಅಮೆರಿಕದ ಪಡೆಗಳು ಇರಾನ್ ಸ್ಥಾನಗಳನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿದ ನಂತರ ಅಮೆರಿಕವು ಇರಾನ್ ವಿರುದ್ಧ ಮತ್ತಷ್ಟು ದಾಳಿಗಳನ್ನು "ಬಹುಶಃ" ನಡೆಸಲಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಬುಧವಾರ ಎಚ್ಚರಿಸಿದ್ದಾರೆ. ಅಂಕಾರಾದಲ್ಲಿ ನಡೆದ ನ್ಯಾಟೋ ಶೃಂಗಸಭೆಯ ಹೊರತಾಗಿ ಉಕ್ರೇನಿಯನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರೊಂದಿಗೆ ಮಾತನಾಡಿದ ಟ್ರಂಪ್, ಯುಎಸ್ ಮಿಲಿಟರಿ ಈಗಾಗಲೇ ಟೆಹ್ರಾನ್ ವಿರುದ್ಧ ಭಾರೀ ಹೊಡೆತ ನೀಡಿದೆ ಮತ್ತು ಹೆಚ್ಚಿನ ಕ್ರಮ ಕೈಗೊಳ್ಳಬಹುದು ಎಂದು ಸೂಚಿಸಿದರು. "ನಾವು ನಿನ್ನೆ ರಾತ್ರಿ ಅವರನ್ನು ತುಂಬಾ ಬಲವಾಗಿ ಹೊಡೆದಿದ್ದೇವೆ, ತುಂಬಾ, ತುಂಬಾ. ಬಹುಶಃ ಇಂದು ರಾತ್ರಿ ಅವರನ್ನು ಮತ್ತೆ ಬಲವಾಗಿ ಹೊಡೆದಿರಬಹುದು. ನಾನು ಅವರಿಗೆ ಸ್ವಲ್ಪ ಎಚ್ಚರಿಕೆ ನೀಡುತ್ತೇನೆ. ನಾವು ಇಂದು ರಾತ್ರಿ ಅವರನ್ನು ಬಲವಾಗಿ ಹೊಡೆಯಲಿದ್ದೇವೆ" ಎಂದು ಟ್ರಂಪ್ ವರದಿಗಾರರಿಗೆ ತಿಳಿಸಿದರು. ಟ್ರಂಪ್ ಆಪಾದಿತ ದಾಳಿಗಳ ವಿವರಗಳನ್ನು ನೀಡಲಿಲ್ಲ ಆದರೆ ಯುನೈಟೆಡ್ ಸ್ಟೇಟ್ಸ್ ಇರಾನಿನ ನೌಕಾ ನೆಲೆಗಳ ವಿರುದ್ಧ ಕ್ರಮ ಕೈಗೊಂಡಿದೆ ಮತ್ತು ಪರಮಾಣು ಸಾಮರ್ಥ್ಯಗಳನ್ನು ಅನುಸರಿಸುವುದರ ವಿರುದ್ಧ ಟೆಹ್ರಾನ್ಗೆ ಎಚ್ಚರಿಕೆ ನೀಡಿದೆ ಎಂದು ಹೇಳಿದರು. "ಇರಾನ್ ಪರಮಾಣು ಶಸ್ತ್ರಾಸ್ತ್ರಗಳನ್ನು ಹೊಂದಲು ಸಾಧ್ಯವಿಲ್ಲ" ಎಂದು ಟ್ರಂಪ್ ಪುನರುಚ್ಚರಿಸಿದರು, ಟೆಹ್ರಾನ್ ಅಂತಹ ಶಸ್ತ್ರಾಸ್ತ್ರಗಳನ್ನು ಪಡೆಯುವುದನ್ನು ವಾಷಿಂಗ್ಟನ್ ತಡೆಯುವುದನ್ನು ಮುಂದುವರಿಸುತ್ತದೆ ಎಂದು ಹೇಳಿದರು. ಸಂಘರ್ಷವನ್ನು ಕೊನೆಗೊಳಿಸುವ ಉದ್ದೇಶದಿಂದ ಕಳೆದ ತಿಂಗಳು ಇರಾನ್ನೊಂದಿಗೆ ಸಹಿ ಹಾಕಲಾದ ತಿಳುವಳಿಕೆ ಒಪ್ಪಂದ ಇನ್ನು ಮುಂದೆ ಮಾನ್ಯವಾಗಿಲ್ಲ ಎಂದು ಟ್ರಂಪ್ ಹೇಳಿದ್ದರಿಂದ ಅವರು ಇರಾನ್ನೊಂದಿಗೆ ತಾಳ್ಮೆ ಕಳೆದುಕೊಂಡಿದ್ದಾರೆ. ಇದು ನನಗೆ ತುಂಬಾ ಆಸಕ್ತಿದಾಯಕ ಪ್ರಶ್ನೆಯಾಗಿದೆ. ಅದು ಮುಗಿದಿದೆ ಎಂದು ನಾನು ಭಾವಿಸುತ್ತೇನೆ" ಎಂದು ಚೌಕಟ್ಟು ಒಪ್ಪಂದ ಕುಸಿದಿದೆಯೇ ಎಂದು ಕೇಳಿದಾಗ ಟ್ರಂಪ್ ಹೇಳಿದರು. ಇರಾನಿನ ತೈಲ ರಫ್ತಿನ ಗಮನಾರ್ಹ ಭಾಗವನ್ನು ನಿರ್ವಹಿಸುವ ಕಾರ್ಯತಂತ್ರದ ಪ್ರಮುಖ ಸ್ಥಳವಾದ ಇರಾನ್ನ ಖಾರ್ಗ್ ದ್ವೀಪವನ್ನು ಅಮೆರಿಕದ ಪಡೆಗಳು ಹೊಡೆದಿವೆ ಎಂದು ಟ್ರಂಪ್ ಹೇಳಿದರು. "ನಾವು ಒಂದು ತುಂಡನ್ನು ಹೊಡೆದುರುಳಿಸಿದೆ" ಎಂದು ಟ್ರಂಪ್ ಹೇಳಿದರು.

"ಬಹುಶಃ ನಾವು ಖಾರ್ಗ್ ದ್ವೀಪವನ್ನು ವಶಪಡಿಸಿಕೊಳ್ಳುತ್ತೇವೆ" ಎಂದು ಅವರು ಅಧಿಕಾರಿಗಳಿಗೆ ತೈಲ ಮೂಲಸೌಕರ್ಯವನ್ನು ಗುರಿಯಾಗಿಸದಂತೆ ಸೂಚಿಸಿದ್ದಾರೆ ಎಂದು ಹೇಳಿದರು.

"ನಾವು ಖಾರ್ಗ್ ದ್ವೀಪವನ್ನು ವಶಪಡಿಸಿಕೊಳ್ಳಬಹುದು" ಎಂದು ಅವರು ಹೇಳಿದರು. ಟ್ರಂಪ್ ಮತ್ತಷ್ಟು ದೊಡ್ಡ ಮಿಲಿಟರಿ ಕಾರ್ಯಾಚರಣೆಯ ಬಗ್ಗೆ ಇರಾನ್ಗೆ ಎಚ್ಚರಿಕೆ ನೀಡಿದರು ಮತ್ತು ಹಿಂದಿನ ರಾತ್ರಿಯ ಕಾರ್ಯಾಚರಣೆಯ ಸಮಯದಲ್ಲಿ ಯುಎಸ್ ಪಡೆಗಳು ಸುಮಾರು 28 ಇರಾನಿನ ದೋಣಿಗಳನ್ನು ನಾಶಪಡಿಸಿವೆ ಎಂದು ಹೇಳಿಕೊಂಡರು. ವಾಷಿಂಗ್ಟನ್ ಹೆಚ್ಚುವರಿ ದಾಳಿಗಳನ್ನು ನಡೆಸುತ್ತದೆಯೇ ಎಂದು ಕೇಳಿದಾಗ, ಟ್ರಂಪ್ ಅವರು ಸಾಮಾನ್ಯವಾಗಿ ಮಿಲಿಟರಿ ಯೋಜನೆಗಳನ್ನು ಬಹಿರಂಗಪಡಿಸುವುದಿಲ್ಲ ಎಂದು ಹೇಳಿದರು ಆದರೆ ಮುಂದಿನ ಕ್ರಮದ ಸಾಧ್ಯತೆ ಇದೆ ಎಂದು ಸೂಚಿಸಿದರು. "ಸಾಮಾನ್ಯವಾಗಿ ನಾನು ನಿಮಗೆ ಹೇಳುವುದಿಲ್ಲ, ನಾನು ನಿಮಗೆ ಹೇಳುವುದಿಲ್ಲ, ಆದರೆ ನಿಮಗೆ ಗೊತ್ತಾ, ಅವರು ಅದರ ಬಗ್ಗೆ ಏನೂ ಮಾಡಲು ಸಾಧ್ಯವಿಲ್ಲ. ಆದ್ದರಿಂದ, ಉತ್ತರ ಬಹುಶಃ," ಅವರು ಹೇಳಿದರು. ಹೆಚ್ಚುತ್ತಿರುವ ಉದ್ವಿಗ್ನತೆಯ ನಡುವೆ ಟೆಹ್ರಾನ್ ಮೇಲೆ ಒತ್ತಡವನ್ನು ಹೆಚ್ಚಿಸುತ್ತಾ, ಯುನೈಟೆಡ್ ಸ್ಟೇಟ್ಸ್ ಇರಾನ್ ಮೇಲೆ ನೌಕಾ ದಿಗ್ಬಂಧನವನ್ನು ಮತ್ತೆ ಹೇರುತ್ತಿದೆ ಎಂದು ಅವರು ಘೋಷಿಸಿದರು.

## ಪ್ರಧಾನಿ ಮೋದಿ ಆಸ್ಟ್ರೇಲಿಯಾ ಭೇಟಿ: ಯುರೇನಿಯಂ ಒಪ್ಪಂದ, ರಕ್ಷಣಾ ಸಹಕಾರ ಪ್ರಮುಖ ಕಾರ್ಯಸೂಚಿ

ಸಿಡ್ನಿ : ಭಾರತದ ಅಣುಶಕ್ತಿ ತಯಾರಿಕಾ ಗುರಿಗಳಿಗೆ ಬೆಂಬಲ ನೀಡುವ ಉದ್ದೇಶದಿಂದ ಯುರೇನಿಯಂನ ವಾಣಿಜ್ಯ ಪೂರೈಕೆಗೆ ಸಂಬಂಧಿಸಿದ ಒಪ್ಪಂದವನ್ನು ಭಾರತ ಮತ್ತು ಆಸ್ಟ್ರೇಲಿಯಾ ಅಂತಿಮಗೊಳಿಸುವ ನಿರೀಕ್ಷೆಯಿದೆ. ಜೊತೆಗೆ, ಸಮುದ್ರ ಭದ್ರತೆ ಮತ್ತು ರಕ್ಷಣಾ ಸಹಕಾರವನ್ನು ಬಲಪಡಿಸುವ ಹೊಸ ಕ್ರಮಗಳನ್ನು ಕೂಡ ಪ್ರಧಾನಿ ನರೇಂದ್ರ ಮೋದಿ ಅವರ ಮೆಲ್ಬೋರ್ನ್ ಭೇಟಿಯ ವೇಳೆ ಘೋಷಿಸುವ ಸಾಧ್ಯತೆಯಿದೆ ಎಂದು ಈ ಬೆಳವಣಿಗೆಗೆ ಪರಿಚಿತರಾದ ಮೂಲಗಳು ತಿಳಿಸಿವೆ.

ಇಂಡೋನೇಷ್ಯಾದಿಂದ ಬುಧವಾರ ಸಂಜೆ ಆಸ್ಟ್ರೇಲಿಯಾಗೆ ಆಗಮಿಸಿದ ಪ್ರಧಾನಿ ಮೋದಿ, ಮೂರು ರಾಷ್ಟ್ರಗಳ ಪ್ರವಾಸದ ಭಾಗವಾಗಿ ನಂತರ ನ್ಯೂಜಿಲೆಂಡ್‌ಗೂ ಭೇಟಿ ನೀಡಲಿದ್ದಾರೆ. ಮೆಲ್ಬೋರ್ನ್‌ಗೆ ತಲುಪಿದ ಬಳಿಕ ಸಾಮಾಜಿಕ ಜಾಲತಾಣದಲ್ಲಿ ಅವರು, ಈ ಭೇಟಿ ಭಾರತ?ಆಸ್ಟ್ರೇಲಿಯಾ ದ್ವಿಪಕ್ಷೀಯ ಸಂಬಂಧಗಳಿಗೆ ಹೊಸ ಚೈತನ್ಯ ನೀಡಲಿದೆ ಎಂದು ಹೇಳಿದ್ದು, ಗುರುವಾರ ಆಸ್ಟ್ರೇಲಿಯಾದ ಪ್ರಧಾನಿ ಅಂಥೋನಿ ಆಲ್ಬನೀಸ್ ಅವರೊಂದಿಗೆ ನಡೆಯುವ ಮಾತುಕತೆಗಾಗಿ ಎದುರು ನೋಡುತ್ತಿರುವುದಾಗಿ ತಿಳಿಸಿದ್ದಾರೆ.

2014ರಲ್ಲಿ ಭಾರತ ಮತ್ತು ಆಸ್ಟ್ರೇಲಿಯಾ ನಡುವೆ ನಡೆದ ನಾಗರಿಕ ಅಣು ಸಹಕಾರ ಒಪ್ಪಂದದ ಮುಂದುವರಿದ ಭಾಗವಾಗಿ, ಯುರೇನಿಯಂನ ವಾಣಿಜ್ಯ ಪೂರೈಕೆಗೆ ಸಂಬಂಧಿಸಿದ ಒಪ್ಪಂದವನ್ನು ಈ ಭೇಟಿಯ ವೇಳೆ ಅಂತಿಮಗೊಳಿಸುವ ನಿರೀಕ್ಷೆಯಿದೆ ಎಂದು ಮೂಲಗಳು ತಿಳಿಸಿವೆ. ಆಸ್ಟ್ರೇಲಿಯಾ ವಿಶ್ವದಲ್ಲೇ ಅತಿದೊಡ್ಡ ಯುರೇನಿಯಂ ಸಂಗ್ರಹ ಹೊಂದಿರುವ ದೇಶವಾಗಿದ್ದು, ಜಾಗತಿಕ ಯುರೇನಿಯಂ ಸಂಗ್ರಹದ ಸುಮಾರು ಮೂರನೇ ಒಂದು ಭಾಗ ಅದರಲ್ಲಿದೆ. ಇದುವರೆಗೆ ಆಸ್ಟ್ರೇಲಿಯಾ ಭಾರತಕ್ಕೆ 2017ರಲ್ಲಿ ಕೇವಲ ಒಂದು ಬಾರಿ ಮಾತ್ರ ಯುರೇನಿಯಂ ರವಾನೆ ಮಾಡಿದೆ.

ಈ ವಾಣಿಜ್ಯ ಒಪ್ಪಂದದ ಕುರಿತು ಉಭಯ ದೇಶಗಳು ಕೆಲವು ಕಾಲದಿಂದ ಮಾತುಕತೆ ನಡೆಸುತ್ತಿದ್ದು, ಭಾರತದ ವಿದೇಶಾಂಗ ಸಚಿವಾಲಯದ ಒಷಿಯಾನಿಯಾ ಮತ್ತು ಇಂಡೋ–ಪೆಸಿಫಿಕ್ ವಿಭಾಗದ ಜಂಟಿ ಕಾರ್ಯದರ್ಶಿ ವಿಶ್ವೇಶ್ ನೇಗಿ ಇತ್ತೀಚಿನ ಮಾಧ್ಯಮ ಸಂವಾದದಲ್ಲಿ, ಈ ವಿಷಯದಲ್ಲಿ "ಗಣನೀಯವಾದ, ಭವಿಷ್ಯನಿರ್ದೇಶಿತ ಚರ್ಚೆಗಳು ನಡೆದಿದ್ದು, ಶೀಘ್ರದಲ್ಲೇ ತಾರ್ಕಿಕ ಅಂತಿಮ ಹಂತ ತಲುಪುವ ನಿರೀಕ್ಷೆಯಿದೆ" ಎಂದು ಹೇಳಿದ್ದಾರೆ.



ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವ ಮನ್ಸುಖ್ ಮಾಂಡವಿಯಾ, ಕೇಂದ್ರ ಜವಳಿ ಸಚಿವ ಗಿರಿರಾಜ್ ಸಿಂಗ್, ಭಾರತೀಯ ಒಲಿಂಪಿಕ್ ಅಸೋಸಿಯೇಷನ್ ಅಧ್ಯಕ್ಷೆ ಪಿ.ಟಿ. ಉಷಾ, ಚೆಫ್ ಡಿ ಮಿಷನ್ ರೋಹಿತ್ ರಾಜ್‌ಪಾಲ್, ಭಾರತಕ್ಕೆ ಬ್ರಿಟಿಷ್ ಹೈಕಮಿಷನರ್ ಲಿಂಡಿ ಕ್ಯಾಮರೂನ್ ಮತ್ತು ಭಾರತೀಯ ಕ್ರೀಡಾಪಟುಗಳು ಮಂಗಳವಾರ ನವದೆಹಲಿಯ ತಾಜ್ ಪ್ಯಾಲೇಸ್‌ನಲ್ಲಿ ನಡೆದ 2026ರ ಕಾಮನ್‌ವೆಲ್ತ್ ಕ್ರೀಡಾಕೂಟಕ್ಕೆ ಮುಂಚಿತವಾಗಿ ಟೀಮ್ ಇಂಡಿಯಾ ಕಿಟ್ ಅನಾವರಣ ಮತ್ತು ಬೀಳ್ಕೊಡುಗೆ ಸಮಾರಂಭದಲ್ಲಿ ಭಾಗವಹಿಸಿದ್ದರು.

## ಯುಎಸ್‌ಎ, ಪೋರ್ಚುಗಲ್ ನಿರ್ಗಮನದ ನಂತರ ಫಿಫಾ ವಿಶ್ವಕಪ್ ಕ್ವಾರ್ಟರ್ ಫೈನಲ್ ಟಿಕೆಟ್ ಬೆಲೆಗಳು ಕುಸಿದಿವೆ

**ನವದೆಹಲಿ, ಜು.8:** ಫಿಫಾ ವಿಶ್ವಕಪ್ 2026 ರ ಕ್ವಾರ್ಟರ್ ಫೈನಲ್ ಟಿಕೆಟ್ ಬೆಲೆಗಳು ತೀವ್ರ ಹೊಡೆತವನ್ನು ಬೀರಿವೆ, ಸಹ–ಆತಿಥೇಯ ಯುಎಸ್‌ಎ ಮತ್ತು ಕ್ರಿಸ್ಟಿಯಾನೊ ರೊನಾಲ್ಡೊ ಅವರ ಪೋರ್ಚುಗಲ್ ಮಾರ್ಕ್ಯೂ ಟೂರ್ನಮೆಂಟ್ನಿಂದ ನಿರ್ಗಮಿಸಿದ ನಂತರ ಬೇಡಿಕೆ ಕುಸಿದಿದೆ. ದ್ವಿತೀಯ ಟಿಕೆಟ್ ಮಾರುಕಟ್ಟೆಯಾದ ಟಿಕ್ಪಿಕ್ ಅನ್ನು ಉಲ್ಲೇಖಿಸಿದ ವರದಿಗಳ ಪ್ರಕಾರ, ಹಲವಾರು ಕ್ವಾರ್ಟರ್–ಫೈನಲ್ ಪಂದ್ಯಗಳ ಮರುಮಾರಾಟ ಬೆಲೆಗಳು ನಾಟಕೀಯವಾಗಿ ಕುಸಿದಿವೆ, ಇಂಗಲ್ವುಡ್ನ ಸೋಫಿ ಕ್ರೀಡಾಂಗಣದಲ್ಲಿ ಸ್ಪೇನ್ ಮತ್ತು ಬೆಲ್ಜಿಯಂ ನಡುವಿನ ಘರ್ಷಣೆಯು ಅತ್ಯಂತ ತೀವ್ರ ಕುಸಿತಕ್ಕೆ ಸಾಕ್ಷಿಯಾಗಿದೆ. ಸೀಟ್ಪಿಕ್ನ ದತ್ತಾಂಶವು ಕಳೆದ ಮೂರು ದಿನಗಳಲ್ಲಿ ಎಲ್ಲಾ ನಾಲ್ಕು ಕ್ವಾರ್ಟರ್–ಫೈನಲ್ಗಳಲ್ಲಿ ಸರಾಸರಿ ಮರುಮಾರಾಟ ಬೆಲೆಗಳು ಶೇಕಡಾ 50 ಕ್ಕಿಂತ ಹೆಚ್ಚು ಕುಸಿದಿವೆ ಎಂದು ತೋರಿಸುತ್ತದೆ. ಕುಸಿತದ ಹಿಂದಿನ ದೊಡ್ಡ ಕಾರಣವೆಂದರೆ ಯುನೈಟೆಡ್ ಸ್ಟೇಟ್ಸ್ ಸ್ಪರ್ಧೆಯಿಂದ ಬೇಗನೆ ನಿರ್ಗಮಿಸಿದೆ. ಬೆಲ್ಜಿಯಂ ಸಹ–ಆತಿಥೇಯರ ಅಭಿಯಾನವನ್ನು 16 ರ ಸುತ್ತಿನಲ್ಲಿ 4–1 ಗೆಲುವಿನೊಂದಿಗೆ ಕೊನೆಗೊಳಿಸಿತು, ಸ್ಥಳೀಯ ಅಭಿಮಾನಿಗಳಿಗೆ ಪಂದ್ಯಾವಳಿಯ ಅತಿದೊಡ್ಡ ಡ್ರಾಗಳಲ್ಲಿ ಒಂದಾಗಬಹುದೆಂದು ನಿರೀಕ್ಷಿಸಲಾಗಿತ್ತು. ಲಾಸ್ ಏಂಜಲೀಸ್ ಪ್ರದೇಶದಲ್ಲಿ ಯುಎಸ್‌ಎ ಒಳಗೊಂಡ ಕ್ವಾರ್ಟರ್ ಫೈನಲ್ ಭಾರಿ ಬೇಡಿಕೆಯನ್ನು ಸೃಷ್ಟಿಸುತ್ತದೆ ಎಂದು ವ್ಯಾಪಕವಾಗಿ ನಿರೀಕ್ಷಿಸಲಾಗಿತ್ತು. ಪೋರ್ಚುಗಲ್ ತಂಡವನ್ನು ತಂಡದಿಂದ ಹೊರಗುಳಿದಿರುವುದು ಮರುಮಾರಾಟ ಮಾರುಕಟ್ಟೆಯ ಮೇಲೂ ಪ್ರಮುಖ ಪರಿಣಾಮ ಬೀರಿದೆ. 16ನೇ ಸುತ್ತಿನಲ್ಲಿ ಸ್ಪೇನ್ ಪೋರ್ಚುಗಲ್ ತಂಡವನ್ನು 1–0 ಅಂತರದಿಂದ ಮಣಿಸಿ, 41 ವರ್ಷದ ಸೂಪರ್‌ಸ್ಟಾರ್ ಕ್ರಿಸ್ಟಿಯಾನೊ ರೊನಾಲ್ಡೊ ಅವರ ವಿಶ್ವಕಪ್ ವೃತ್ತಿಜೀವನವನ್ನು ಕೊನೆಗೊಳಿಸಿತು. ಫುಟ್ಬಾಲ್ನ ಅತಿದೊಡ್ಡ ಜಾಗತಿಕ ಐಕಾನ್ಗಳಲ್ಲಿ ಒಬ್ಬರು ಇನ್ನು ಮುಂದೆ ಪಂದ್ಯಾವಳಿಯಲ್ಲಿ ಇಲ್ಲದಿರುವುದರಿಂದ, ನಂತರದ ಹಂತಗಳಿಗೆ ಬೇಡಿಕೆ ಗಮನಾರ್ಹವಾಗಿ ಕಡಿಮೆಯಾಗಿದೆ. ಮರುಮಾರಾಟ ಮಾರುಕಟ್ಟೆಯಲ್ಲಿ ಲಭ್ಯವಿರುವ ಟಿಕೆಟ್ಗಳ ಸಂಖ್ಯೆ ಹೆಚ್ಚುತ್ತಿರುವುದು ಬೆಲೆಗಳನ್ನು ಮತ್ತಷ್ಟು ಕಡಿಮೆ ಮಾಡಿದೆ. ಜೂನ್ 11 ರಂದು ಪಂದ್ಯಾವಳಿ ಪ್ರಾರಂಭವಾದಾಗ ಸುಮಾರು 28,300 ಟಿಕೆಟ್ಗಳಿಗೆ ಹೋಲಿಸಿದರೆ, ಪ್ರಸ್ತುತ ಸುಮಾರು 49,500 ಟಿಕೆಟ್ಗಳನ್ನು ಮರುಮಾರಾಟಕ್ಕೆ ಪಟ್ಟಿ ಮಾಡಲಾಗಿದೆ ಎಂದು ಸೀಟ್ಪಿಕ್ ವರದಿ ಮಾಡಿದೆ. ಹೆಚ್ಚಿದ ಪೂರೈಕೆಯು ಮಾರಾಟಗಾರರನ್ನು ಬೆಲೆಗಳನ್ನು ಕಡಿಮೆ ಮಾಡಲು ಒತ್ತಾಯಿಸಿದೆ. ಟಿಕ್ಪಿಕ್ ಪ್ರಕಾರ, ಬೆಲ್ಜಿಯಂ ವಿರುದ್ಧ ಸ್ಪೇನ್ನ ಕ್ವಾರ್ಟರ್–ಫೈನಲ್ಗೆ ಲಭ್ಯವಿರುವ ಅಗ್ಗದ ಟಿಕೆಟ್ ಸುಮಾರು $2,950 ರಿಂದ ಸುಮಾರು $1,200ಕ್ಕೆ ಇಳಿದಿದೆ. ಸೀಟ್ಪಿಕ್ನ ಅಂಕಿಅಂಶಗಳು ಕ್ವಾರ್ಟರ್–ಫೈನಲ್ ಪಂದ್ಯಗಳ ಸರಾಸರಿ ಮರುಮಾರಾಟ ಬೆಲೆಗಳು ಕೇವಲ ಮೂರು ದಿನಗಳಲ್ಲಿ ಶೇಕಡಾ 50.4 ರಷ್ಟು ಕುಸಿದಿವೆ ಎಂದು ಸೂಚಿಸುತ್ತವೆ.

